ಪ್ಯಾನ್ ಇಂಡಿಯಾ ನಟಿ ರಶ್ಮಿಕಾ ಮಂದಣ್ಣ ಅವರು ಅಂತಾರಾಷ್ಟ್ರೀಯ ಮಟ್ಟದಲ್ಲಿ ಮಿಂಚುತ್ತಿದ್ದಾರೆ. ಭಾರತದಲ್ಲಿ ಮಾತ್ರವಲ್ಲದೇ ವಿದೇಶದಲ್ಲೂ ಅವರಿಗೆ ಅಭಿಮಾನಿಗಳು ಇದ್ದಾರೆ. ಅದಕ್ಕೆ ಹಲವು ಉದಾಹರಣೆಗಳು ಸಿಗುತ್ತವೆ. ಜಪಾನ್‌ನ ಟೋಕಿಯೋದಲ್ಲಿ ಮೇ 23ರಂದು ನಡೆಯಲಿರುವ ಪ್ರತಿಷ್ಠಿತ 10ನೇ ಗ್ಲೋಬಲ್ ಅನಿಮೆ ಅವಾರ್ಡ್ಸ್ ಸಮಾರಂಭದಲ್ಲಿ ರಶ್ಮಿಕಾ ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಇದು ರಶ್ಮಿಕಾ ಮಂದಣ್ಣ ಅವರ ಅಭಿಮಾನಿಗಳಿಗೆ ಹೆಮ್ಮೆತಂದಿದೆ.



BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ಅಹಿಂದ ಸಚಿವರ ನಿದ್ದೆಗೆಡಿಸಿದ ಸಿದ್ದರಾಮಯ್ಯ ಮೌನ

ಬೆಂಗಳೂರು: ಕರ್ನಾಟಕ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆಯ ಕೂಗು ಮತ್ತೆ ಜೋರಾಗುವ ಎಲ್ಲ ಲಕ್ಷಣಗಳು ಕಾಣಿಸುತ್ತಿದ್ದು, ಈ ಬೆಳವಣಿಗೆಗಳ ಮಧ್ಯೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೌನ ಈಗ ಅಹಿಂದ ಸಚಿವರ ನಿದ್ದೆಗೆಡಿಸಿದೆ. ಸತತ ಸಭೆಗಳ ನಂತರವೂ ಸಿಎಂ ಯಾವುದೇ ಸ್ಪಷ್ಟನೆ ನೀಡಿಲ್ಲ. ಅಲ್ಲದೆ, ಸಿಎಂ ಬಣದ ಸಚಿವರ ರಹಸ್ಯ ಸಭೆಯಲ್ಲಿ ಕೂಡ ಅವರು ಮುಕ್ತವಾಗಿ ಮಾತನಾಡಿಲ್ಲ ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಆತಂಕಕ್ಕೊಳಗಾಗಿರುವ ಅಹಿಂದ ಸಚಿವರು ಈಗ ಹೈಕಮಾಂಡ್ ಮೊರೆ ಹೋಗಿದ್ದಾರೆ.

ಇತ್ತೀಚೆಗೆ ಸಚಿವ ಹೆಚ್.ಸಿ.ಮಹದೇವಪ್ಪ, ಸತೀಶ್ ಜಾರಕಿಹೊಳಿ, ಡಾ.ಜಿ.ಪರಮೇಶ್ವರ್, ಜಮೀರ್ ಅಹ್ಮದ್ ಖಾನ್ ಮತ್ತು ಕೆ.ಎನ್.ರಾಜಣ್ಣ ಸೇರಿದಂತೆ ಪ್ರಮುಖ ಅಹಿಂದ ನಾಯಕರು ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಸುದೀರ್ಘ ಚರ್ಚೆ ನಡೆಸಿದ್ದರು. ರಾಜ್ಯ ರಾಜಕಾರಣದ ವಸ್ತುಸ್ಥಿತಿಯನ್ನು ಮನವರಿಕೆ ಮಾಡಿಕೊಡಲು ಈ ನಾಯಕರು ಪ್ರಯತ್ನಿಸಿದರೂ, ಸಿಎಂ ಸಿದ್ದರಾಮಯ್ಯ ಮಾತ್ರ ಮನಬಿಚ್ಚಿ ಮಾತನಾಡದೆ ಮೌನಕ್ಕೆ ಶರಣಾಗಿದ್ದರು. ಸೀಕ್ರೆಟ್ ಮೀಟಿಂಗ್‌ನಲ್ಲೂ ಸಿಎಂ ಕಡೆಯಿಂದ ಯಾವುದೇ ಭರವಸೆ ಸಿಗದ ಕಾರಣ, ಸಿದ್ದರಾಮಯ್ಯ ಬಣದ ಸಚಿವರಿಗೆ ಒಳಗಿಂದೊಳಗೆ ಏನೋ ನಡೆಯುತ್ತಿದೆ ಎಂಬ ಅನುಮಾನ ಶುರುವಾಗಿದೆ.

ಸಿಎಂ ಮೌನದಿಂದ ಕಂಗೆಟ್ಟ ಸತೀಶ್ ಜಾರಕಿಹೊಳಿ ಮತ್ತು ಮಹದೇವಪ್ಪ ತುರ್ತಾಗಿ ದೆಹಲಿಗೆ ತೆರಳಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಸುರ್ಜೇವಾಲ ಅವರನ್ನು ಭೇಟಿಯಾಗಿದ್ದಾರೆ. ಒಂದು ವೇಳೆ ರಾಜ್ಯದಲ್ಲಿ ನಾಯಕತ್ವ ಬದಲಾವಣೆಯಾದರೆ ಅಹಿಂದ ನಾಯಕರ ಭವಿಷ್ಯವೇನು? ತಮ್ಮ ಸ್ಥಾನಮಾನಗಳು ರಕ್ಷಣೆಯಾಗುತ್ತವೆಯೇ? ಎಂಬ ಬಗ್ಗೆ ಸ್ಪಷ್ಟತೆ ಕೇಳಿದ್ದಾರೆ ಎನ್ನಲಾಗಿದೆ. ವಿಶೇಷವೆಂದರೆ, ಸತೀಶ್ ಜಾರಕಿಹೊಳಿ ಅವರು ಕೆಪಿಸಿಸಿ ಅಧ್ಯಕ್ಷ ಸ್ಥಾನದ ಮೇಲೆ ಕಣ್ಣಿಟ್ಟಿದ್ದು, ಡಿಕೆಶಿಗೆ ನೀಡಿದಂತೆ ತಮಗೂ ಅಧಿಕಾರ ನೀಡಬೇಕು ಎಂಬ ಬೇಡಿಕೆಯನ್ನು ಹೈಕಮಾಂಡ್ ಮುಂದಿಟ್ಟಿದ್ದಾರೆ ಎನ್ನಲಾಗಿದೆ.

ಏತನ್ಮಧ್ಯೆ, ಕಾಂಗ್ರೆಸ್ ಹೈಕಮಾಂಡ್‌ನಿಂದ ಡಿಕೆ ಶಿವಕುಮಾರ್‌ಗೆ ಬಿಗ್ ಬರ್ತ್‌ಡೇ ಗಿಫ್ಟ್ ಸಿಗಲಿದೆ ಎಂಬ ಊಹಾಪೋಹಗಳ ಬಗ್ಗೆ ಗೃಹ ಸಚಿವ ಜಿ ಪರಮೇಶ್ವರ ನೀಡಿರುವ ಪ್ರತಿಕ್ರಿಯೆ ಕೂಡ ಕುತೂಹಲಕ್ಕೆ ಕಾರಣವಾಗಿದೆ. ಇಷ್ಟು ದಿನ "ಸಿಎಂ ಬದಲಾವಣೆ ಇಲ್ಲ" ಎನ್ನುತ್ತಿದ್ದ ಪರಮೇಶ್ವರ್, ಈಗ "ಹೈಕಮಾಂಡ್ ನಿರ್ಧಾರವೇ ಅಂತಿಮ" ಎಂದಿರುವುದು ಗೊಂದಲವನ್ನು ಮತ್ತಷ್ಟು ಹೆಚ್ಚಿಸಿದೆ. ಮೇ 15ರ ಡಿಕೆಶಿ ಹುಟ್ಟುಹಬ್ಬದ ವೇಳೆಗೆ ಹೈಕಮಾಂಡ್ ಏನಾದರೂ 'ಗಿಫ್ಟ್' ನೀಡಲಿದೆಯೇ ಎಂಬ ಚರ್ಚೆ ಜೋರಾಗಿದ್ದು, ಅಸ್ತಿತ್ವ ಉಳಿಸಿಕೊಳ್ಳಲು ಅಹಿಂದ ನಾಯಕರು ಈಗಲೇ ದಾಳ ಉರುಳಿಸುತ್ತಿದ್ದಾರೆ.

## 38.2 ಡಿಗ್ರಿಯಾಯ್ತು ತಾಪಮಾನ

ಬೆಂಗಳೂರು: ನಗರದಲ್ಲಿ ತಾಪಮಾನ ನಿರಂತರವಾಗಿ ಏರಿಕೆಯಾಗುತ್ತಿದ್ದು, ಜನರಿಗೆ ತೀವ್ರ ಅಸಹನೀಯ ಪರಿಸ್ಥಿತಿ ಉಂಟಾಗಿದೆ. ವಿಶೇಷವಾಗಿ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶದಲ್ಲಿ 38.2ಡಿಗ್ರಿ ಗರಿಷ್ಠ ತಾಪಮಾನ ದಾಖಲಾಗಿರುವುದು, ಈ ಋತುವಿನ ತಾಪಮಾನದ ತೀವ್ರತೆಯನ್ನು ಸ್ಪಷ್ಟವಾಗಿ ತೋರಿಸುತ್ತದೆ.

ನಗರ ಪ್ರದೇಶದಲ್ಲಿಯೂ 36 ಡಿಗ್ರಿಕ್ಕಿಂತ ಹೆಚ್ಚು ತಾಪಮಾನ ದಾಖಲಾಗಿದ್ದು, ಸಾಮಾನ್ಯ ಮಟ್ಟಕ್ಕಿಂತ ಹೆಚ್ಚಿನ ಬಿಸಿಲು ಜನಜೀವನವನ್ನು ಕಂಗೆಡಿಸುತ್ತಿದೆ.

ಐಎಂಡಿ ಮಾಹಿತಿ ಪ್ರಕಾರ, ಮುಂದಿನ 36 ಗಂಟೆಗಳಲ್ಲಿ ತಾಪಮಾನವು ಇನ್ನೂ 2–3 ಡಿಗ್ರಿ ಸೆಲ್ಸಿಯಸ್ ಹೆಚ್ಚಾಗುವ ಸಾಧ್ಯತೆ ಇದೆ ಎಂದು ಮುನ್ಸೂಚನೆ ನೀಡಿದೆ.

ಗಾಳಿ ವ್ಯತ್ಯಾಸ , ಸ್ಥಳೀಯ ಸಂವೇಗ ಮತ್ತು ಇತರ ವ್ಯವಸ್ಥೆಗಳ ಪರಿಣಾಮವಾಗಿ ಬುಧವಾರ ಅಥವಾ ಗುರುವಾರದಿಂದ ಬೆಂಗಳೂರಿನಲ್ಲಿ ಮಳೆಯಾಗುವ ಸಾಧ್ಯತೆ ಇದೆ ಎಂದು ಐಎಂಡಿ ಬೆಂಗಳೂರು ನಿರ್ದೇಶಕ ಎನ್ ಪುವಿಯರಸನ್ ತಿಳಿಸಿದ್ದಾರೆ. ಈ ಮಳೆ ತಾತ್ಕಾಲಿಕವಾಗಿ ಬಿಸಿಲಿನಿಂದ ಸ್ವಲ್ಪ ನಿರಾಳ ನೀಡಬಹುದಾದರೂ, ನಂತರ ಮತ್ತೆ ತಾಪಮಾನ ಏರಿಕೆಯಾಗುವ ಸಾಧ್ಯತೆ ಇದೆ ಎನ್ನಲಾಗಿದೆ.



ಪ್ರಧಾನಿ ನರೇಂದ್ರ ಮೋದಿ ಅವರು ಎರಡು ದಿನಗಳ ಕಾಲ ಸಿಕ್ಕಿಂ ಪ್ರವಾಸದಲ್ಲಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ಪ್ರಚಾರ ಮುಗಿಸಿ ಪ್ರಧಾನಿ ನರೇಂದ್ರ ಮೋದಿ ಸಿಕ್ಕಿಂಗೆ ಆಗಮಿಸಿದ್ದಾರೆ. ಗ್ಯಾಂಗ್‌ಟಕ್‌ನಲ್ಲಿ ಮಕ್ಕಳೊಂದಿಗೆ ಫುಟ್‌ಬಾಲ್ ಆಡಿರುವ ಫೋಟೋಗಳನ್ನು ಖುದ್ದಾಗಿ ಪ್ರಧಾನಿಯವರೇ ತಮ್ಮ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಗ್ಯಾಂಗ್‌ಟಕ್‌ನಲ್ಲಿ ಒಂದು ಸುಂದರವಾದ ಬೆಳಗ್ಗೆಯಲ್ಲಿ ನನ್ನ ಯುವ ಸ್ನೇಹಿತರೊಂದಿಗೆ ಫುಟ್ಬಾಲ್ ಆಡುವುದಕ್ಕಿಂತ ಖುಷಿ ಬೇರೇನೂ ಇಲ್ಲ ಎಂದು ಬರೆದುಕೊಂಡಿದ್ದಾರೆ.

# ಮತ್ತೆ ದಲಿತ ಸಿಎಂ ಕೂಗು

ಬೆಂಗಳೂರು: ಮೇ 15ರ ಒಳಗಡೆ ಕಾಂಗ್ರೆಸ್ ಹೈಕಮಾಂಡ್ ಡಿಕೆ ಶಿವಕುಮಾರ್ ಅವರಿಗೆ ಗಿಫ್ಟ್ ನೀಡಲಿದ್ದಾರೆ ಎಂದು ಡಿಕೆ ಬಣದ ಶಾಸಕರು ಹೇಳುತ್ತಿದ್ದರೆ ಮತ್ತೊಂದು ಕಡೆ ಸಿದ್ದರಾಮಯ್ಯ ಬೆಂಬಲಿಗ ಶಾಸಕರು ಮುಂದೆ ಕರ್ನಾಟಕದಲ್ಲಿ ದಲಿತರು ಮುಖ್ಯಮಂತ್ರಿಯಾಗಬೇಕೆಂದು ಬಹಿರಂಗವಾಗಿ ಹೇಳಿಕೆ ನೀಡಲು ಆರಂಭಿಸಿದ್ದಾರೆ.

ಅಧಿಕಾರ ಮುಂದುವರಿಸಲು ಅಥವಾ ಪದತ್ಯಾಗ ಮಾಡಲು ಸಿದ್ದರಾಮಯ್ಯನವರು ಮಾನಸಿಕವಾಗಿ ಸಿದ್ಧರಾಗಿದ್ದಾರೆ. ಮುಂದೆ ರಾಜ್ಯದಲ್ಲಿ ದಲಿತ ಮುಖ್ಯಮಂತ್ರಿ ಆಗಬೇಕು ಎನ್ನುವುದು ನಮ್ಮ ಪ್ರಬಲ ಒತ್ತಾಯವಾಗಿದೆ ಎಂದು ಮಾಜಿ ಸಚಿವ ಕೆಎನ್ ರಾಜಣ್ಣ ಸ್ಫೋಟಕ ಹೇಳಿಕೆ ನೀಡಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ರಾಜಣ್ಣ, "ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮುಕ್ತ ಮನಸ್ಸಿನಲ್ಲಿದ್ದಾರೆ. ಹೈಕಮಾಂಡ್ ಮತ್ತು ರಾಹುಲ್ ಗಾಂಧಿ ಅವರು ನೀಡುವ ಯಾವುದೇ ಸೂಚನೆಯನ್ನು ಪಾಲಿಸಲು ಅವರು ಸಿದ್ಧರಿದ್ದಾರೆ. ಅಧಿಕಾರ ಮುಂದುವರಿಸಲು ಅಥವಾ ಪದತ್ಯಾಗ ಮಾಡಲು ಅವರು ಮಾನಸಿಕವಾಗಿ ಸಿದ್ಧರಾಗಿದ್ದು, ಪಕ್ಷದ ಹಿತದೃಷ್ಟಿಯಿಂದ ಹೈಕಮಾಂಡ್ ಕೈಗೊಳ್ಳುವ ನಿರ್ಧಾರಕ್ಕೆ ಬದ್ಧರಾಗಿರುವುದಾಗಿ ತಿಳಿಸಿದ್ದಾರೆ" ಎಂದು



ಹೇಳಿದರು.

ರಾಜ್ಯದಲ್ಲಿ ಮುಂದಿನ ಬಾರಿ ದಲಿತ ಸಮುದಾಯದ ನಾಯಕರು ಮುಖ್ಯಮಂತ್ರಿಯಾಗಬೇಕು ಎಂಬುದು ನಮ್ಮ ಬೇಡಿಕೆ. ಈ ವಿಚಾರವನ್ನು ಈಗಾಗಲೇ ಹೈಕಮಾಂಡ್ ಗಮನಕ್ಕೆ ತರಲಾಗಿದೆ. ಇದರೊಂದಿಗೆ ಸಚಿವ ಸಂಪುಟ ಪುನಾರಚನೆಯೂ ಆಗಬೇಕಿದೆ. ಹೊಸಬರಿಗೆ ಸಚಿವ ಸ್ಥಾನ ನೀಡುವ ಮೂಲಕ ಆಡಳಿತದಲ್ಲಿ ಹೊಸ ಬದಲಾವಣೆ ತರಬೇಕಿದೆ ಎಂದು ರಾಜಣ್ಣ ಅಭಿಪ್ರಾಯಪಟ್ಟರು.

ಸಿದ್ದರಾಮಯ್ಯ ಅವರ ನಾಯಕತ್ವದ ಬಗ್ಗೆ ಮಾತನಾಡುತ್ತಾ, 2013–18ರ ಅವಧಿಯ ಸಿದ್ದರಾಮಯ್ಯ ಅವರಿಗೂ ಮತ್ತು ಈಗಿನ ಸಿದ್ದರಾಮಯ್ಯ ಅವರಿಗೂ ಬಹಳ ವ್ಯತ್ಯಾಸವಿದೆ. ಅಹಿಂದ ವರ್ಗದ ನಿರೀಕ್ಷೆಗಳು ಸರಿಯಾಗಿ ಈಡೇರುತ್ತಿಲ್ಲ ಎಂಬ ಅಸಮಾಧಾನ ಆ ವರ್ಗಗಳಲ್ಲಿ ಮೂಡಿದೆ. ನಾವು ನೀಡಿದ್ದ ಭರವಸೆಗಳು ಸರಿಯಾಗಿ ಫಲಪ್ರದವಾಗದ ಕಾರಣ ಜನರ ಮನಸ್ಥಿತಿಯಲ್ಲಿ ಬದಲಾವಣೆಯಾಗಿದೆ ಎಂದು ಮಾರ್ಮಿಕವಾಗಿ ಹೇಳಿದರು.

ರಾಜ್ಯ ಸರ್ಕಾರ ಇನ್ನಷ್ಟು ಕ್ರಿಯಾಶೀಲವಾಗಿ ಕೆಲಸ ಮಾಡಬೇಕಾದರೆ ಪ್ರಸ್ತುತ ಇರುವ ನಾಯಕತ್ವದ ಗೊಂದಲಗಳನ್ನು ಶೀಘ್ರವಾಗಿ ಬಗೆಹರಿಸಬೇಕು. ಹೈಕಮಾಂಡ್ ಗೊಂದಲ ಮುಂದುವರಿಯಲು ಅವಕಾಶ ನೀಡಬಾರದು. ಗೊಂದಲಗಳು ದೀರ್ಘಕಾಲ ಮುಂದುವರಿದರೆ ಅದು ಪಕ್ಷದ ಮೇಲೆ ದೊಡ್ಡ ಮಟ್ಟದ ಡ್ಯಾಮೇಜ್ ಉಂಟುಮಾಡುತ್ತದೆ. ಹೀಗಾಗಿ ಮಾನಸಿಕ ಸ್ಥಿರತೆಯಿಂದ ಕೂಡಿದ ಗಟ್ಟಿಯಾದ ತೀರ್ಮಾನವನ್ನು ಹೈಕಮಾಂಡ್ ತೆಗೆದುಕೊಳ್ಳುವ ವಿಶ್ವಾಸ ನಮಗಿದೆ ಎಂದು ತಿಳಿಸಿದರು. ಮುಂದಿನ ಚುನಾವಣೆಗೆ ಇನ್ನು ಎರಡು ವರ್ಷಗಳ ಸಮಯವಿದೆ. ರಾಜಕಾರಣ ಎಂಬುದು ಕ್ಷಣಕ್ಷಣಕ್ಕೂ ಬದಲಾಗುವಂತದ್ದು. ಮುಂದೆ ಏನಾಗಲಿದೆ ಎಂದು ಈಗಲೇ ಹೇಳಲು ಸಾಧ್ಯವಿಲ್ಲ. ರಾಜಕಾರಣದಲ್ಲಿ ಇನ್ನೂ ಬಹಳಷ್ಟು ನೀರು ಹರಿಯಬೇಕಿದೆ.

ಹೈಕಮಾಂಡ್ ಮುಂದೆ ನಾವೇನು ಹೇಳಬೇಕೋ ಅದನ್ನು ಸ್ಪಷ್ಟವಾಗಿ ಹೇಳಿದ್ದೇವೆ. ಅಂತಿಮವಾಗಿ ಹೈಕಮಾಂಡ್ ತೆಗೆದುಕೊಳ್ಳುವ ನಿರ್ಧಾರಕ್ಕೆ ನಾವೆಲ್ಲರೂ ಬದ್ಧರಾಗಬೇಕಿದೆ ಎಂದು ಹೇಳುವ ಮೂಲಕ ಭವಿಷ್ಯದ ರಾಜಕೀಯ ಬೆಳವಣಿಗೆಗಳ ಬಗ್ಗೆ ಕುತೂಹಲ ಉಳಿಸಿದರು.

## ಧಾರ್ಮಿಕ ಸಂಸ್ಥೆಗಳಲ್ಲಿ ಅರಾಜಕತೆ ಇರಬಾರದು

ನವದೆಹಲಿ: ಪ್ರತಿಯೊಂದು ಧಾರ್ಮಿಕ ಸಂಸ್ಥೆಗಳಲ್ಲಿ ನಿಯಮಗಳಿರಬೇಕು, ಅರಾಜಕತೆ ಇರಬಾರದು ಎಂದು ಶಬರಿಮಲೆ ಸೇರಿದಂತೆ ಧಾರ್ಮಿಕ ಸ್ಥಳಗಳಿಗೆ ಸಂಬಂಧಿಸಿದ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ಮಹತ್ವದ ಅಭಿಪ್ರಾಯವನ್ನು ವ್ಯಕ್ತಪಡಿಸಿದೆ.

ಧಾರ್ಮಿಕ ಸಂಸ್ಥೆಯನ್ನು ನಿರ್ವಹಿಸುವ ಹಕ್ಕು ಎಂದರೆ ನಿಯಮ ವ್ಯವಸ್ಥೆಯಿಲ್ಲದೇ ನಡೆಸುವುದು ಎಂದರ್ಥವಲ್ಲ. ಅದರ ಕಾರ್ಯನಿರ್ವಹಣೆಗೆ ಸ್ಪಷ್ಟವಾದ ವಿಧಾನ ಮತ್ತು ಮಾನದಂಡಗಳು ಇರಬೇಕು ಎಂದು ಹೇಳಿದೆ.

ಕೇರಳದ ಶಬರಿಮಲೆ ದೇವಸ್ಥಾನ ಸೇರಿದಂತೆ ಧಾರ್ಮಿಕ ಸ್ಥಳಗಳಲ್ಲಿ ಮಹಿಳೆಯರ ವಿರುದ್ಧದ ತಾರತಮ್ಯ ಮತ್ತು ಧಾರ್ಮಿಕ ಸ್ವಾತಂತ್ರ್ಯದ ವ್ಯಾಪ್ತಿ ಕುರಿತ ಅರ್ಜಿಗಳ ವಿಚಾರಣೆ ವೇಳೆ 9 ನ್ಯಾಯಾಧೀಶರ ಸಂವಿಧಾನಿಕ ಪೀಠ ಈ ಅಭಿಪ್ರಾಯವನ್ನು ವ್ಯಕ್ತಪಡಿಸಿದೆ. ಸುಪ್ರೀಂ ಕೋರ್ಟ್ ಸಾಂವಿಧಾನಿಕ ಪೀಠದಲ್ಲಿ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಬಿ.ವಿ ನಾಗರತ್ನ, ಎಂ.ಎಂ ಸುಂದರೇಶ್, ಅಹ್ಸನುದ್ದೀನ್ ಅಮಾನುಲ್ಲಾ, ಅರವಿಂದ್ ಕುಮಾರ್, ಆಗಸ್ಟೀನ್ ಜಾರ್ಜ್ ಮಸಿಹ್, ಪ್ರಸನ್ನ ಬಿ ವರಾಳೆ, ಆರ್ ಮಹಾದೇವನ್ ಮತ್ತು ಜೋಯ್ಮಲ್ಯ ಬಾಗ್ಚಿ ಅವರಿದ್ದರು.

ಇಸ್ಲಾಮ್‌ನಲ್ಲಿ, ಮರಣದ ನಂತರ ಸಂತರ ಸ್ಥಾನಮಾನದ ಬಗ್ಗೆ ವಿಭಿನ್ನ ಅಭಿಪ್ರಾಯಗಳಿವೆ, ಆದರೆ ಸೂಫಿ ಪರಂಪರೆಯಲ್ಲಿ ಸಂತರ ಸಮಾಧಿ ಇರುವ ಸ್ಥಳಕ್ಕೆ ಅಪಾರ ಭಕ್ತಿ ಮತ್ತು ಗೌರವ ಇದೆ ಎಂದು ಹೇಳಿದರು.

## ರಾಜತಾಂತ್ರಿಕ ಪ್ರಸ್ತಾಪ ತಿರಸ್ಕಾರ

ವಾಷಿಂಗ್ಟನ್ (ಅಮೆರಿಕ): ಪಶ್ಚಿಮ ಏಷ್ಯಾ ಸಂಘರ್ಷವನ್ನು ಶಮನಗೊಳಿಸುವ ಗುರಿಯನ್ನು ಟೆಹ್ರಾನ್ ಹೊಂದಿದ್ದರೂ ಅಮೆರಿಕ ಅಧ್ಯಕ್ಷ ರಾಜತಾಂತ್ರಿಕ ಪ್ರಸ್ತಾಪವನ್ನು ತಿರಸ್ಕರಿಸಲು ಮುಂದಾಗಿದ್ದಾರೆ ಎಂದು ಸಿಎನ್‌ಎನ್ ವರದಿ ಮಾಡಿದೆ.

ಇರಾನ್ ಹಾರ್ಮುಜ್ ಜಲಸಂಧಿಯ ಸಮುದ್ರ ಮಾರ್ಗ ಸಂಚಾರ ಪುನರ್ ಸ್ಥಾಪಿಸುವ ಪ್ರಸ್ತಾವನೆ ಹೊಂದಿದ್ದು, ಟೆಹ್ರಾನ್ ತನ್ನ ಪರಮಾಣು ಕಾರ್ಯಕ್ರಮದ ಕುರಿತಾದ ಚರ್ಚೆಗಳನ್ನು ಮುಂದೂಡಲು ಬಯಸುತ್ತಿದೆ ಎಂದು ವರದಿಯಾಗಿದೆ. ಸೋಮವಾರ ರಾಷ್ಟ್ರೀಯ ಭದ್ರತಾ ಸಹಾಯಕರೊಂದಿಗೆ ಉನ್ನತ ಮಟ್ಟದ ಸಭೆಯಲ್ಲಿ ಅಮೆರಿಕ ಅಧ್ಯಕ್ಷರು ತಮ್ಮ ಆಕ್ಷೇಪಣೆಯನ್ನು ವ್ಯಕ್ತಪಡಿಸಿದ್ದಾರೆ ಎಂದು ಪರಿಸ್ಥಿತಿಯ ಬಗ್ಗೆ ಅರಿತಿರುವ ಮೂಲಗಳು ಸಿಎನ್‌ಎನ್‌ಗೆ ತಿಳಿಸಿವೆ.

ಈ ಪ್ರಸ್ತಾವನೆಯನ್ನು ಟ್ರಂಪ್ ಸ್ವೀಕರಿಸುವ ಸಾಧ್ಯತೆಯಿಲ್ಲ ಎಂದು ಮೂಲ ತಿಳಿಸಿದೆ. ಇರಾನಿನ ಪರಮಾಣು ಪುಷ್ಟೀಕರಣ ಅಥವಾ ಬಾಂಬ್ ದರ್ಜೆಯ ಯುರೇನಿಯಂನ ಸಂಗ್ರಹವನ್ನು ಪರಿಹರಿಸದೆ.

# ಬೆಂಕಿ ಅವಘಡ: ಅಪಾಯದಿಂದ ಪಾರಾದ ಯುವತಿಯರು

ಬೆಂಗಳೂರು: ರಾಜಧಾನಿಯ ನಂದಿನಿ ಲೇಔಟ್‌ನಲ್ಲಿ ತಡರಾತ್ರಿ ಸಂಭವಿಸಿದ ಭೀಕರ ಅಗ್ನಿ ಅವಘಡದಲ್ಲಿ ಪ್ಲಾಸ್ಟಿಕ್ ಗೋಡೌನ್‌ವೊಂದು ಸಂಪೂರ್ಣ ಭಸ್ಮವಾಗಿದ್ದು, ಬೆಂಕಿಯ ಕೆನ್ನಾಲಿಗೆ ಪಕ್ಕದ ಲೇಡಿಸ್ ಪಿಜಿಗೂ ಹಬ್ಬಿದ ಪರಿಣಾಮ ಯುವತಿಯರು ಪ್ರಾಣಾಪಾಯದಿಂದ ಕೂದಲೆಳೆ ಅಂತರದಲ್ಲಿ ಪಾರಾಗಿದ್ದಾರೆ.

ನಂದಿನಿ ಲೇಔಟ್ ವ್ಯಾಪ್ತಿಯ ಪ್ಲಾಸ್ಟಿಕ್ ಗೋಡೌನ್‌ನಲ್ಲಿ ಆಕಸ್ಮಿಕವಾಗಿ ಬೆಂಕಿ ಕಾಣಿಸಿಕೊಂಡಿದೆ. ಪ್ಲಾಸ್ಟಿಕ್ ವಸ್ತುಗಳಿದ್ದ ಕಾರಣ ಬೆಂಕಿ ಕ್ಷಣಾರ್ಧದಲ್ಲಿ ಅಕ್ಕಪಕ್ಕದ ಮನೆಗಳಿಗೆ ವ್ಯಾಪಿಸಿದೆ. ಬೆಂಕಿಯ ತೀವ್ರತೆಗೆ ಮನೆಯ ಮುಂಭಾಗದ ಮರಗಳು ಹಾಗೂ ಕಬ್ಬಿಣದ ಗೇಟ್‌ಗಳು ಕೂಡ ಹೊತ್ತಿ ಉರಿದಿವೆ.





ಗೋಡೌನ್ ಪಕ್ಕದಲ್ಲೇ ಸುಮಾರು 50 ಯುವತಿಯರು ವಾಸವಿದ್ದ ಲೇಡಿಸ್ ಪಿಜಿ ಇತ್ತು. ಬೆಂಕಿಯ ಕೆನ್ನಾಲಿಗೆ ಮತ್ತು ದಟ್ಟ ಹೊಗೆ ಪಿಜಿಯ ಒಳಗೂ ಆವರಿಸುತ್ತಿದ್ದಂತೆ ಯುವತಿಯರು ತೀವ್ರ ಗಾಬರಿಗೊಂಡಿದ್ದಾರೆ. ಹೊರಗೆ ಬರಲು ದಾರಿಯಿಲ್ಲದೆ ಆತಂಕಗೊಂಡ ಕೆಲ ಯುವತಿಯರು ಮೊದಲ ಮಹಡಿಯಿಂದ ಕೆಳಕ್ಕೆ ಜಿಗಿದಿದ್ದಾರೆ. ಇನ್ನೂ ಕೆಲವರು ಪ್ರಾಣ ಉಳಿಸಿಕೊಳ್ಳಲು ಪಿಜಿಯ ಕಾಂಪೌಂಡ್ ಗೋಡೆ ಹಾರಿ ಹೊರಬಂದಿದ್ದಾರೆ.

ಗೋಡೆ ಹಾರುವ ಮತ್ತು ಜಿಗಿಯುವ ಸಂದರ್ಭದಲ್ಲಿ ಕೆಲವು ಯುವತಿಯರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಅದೃಷ್ಟವಶಾತ್ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಘಟನಾ ಸ್ಥಳಕ್ಕೆ ಅಗ್ನಿಶಾಮಕ ದಳದ ಸಿಬ್ಬಂದಿ ಧಾವಿಸಿ ಬೆಂಕಿ ನಂದಿಸುವ ಕಾರ್ಯಾಚರಣೆ ನಡೆಸಿದರು.

ಬೆಂಕಿಯ ಆವೇಶಕ್ಕೆ ಇಡೀ ಗೋಡೌನ್ ಸುಟ್ಟು ಕರಕಲಾಗಿದ್ದು, ಸ್ಥಳೀಯ ನಿವಾಸಿಗಳು ತಡರಾತ್ರಿ ಬೆಚ್ಚಿಬಿದ್ದಿದ್ದರು. ಸದ್ಯ ಪರಿಸ್ಥಿತಿ ನಿಯಂತ್ರಣದಲ್ಲಿದ್ದು, ನಂದಿನಿ ಲೇಔಟ್ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಬೆಂಕಿ ತಗುಲಲು ನಿಖರ ಕಾರಣವೇನು ಎಂಬ ಬಗ್ಗೆ ತನಿಖೆ ನಡೆಸುತ್ತಿದ್ದಾರೆ.

ಗೋಡೌನ್‌ನಲ್ಲಿ ಸಂಭವಿಸಿದ ಬೆಂಕಿ ಅವಘಡದ ಬೆನ್ನಲ್ಲೇ ಈಗ ಮಾಲೀಕ ಮತ್ತು ಸ್ಥಳೀಯ ನಿವಾಸಿಗಳ ನಡುವೆ ಭಾರೀ ಗಲಾಟೆ ಶುರುವಾಗಿದೆ. ಬೆಂಕಿಯ ಅಬ್ಬರಕ್ಕೆ ತಮ್ಮ ಆಸ್ತಿಪಾಸ್ತಿ ಕಳೆದುಕೊಂಡ ಅಕ್ಕಪಕ್ಕದ ನಿವಾಸಿಗಳು ಗೋಡೌನ್ ಮಾಲೀಕನ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ.

ಬೆಂಕಿ ಮನೆಗಳಿಗೆ ಆವರಿಸಿದ್ದರಿಂದ ಗೇಟ್, ಕಿಟಕಿ ಹಾಗೂ ಮನೆಯ ಮುಂಭಾಗದ ವಸ್ತುಗಳು ಸುಟ್ಟು ಕರಕಲಾಗಿವೆ. "ನಿಮ್ಮ ಬೇಜವಾಬ್ದಾರಿಯಿಂದ ನಮ್ಮ ಮನೆಗಳಿಗೆ ಹಾನಿಯಾಗಿದೆ, ನಮಗೆ ತಕ್ಷಣ ಪರಿಹಾರ ಕೊಡಿಸಿ" ಎಂದು ನಿವಾಸಿಗಳು ಮಾಲೀಕನನ್ನು ತರಾಟೆಗೆ ತೆಗೆದುಕೊಳ್ಳುತ್ತಿದ್ದಾರೆ.

# 'ಬೆಂಗಳೂರು ಗ್ಯಾಸ್ ಚೇಂಬರ್ ಆಗದಂತೆ ತಡೆಯಲು ಹಸಿರು ಹೊದಿಕೆ ಹೆಚ್ಚಳ ಅನಿವಾರ್ಯ'

ಬೆಂಗಳೂರು: ವೈಜ್ಞಾನಿಕವಾಗಿ ಪರಿಸರ ಸಮತೋಲನ ಕಾಪಾಡಿಕೊಳ್ಳಲು ಶೇ. 33% ರಷ್ಟು ಹಸಿರು ಹೊದಿಕೆ ಇದ್ದಾಗ ಮಾತ್ರ ಆರೋಗ್ಯಕರ ನಗರವನ್ನು ಕಟ್ಟಲು ಸಾಧ್ಯ, ಬೆಳೆಯುತ್ತಿರುವ ಬೆಂಗಳೂರಿನಲ್ಲಿ ಹಸಿರು ಹೊದಿಕೆ ಕ್ಷೀಣಿಸುತ್ತಿದ್ದು, 1.40 ಕೋಟಿ ಜನಸಂಖ್ಯೆ ಇರುವ ಬೆಂಗಳೂರು ನಗರದಲ್ಲಿ ಕನಿಷ್ಠ 10 ಕೋಟಿ ಮರಗಳನ್ನು ಪೋಷಿಸುವ ಅಗತ್ಯವಿದೆ ಎಂದು ಅರಣ್ಯ, ಪರಿಸರ ಜಾಗೂ ಜೀವಿಶಾಸ್ತ್ರ ಸಚಿವ ಈಶ್ವರ ಬಿ ಖಂಡ್ರೆ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿ ಹಾಗೂ ಅಸರ್ ಸೋಷಿಯಲ್ ಇಂಪ್ಯಾಕ್ಟ್ ಅಡ್ವೈಸರ್ ಸಂಸ್ಥೆಯ ಸಹಯೋಗದಲ್ಲಿ ಇಂದು ನಗರದ ಖಾಸಗಿ ಹೋಟೆಲ್ ನಲ್ಲಿ ಆಯೋಜಿಸಿದ್ದ ಬೆಂಗಳೂರಿನಲ್ಲಿ ತಾಪಮಾನ ವೈಪರೀತ್ಯ ಹಾಗೂ ಅದರ ಪರಿಣಾಮಗಳ ಕುರಿತು ಮಾಧ್ಯಮ ಕಾರ್ಯಾಗಾರವನ್ನು ಉದ್ಘಾಟಿಸಿ



ಮಾತನಾಡಿದ ಅವರು ಒಬ್ಬ ಮನಷ್ಯನಿಗೆ ಉತ್ತಮ ಆಮ್ಲಜನಕ ದೊರಕಲು ಕನಿಷ್ಠ 7 ಮರಗಳು ಇರಬೇಕು ಎಂದು ವಿಜ್ಞಾನ ಪ್ರತಿಪಾದಿಸುತ್ತದೆ ಎಂದರು.

ಬೆಂಗಳೂರಿನ ಪರಿಸರದಲ್ಲಾಗುತ್ತಿರುವ ಬದಲಾವಣೆ ಹಾಗೂ ಅರಣ್ಯ ಇಲಾಖೆಯ ಮುಂದಿನ ಯೋಜನೆಗಳ ಕುರಿತು ಸುದೀರ್ಘವಾಗಿ ಮಾತನಾಡಿದ ಅವರು ಒಂದು ಕಾಲದಲ್ಲಿ 'ನಿವೃತ್ತರ ಸ್ವರ್ಗ' ಹಾಗೂ 'ಹವಾನಿಯಂತ್ರಿತ ನಗರ' ಎಂದು ಖ್ಯಾತಿ ಪಡೆದಿದ್ದ ಬೆಂಗಳೂರು ಇಂದು ಕಾಂಕ್ರೀಟ್ ಜಂಗಲ್ ಆಗಿ ಮಾರ್ಪಡುತ್ತಿರುವುದು ಆತಂಕಕಾರಿ ವಿಷಯವಾಗಿದೆ.

ಬೆಂಗಳೂರು ಇದೇ ರೀತಿಯ ಬೆಳವಣಿಗೆ ಹಾಗೂ ವಾಹನ ದಟ್ಟಣೆ ಹೆಚ್ಚಿಸಿಕೊಂಡಲ್ಲಿ ನವದೆಹಲಿಯಂತೆ 'ಗ್ಯಾಸ್ ಚೇಂಬರ್' ಆಗುವುದನ್ನು ತಪ್ಪಿಸಲು ಹಸಿರು ಹೊದಿಕೆಯನ್ನು ಹೆಚ್ಚಿಸುವ ತತ್ ಕ್ಷಣದ ಅಗತ್ಯವಿದೆ ಎಂದು ಹೇಳಿದರು.

ಕೆಂಪೇಗೌಡರು ನಿರ್ಮಿಸಿದ ಹಸಿರು ಬೆಂಗಳೂರನ್ನು ಮರಳಿ ಪಡೆಯಲು ಅರಣ್ಯ ಇಲಾಖೆ ಬದ್ಧವಾಗಿದೆ. ನಗರದ ಸುತ್ತಮುತ್ತಲ ಹಸಿರು ಹೊದಿಕೆಯನ್ನು ಮರುಸ್ಥಾಪಿಸಲು ಮತ್ತು ಪರಿಸರ ಮಾಲಿನ್ಯ ತಡೆಗಟ್ಟಲು ಕಠಿಣ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಸಚಿವರು ಭರವಸೆ ನೀಡಿದರು.

ಬೆಂಗಳೂರಿನಲ್ಲಿದ್ದ ಸುಮಾರು 250 ಕೆರೆಗಳಲ್ಲಿ ಹಲವು ಅಭಿವೃದ್ಧಿಯಲ್ಲಿ ಮಾಯವಾಗಿದ್ದು, ಇನ್ನೂ ಕೆಲವು ಇಂದು ತ್ಯಾಜ್ಯ ನೀರು ಸೇರಿ ಕಲುಷಿತಗೊಂಡಿವೆ. ಇದರಿಂದ ಜಲ ಮತ್ತು ವಾಯು ಮಾಲಿನ್ಯ ಉಂಟಾಗುತ್ತಿದ್ದು, ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಸಂಚಾರ ದಟ್ಟಣೆ ಮತ್ತು ವಾಹನಗಳ ಕಾರ್ಬನ್ ಡೈಆಕ್ಸೈಡ್ ಹೊರಸೂಸುವಿಕೆಯಿಂದ ತಾಪಮಾನ ಏರುತ್ತಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಅರಣ್ಯ ಇಲಾಖೆಯ ಸಾಧನೆಯನ್ನು ಹಂಚಿಕೊಂಡ ಸಚಿವರು, "ಕಳೆದ ಮೂರು ವರ್ಷಗಳಲ್ಲಿ ರಾಜ್ಯದಾದ್ಯಂತ ಸುಮಾರು 11 ಕೋಟಿ ಸಸಿಗಳನ್ನು ನೆಡಲಾಗಿದೆ. ಇವುಗಳಲ್ಲಿ ಎಷ್ಟು ಸಸಿಗಳು ಬದುಕುಳಿದಿವೆ ಎಂಬುದರ ಬಗ್ಗೆ ವೈಜ್ಞಾನಿಕ ಸಮೀಕ್ಷೆ ನಡೆಸಿ, ಆ ವರದಿಯನ್ನು ಇಲಾಖೆಯ ವೆಬ್ಸೈಟ್ನಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಅಪ್ಲೋಡ್ ಮಾಡಲು ಸೂಚನೆ ನೀಡಿದ್ದೇನೆ," ಎಂದು ಮಾಹಿತಿ ನೀಡಿದರು.

ಬೆಂಗಳೂರಿನ 'ಶ್ವಾಸ ತಾಣ'ಗಳ ರಕ್ಷಣೆಗೆ ಅರಣ್ಯ ಇಲಾಖೆ ಮೆಗಾ ಪ್ಲಾನ್ ರೂಪಿಸಿದ್ದು, ನಗರದ ಆಯಕಟ್ಟಿನ ಪ್ರದೇಶಗಳಾದ ಕಾಡುಗೋಡಿ ಮತ್ತು ತುರಹಳ್ಳಿ ಭಾಗದಲ್ಲಿ ಅಕ್ರಮವಾಗಿ ಒತ್ತುವರಿಯಾಗಿದ್ದ ಸುಮಾರು 10,000 ಕೋಟಿ ಮೌಲ್ಯದ ಅರಣ್ಯ ಭೂಮಿಯನ್ನು ಮರುವಶಪಡಿಸಿಕೊಳ್ಳಲಾಗಿದೆ.

ಸಿಲಿಕಾನ್ ಸಿಟಿಯಲ್ಲಿ ದಿನೇ ದಿನೇ ಕುಸಿಯುತ್ತಿರುವ ಹಸಿರು ಹೊದಿಕೆಯನ್ನು ಹೆಚ್ಚಿಸಲು ಮತ್ತು ಪರಿಸರ ಸಮತೋಲನ ಕಾಯ್ದುಕೊಳ್ಳಲು ಕರ್ನಾಟಕ ಅರಣ್ಯ ಇಲಾಖೆ ಐತಿಹಾಸಿಕ ಹೆಜ್ಜೆ ಇರಿಸಿದೆ.

ಭಾರತ ಸಾರಥಿ
29/04/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಐಜಿಪಿ ಹರ್ಷ.ಪಿ.ಎಸ್‌ರಿಗೆ ಪಿಎಚ್‌ಡಿ ಪದವಿ

ಬೆಂಗಳೂರು

ಬಳ್ಳಾರಿ ವಲಯದ ಪೊಲೀಸ್ ಮಹಾನಿರ್ದೇಶಕರಾದ ಹರ್ಷ ಪಿ.ಎಸ್ ಅವರಿಗೆ ವನ್ಯಜೀವಿ ಮತ್ತು ನಿರ್ವಹಣಾ ವಿಭಾಗದಲ್ಲಿ ಸಂಶೋಧನೆ ನಡೆಸಿದ ಹಿನ್ನೆಲೆಯಲ್ಲಿ ಡಾಕ್ಟರ್ ಆಫ್ ಫಿಲಾಸಫಿ (ಪಿಎಚ್‌ಡಿ) ಪದವಿ ಲಭಿಸಿದೆ.



ಕುವೆಂಪು ವಿಶ್ವವಿದ್ಯಾನಿಲಯ ವತಿಯಿಂದ ಮೇ 6ರಂದು ನಡೆಯಲಿರುವ ಘಟಿಕೋತ್ಸವ ಸಮಾರಂಭದಲ್ಲಿ ಈ ಪದವಿಯನ್ನು ಅಧಿಕೃತವಾಗಿ ಪ್ರದಾನ ಮಾಡಲಾಗುತ್ತಿದೆ. ವಿಶ್ವವಿದ್ಯಾಲಯದ ಸಿಂಡಿಕೇಟ್ ಈಗಾಗಲೇ ಅವರ ಸಂಶೋಧನೆಯನ್ನು ಅನುಮೋದಿಸಿದೆ.

ಹರ್ಷ ಪಿ.ಎಸ್ ಅವರು ವಿಶ್ವವಿದ್ಯಾಲಯದ ವನ್ಯಜೀವಿ ಮತ್ತು ನಿರ್ವಹಣಾ ವಿಭಾಗದ ಪ್ರಾಧ್ಯಾಪಕರಾದ ಡಾ. ವಿಜಯ ಕುಮಾರ್ ಅವರ ಮಾರ್ಗದರ್ಶನದಲ್ಲಿ ಐದು ವರ್ಷಗಳ ಕಾಲ ಕ್ಷೇತ್ರ ಆಧಾರಿತ ಸಂಶೋಧನೆ ನಡೆಸಿದ್ದಾರೆ. "ನಾಗರಹೊಳೆ, ಬಂಡೀಪುರ ಮತ್ತು ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶಗಳಲ್ಲಿ ಹುಲಿಗಳ ಜನಸಂಖ್ಯೆಯ ಸ್ಥಿರತೆ ಮಾನವ–ಹುಲಿ ಸಂಘರ್ಷದ ವಿಶೇಷ ಉಲ್ಲೇಖದೊಂದಿಗೆ" ಎಂಬ ಶೀರ್ಷಿಕೆಯಡಿಯಲ್ಲಿ ಅವರ ಪ್ರಬಂಧ ರೂಪುಗೊಂಡಿದೆ.

ಈ ಸಂಶೋಧನೆಯಲ್ಲಿ ದೊಡ್ಡ ಪ್ರಮಾಣದ ಕ್ಯಾಮೆರಾ ಟ್ರ್ಯಾಪಿಂಗ್, ಸಂಘರ್ಷ ಪ್ರದೇಶಗಳ ವಿಶ್ಲೇಷಣೆ ಸೇರಿದಂತೆ ವ್ಯಾಪಕ ಕ್ಷೇತ್ರಕಾರ್ಯವನ್ನು ಒಳಗೊಂಡಿದ್ದು, ಹುಲಿ ಸಂರಕ್ಷಣೆ ಮತ್ತು ಮಾನವ–ವನ್ಯಜೀವಿ ಸಂಘರ್ಷದ ಅಧ್ಯಯನಕ್ಕೆ ಮಹತ್ವದ ಕೊಡುಗೆ ನೀಡಿದೆ.

ಪ್ರಸ್ತುತ ಬಳ್ಳಾರಿ ಪೊಲೀಸ್ ವಲಯದ ಐಜಿಪಿಯಾಗಿರುವ ಹರ್ಷ ಪಿ.ಎಸ್ ಅವರು ಈ ಹಿಂದೆ ವಾರ್ತಾ ಇಲಾಖೆಯಲ್ಲಿ ಆಯುಕ್ತರಾಗಿ ಸೇವೆ ಸಲ್ಲಿಸಿದ್ದರೂ ಗಮನಾರ್ಹವಾಗಿದೆ.

# ಕೋಲಾರ ಜಿಲ್ಲೆಯಲ್ಲಿ ನ್ಯಾಯಾಂಗ ಸಾಧನೆಗೆ ಅಶ್ವಿನಿ ಎನ್.ಶ್ಯಾಮ್‌ಪ್ರಸಾದ್ ಅವರಿಗೆ ಸನ್ಮಾನ

ಕೋಲಾರ

ವಿಶ್ವಕಾರ್ಮಿಕರ ಒಕ್ಕೂಟ (ನೋಂ) ಗೌರವಾಧ್ಯಕ್ಷರಾದ ಡಾ. ಗಂಡಸಿ ಸದಾನಂದ ಸ್ವಾಮಿ ಅವರ ಸೂಚನೆ ಮೇರೆಗೆ, ಕರ್ನಾಟಕ ಸಿವಿಲ್ ನ್ಯಾಯಾಧೀಶರಾಗಿ ಕೋಲಾರ ಜಿಲ್ಲೆಯಿಂದ ಆಯ್ಕೆಯಾದ ಏಕೈಕ ಮಹಿಳಾ ಅಭ್ಯರ್ಥಿ ಶ್ರೀಮತಿ ಅಶ್ವಿನಿ ಎನ್. ಶ್ಯಾಮ್ ಪ್ರಸಾದ್ ಅವರನ್ನು ವಿಶ್ವಕಾರ್ಮಿಕರ ಒಕ್ಕೂಟ (ನೋಂ) ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘಟನೆಯ ಪದಾಧಿಕಾರಿಗಳು, ಅಶ್ವಿನಿ ಅವರ ಸಾಧನೆ ಯುವತಿಯರಿಗೆ



ಪ್ರೇರಣೆಯಾಗಿದ್ದು, ನ್ಯಾಯಾಂಗ ಕ್ಷೇತ್ರದಲ್ಲಿ ಮಹಿಳೆಯರ ಪಾಲ್ಗೊಳ್ಳುವಿಕೆಗೆ ಇದು ಮಹತ್ವದ ಮೈಲುಗಲ್ಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾರ್ಗದರ್ಶಕರಾದ ಎನ್.ಟಿ. ರಮೇಶ್, ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ರಾಜೇಂದ್ರಗೌಡ ಜಿ.ಕೆ., ರಾಜ್ಯ ಉಪಾಧ್ಯಕ್ಷರಾದ ಕೆ.ಆರ್. ಸುಬ್ರಹ್ಮಣ್ಯ, ಬಂಗಾರಪೇಟೆ ತಾಲೂಕು ಅಧ್ಯಕ್ಷರಾದ ಶ್ರೀ ರಾಜಪ್ಪ, ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ಮಾಜಿ ಯೋಧರಾದ ಚಲಪತಿ ಪಿಚ್ಚಹಳ್ಳಿ, ಮುಖಂಡರಾದ ಅರಮಾನಹಳ್ಳಿ ರವೀಂದ್ರನಾಥ್, ಸುರೇಶ್ ಮತ್ತು ರಾಮಕೃಷ್ಣಪ್ಪ ಪಿಚ್ಚಹಳ್ಳಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸಾಮಾನ್ಯೀಕೃತ ಲಾಭದಲ್ಲಿ ಗಣನೀಯ ಏರಿಕೆ

ಮಂಗಳೂರು

ಐಡಿಎಫ್‌ಸಿ ಫಸ್ಟ್ ಬ್ಯಾಂಕ್ 2025–26ನೇ ಹಣಕಾಸು ವರ್ಷದ ನಾಲ್ಕನೇ ತ್ರೈಮಾಸಿಕದ ಫಲಿತಾಂಶಗಳನ್ನು ಪ್ರಕಟಿಸಿದ್ದು, ಬ್ಯಾಂಕ್‌ನ ಒಟ್ಟಾರೆ ವೃದ್ಧಿ ಮತ್ತು ಲಾಭದಾಯಕತೆಯಲ್ಲಿ ದೃಢವಾದ ಪ್ರಗತಿ ಕಂಡುಬಂದಿದೆ. ಮಾರ್ಚ್ 31, 2026ಕ್ಕೆ ಕೊನೆಗೊಂಡ ಅವಧಿಗೆ ಸಂಬಂಧಿಸಿದ ಆಡಿಟ್ ಮಾಡಿದ ಹಣಕಾಸು ಫಲಿತಾಂಶಗಳನ್ನು ನಿರ್ದೇಶಕ ಮಂಡಳಿ ಸಭೆಯಲ್ಲಿ ಅನುಮೋದಿಸಲಾಗಿದೆ.

IDFC FIRST Bank

ಬ್ಯಾಂಕ್‌ನ ತೆರಿಗೆ ನಂತರದ ಲಾಭವು 5 ಶೇಕಡಾ ಏರಿಕೆ ಕಂಡು ರೂ.319 ಕೋಟಿಗೆ ತಲುಪಿದರೆ, ಒಮ್ಮೆ ಮಾತ್ರದ ಘಟನೆಗಳನ್ನು ಹೊರತುಪಡಿಸಿದ ಸಾಮಾನ್ಯೀಕೃತ ಲಾಭವು ರೂ.746 ಕೋಟಿಗೆ ಏರಿಕೆಯಾಗಿ ವರ್ಷದಿಂದ ವರ್ಷಕ್ಕೆ 145 ಶೇಕಡಾ ಬೆಳವಣಿಗೆಯನ್ನು ದಾಖಲಿಸಿದೆ. ಬ್ಯಾಂಕ್‌ನ ಒಟ್ಟು ಗ್ರಾಹಕ ವ್ಯವಹಾರವು ರೂ.5,74,731 ಕೋಟಿಗೆ ತಲುಪಿದ್ದು, ಇದು ವಾರ್ಷಿಕವಾಗಿ 18.6 ಶೇಕಡಾ ಏರಿಕೆಯಾಗಿದೆ. ಸಾಲಗಳು ಮತ್ತು ಮುಂಗಡಗಳು ರೂ.2,90,278 ಕೋಟಿಗೆ ಏರಿಕೆಯಾಗಿ 20 ಶೇಕಡಾ ವೃದ್ಧಿಯನ್ನು ತೋರಿದರೆ, ಗ್ರಾಹಕ ಠೇವಣಿಗಳು ರೂ.2,84,453 ಕೋಟಿಗೆ ಏರಿಕೆಯಾಗಿ 17.3 ಶೇಕಡಾ ಬೆಳವಣಿಗೆ ದಾಖಲಿಸಿದೆ. ಆಸ್ತಿ ಗುಣಮಟ್ಟದ ದೃಷ್ಟಿಯಿಂದ ಬ್ಯಾಂಕ್ ಸ್ಥಿರ ಸಾಧನೆಯನ್ನು ತೋರಿದ್ದು, ಗ್ರಾಸ್ ಎನ್‌ಪಿಎ 1.61 ಶೇಕಡಾ ಮತ್ತು ನೆಟ್ ಎನ್‌ಪಿಎ 0.48 ಶೇಕಡಾ ಮಟ್ಟದಲ್ಲಿ ಇದೆ. ಕಾಸಾ ಅನುಪಾತವು 49.80 ಶೇಕಡಾ ಮಟ್ಟದಲ್ಲಿದ್ದು, ಕಡಿಮೆ ವೆಚ್ಚದ ಠೇವಣಿಗಳಲ್ಲಿ ಉತ್ತಮ ಸಾಧನೆಯನ್ನು ಪ್ರತಿಬಿಂಬಿಸುತ್ತದೆ. ಬ್ಯಾಂಕ್‌ನ ನೆಟ್ ಇಂಟರೆಸ್ಟ್ ಮಾರ್ಜಿನ್ 5.93 ಶೇಕಡಾ ಇದ್ದು, ಕೋರ್ ಆಪರೇಟಿಂಗ್ ಲಾಭ ರೂ.1,492 ಕೋಟಿಗೆ ತಲುಪಿದೆ.

# ಹಣಕಾಸು ವರ್ಷದ ಫಲಿತಾಂಶ ಪ್ರಕಟ

ಮಂಗಳೂರು

ಬಂಧನ್ ಬ್ಯಾಂಕ್ 2025–26ನೇ ಹಣಕಾಸು ವರ್ಷದ ಫಲಿತಾಂಶಗಳನ್ನು ಪ್ರಕಟಿಸಿದ್ದು, ಬ್ಯಾಂಕ್‌ನ ಒಟ್ಟಾರೆ ವ್ಯವಹಾರ ಮತ್ತು ಲಾಭದಾಯಕತೆಯಲ್ಲಿ ಸ್ಥಿರವಾದ ಬೆಳವಣಿಗೆ ಕಂಡುಬಂದಿದೆ. ಬ್ಯಾಂಕಿನ ಒಟ್ಟು ವ್ಯವಹಾರವು 11 ಶೇಕಡಕ್ಕಿಂತ ಹೆಚ್ಚು ಏರಿಕೆಯಾಗಿದ್ದು, 3.2 ಲಕ್ಷ ಕೋಟಿ ಮಟ್ಟಕ್ಕೆ ತಲುಪಿದೆ. ಒಟ್ಟು ಠೇವಣಿಗಳಲ್ಲಿ ಚಿಲ್ಲರೆ ಠೇವಣಿಗಳ ಪಾಲು ಸುಮಾರು 74 ಶೇಕಡಾಗಿದ್ದು, ಗ್ರಾಹಕ ಆಧಾರವು ಬಲವಾಗಿರುವುದನ್ನು ಇದು ಸೂಚಿಸುತ್ತದೆ.

2025–26ನೇ ಹಣಕಾಸು ವರ್ಷದಲ್ಲಿ ಬ್ಯಾಂಕ್ 1,224 ಕೋಟಿ ಲಾಭವನ್ನು ಗಳಿಸಿದ್ದು, ಸಂಸ್ಥೆಯ ಕಾರ್ಯಕ್ಷಮತೆಯನ್ನು ಮತ್ತಷ್ಟು ದೃಢಪಡಿಸಿದೆ. ದೇಶದ 36 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಪೈಕಿ 35 ಪ್ರದೇಶಗಳಲ್ಲಿ 6,350ಕ್ಕೂ ಹೆಚ್ಚು ಶಾಖೆಗಳ ಮೂಲಕ ಬ್ಯಾಂಕ್ ತನ್ನ ಸೇವೆಯನ್ನು ವಿಸ್ತರಿಸಿದ್ದು, ಸುಮಾರು 3.2 ಕೋಟಿ ಗ್ರಾಹಕರಿಗೆ ಸೇವೆ ನೀಡುತ್ತಿದೆ. ಬ್ಯಾಂಕ್‌ನಲ್ಲಿ ಕೆಲಸ ಮಾಡುವ ಉದ್ಯೋಗಿಗಳ ಸಂಖ್ಯೆ 75,000ಕ್ಕೂ ಹೆಚ್ಚು



ಇದೆ.

ಠೇವಣಿ ಸಂಗ್ರಹದಲ್ಲಿ ಬ್ಯಾಂಕ್ ವರ್ಷದಿಂದ ವರ್ಷಕ್ಕೆ 10 ಶೇಕಡಾ ಬೆಳವಣಿಗೆ ದಾಖಲಿಸಿದ್ದು, ಒಟ್ಟು ಠೇವಣಿಗಳು 1.66 ಲಕ್ಷ ಕೋಟಿ ತಲುಪಿವೆ. ಇದೇ ಅವಧಿಯಲ್ಲಿ ಮುಂಗಡಗಳ ಪ್ರಮಾಣ 1.54 ಲಕ್ಷ ಕೋಟಿಗೆ ಏರಿಕೆಯಾಗಿದೆ. ಚಾಲ್ತಿ ಮತ್ತು ಉಳಿತಾಯ ಖಾತೆಗಳ ಅನುಪಾತವು 29.3 ಶೇಕಡಾ ಮಟ್ಟದಲ್ಲಿದ್ದು, ಹಣಕಾಸಿನ ಸ್ಥಿರತೆಯ ಸೂಚಕವಾದ ಬಂಡವಾಳ ಸಮರ್ಪಕ ಅನುಪಾತ (ಸಿಎಆರ್)ವು 18 ಶೇಕಡಾ ಮಟ್ಟದಲ್ಲಿ ನಿಯಂತ್ರಣ ಮಿತಿಗಿಂತ ಹೆಚ್ಚಾಗಿದೆ.

ಬ್ಯಾಂಕಿನ ಕಾರ್ಯಕ್ಷಮತೆ ಕುರಿತು ಮಾತನಾಡಿದ ಎಂಡಿ ಮತ್ತು ಸಿಇಒ ಪಾರ್ಥ ಪ್ರತಿಮ್ ಸೇನ್‌ಗುಪ್ತಾ, 2025–26ನೇ ಹಣಕಾಸು ವರ್ಷದ ಸಾಧನೆಗಳು ಬ್ಯಾಂಕ್‌ನ ಬಲವನ್ನು ಸ್ಪಷ್ಟಪಡಿಸುತ್ತವೆ ಎಂದು ತಿಳಿಸಿದ್ದಾರೆ. ಶಿಸ್ತುಬದ್ಧ ಕಾರ್ಯಗತಗೊಳಿಸುವಿಕೆ ಮತ್ತು ವೈವಿಧ್ಯಮಯ ವ್ಯವಹಾರ ಮಾದರಿಯೊಂದಿಗೆ, ಗ್ರಾಹಕಕೇಂದ್ರೀಕೃತ ಹಾಗೂ ಡಿಜಿಟಲ್ ಆಧಾರಿತ ಬೆಳವಣಿಗೆಯನ್ನು ಮುಂದುವರಿಸುವುದಾಗಿ ಅವರು ಹೇಳಿದರು. ವಿತರಣಾ ಮಾರ್ಗಗಳನ್ನು ಬಲಪಡಿಸುವುದು, ಉತ್ಪನ್ನ ಪೋರ್ಟ್‌ಫೋಲಿಯೊ ವಿಸ್ತರಿಸುವುದು ಮತ್ತು ಡೇಟಾ ಆಧಾರಿತ ಒಳನೋಟಗಳನ್ನು ಬಳಸಿಕೊಂಡು ದೀರ್ಘಕಾಲಿಕ ಹಾಗೂ ಅಪಾಯ ಸಮತೋಲನಿತ ಬೆಳವಣಿಗೆ ಸಾಧಿಸುವತ್ತ ಬ್ಯಾಂಕ್ ಮುಂದಾಗಿದೆ ಎಂದು ಅವರು ವಿವರಿಸಿದರು.

# ಮಕ್ಕಳಲ್ಲಿ ಸಮೀಪದೃಷ್ಟಿ ನಿಯಂತ್ರಣಕ್ಕೆ ಹೊಸ ಹೆಜ್ಜೆ

ನವದೆಹಲಿ

ಮಕ್ಕಳಲ್ಲಿ ವೇಗವಾಗಿ ಹೆಚ್ಚುತ್ತಿರುವ ಸಮೀಪದೃಷ್ಟಿ ಸಮಸ್ಯೆಗೆ ಪರಿಹಾರವಾಗಿ ಜಾಗತಿಕ ಕಣ್ಣಿನ ಆರೈಕೆ ಸಂಸ್ಥೆ ತನ್ನ ಎಸಿಲಾರ್ ಸ್ಟೆಲ್ಲೆಸ್ಟ್ ಲೆನ್ಸ್‌ಗಳಿಗೆ ಅಮೆರಿಕದ ಎಫ್‌ಡಿಎ ಮಾರುಕಟ್ಟೆ ಅನುಮತಿ ದೊರೆತಿರುವುದಾಗಿ ಘೋಷಿಸಿದೆ. ಈ ಲೆನ್ಸ್‌ಗಳು ಮಕ್ಕಳಲ್ಲಿ ಸಮೀಪದೃಷ್ಟಿ ಪ್ರಗತಿಯನ್ನು ನಿಧಾನಗೊಳಿಸಲು ಅನುಮೋದನೆ ಪಡೆದಿರುವ ಮೊದಲ ಮತ್ತು ಏಕೈಕ ಕಣ್ಣಿನ ಲೆನ್ಸ್ ಆಗಿವೆ. ಈ ಉತ್ಪನ್ನವು 2021ರಲ್ಲಿ ಎಫ್‌ಡಿಎಯಿಂದ "ಪ್ರಮುಖ ತಂತ್ರಜ್ಞಾನ" ಎಂಬ ಮನ್ನಣೆಯನ್ನು ಪಡೆದಿದ್ದು, ವೈದ್ಯಕೀಯ ಅಧ್ಯಯನಗಳ ಪ್ರಕಾರ ಈ ಲೆನ್ಸ್‌ಗಳು ಎರಡು ವರ್ಷಗಳಲ್ಲಿ ಸರಾಸರಿ 71 ಶೇಕಡಾ ಮಟ್ಟಿಗೆ ಸಮೀಪದೃಷ್ಟಿ ಪ್ರಗತಿಯನ್ನು ನಿಧಾನಗೊಳಿಸುವಲ್ಲಿ ಪರಿಣಾಮಕಾರಿ ಎಂದು ದೃಢಪಟ್ಟಿದೆ.

ಭಾರತದಲ್ಲಿ ಸಮೀಪದೃಷ್ಟಿ ಸಮಸ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿರುವುದು ಕಳವಳಕಾರಿ ಬೆಳವಣಿಗೆಯಾಗಿದೆ. ಪ್ರಸ್ತುತ ದೇಶದಲ್ಲಿ ಪ್ರತಿ ನಾಲ್ಕು ಮಕ್ಕಳಲ್ಲಿ ಒಬ್ಬರಿಗೆ ಈ ಸಮಸ್ಯೆ ಕಂಡುಬರುತ್ತಿದ್ದು, 2050ರ ವೇಳೆಗೆ ನಗರ ಪ್ರದೇಶಗಳ ಸುಮಾರು 50 ಶೇಕಡಾ ಮಕ್ಕಳು ಇದರಿಂದ ಪ್ರಭಾವಿತರಾಗುವ ಸಾಧ್ಯತೆಯಿದೆ ಎಂದು ಅಂದಾಜಿಸಲಾಗಿದೆ.

ಈ ಹಿನ್ನೆಲೆದಲ್ಲಿ ಎಸಿಲಾರ್ ಲಕ್ಸೊಟ್ಟಿಕಾ ಸಂಸ್ಥೆ ಭಾರತದಲ್ಲಿ ಸಮೀಪದೃಷ್ಟಿ ನಿರ್ವಹಣೆಗೆ ನವೀನ ತಂತ್ರಜ್ಞಾನಗಳನ್ನು ಪರಿಚಯಿಸುವ ಮೂಲಕ ಆರೋಗ್ಯ ಸೇವೆಯಲ್ಲಿ ಮಹತ್ವದ ಬದಲಾವಣೆಯನ್ನು ತರಲು ಮುಂದಾಗಿದೆ. ಜಾಗತಿಕ ಮಟ್ಟದ ವೈದ್ಯಕೀಯ ಸಾಕ್ಷ್ಯಾಧಾರಗಳೊಂದಿಗೆ ಈ ಲೆನ್ಸ್‌ಗಳನ್ನು ದೇಶದಾದ್ಯಂತ ಹೆಚ್ಚಿನ ಮಕ್ಕಳಿಗೆ ತಲುಪಿಸುವ ಗುರಿಯನ್ನು ಹೊಂದಿದೆ.

# ಸಂಬಳ ಬಾಕಿ ಇದ್ದರಿಂದ ಸಿಸಿ ಟಿವಿ ಕೇಬಲ್ ಕಟ್..!

ಬೆಂಗಳೂರು

ಆರ್‌ಸಿಬಿ ಹಾಗೂ ಗುಜರಾತ್ ಟೈಟನ್ಸ್ ನಡುವಿನ ಪಂದ್ಯದ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ 240ಕ್ಕೂ ಹೆಚ್ಚು ಸಿಸಿಟಿವಿ ಕ್ಯಾಮರಾಗಳ ಕೇಬಲ್ ಕಟ್ ಆಗಿರುವುದು ಪೊಲೀಸರಲ್ಲಿ ದೊಡ್ಡ ಆತಂಕ ಮೂಡಿಸಿತ್ತು.

ಇದು ಯಾವುದೋ ವಿಧ್ವಂಸಕ ಕೃತ್ಯವಿರಬಹುದು ಎಂಬ ಅನುಮಾನದಲ್ಲಿ ತನಿಖೆ ಕೈಗೊಂಡಿದ್ದ ಕಬ್ಬನ್ ಪಾರ್ಕ್ ಪೊಲೀಸರಿಗೆ ಈಗ ತೀರಾ ವೈಯಕ್ತಿಕ ಮತ್ತು ವಿಚಿತ್ರ ಕಾರಣವೊಂದು ತಿಳಿದುಬಂದಿದೆ.

ಕ್ರೀಡಾಂಗಣದ ಭದ್ರತೆಗಾಗಿ ಅಳವಡಿಸಲಾಗಿದ್ದ ಸಿಸಿಟಿವಿ ನಿರ್ವಹಣೆಯ ಹೊಣೆಯನ್ನು 'ಡಿಜಿಟಲ್ ಸೊಲ್ಯೂಷನ್' ಎಂಬ ಕಂಪನಿಗೆ ಸಬ್ ಕಾಂಟ್ರ್ಯಾಕ್ಟ್ ನೀಡಲಾಗಿತ್ತು. ಈ ಸಂಸ್ಥೆಯಲ್ಲಿ ಕೆಲಸ ಮಾಡುತ್ತಿದ್ದ ಮಂಜುನಾಥ್ ಹಾಗೂ ಅಬ್ದುಲ್ ಕಲಾಂ ಎಂಬುವವರು ಈ ಕೃತ್ಯ ಎಸಗಿದ್ದಾರೆ ಎಂಬುದು ಪೊಲೀಸರ ವಿಚಾರಣೆಯಿಂದ ದೃಢಪಟ್ಟಿದೆ.

ಆರೋಪಿಗಳಿಬ್ಬರಿಗೂ ಕಂಪನಿಯಿಂದ ಬರಬೇಕಿದ್ದ ಸಂಬಳ ಬಾಕಿ ಇತ್ತು. ಎಷ್ಟು ಕೇಳಿದರೂ ಕಂಪನಿ ಸಂಬಳ ನೀಡದಿದ್ದಕ್ಕೆ ಕೋಪಗೊಂಡಿದ್ದ ಈ ಸಿಬ್ಬಂದಿಗಳು, ಸಂಸ್ಥೆಗೆ ಮತ್ತು ಪೊಲೀಸರಿಗೆ ಪಾಠ ಕಲಿಸಲು ನಿರ್ಧರಿಸಿ ಸಿಸಿಟಿವಿ ಕೇಬಲ್‌ಗಳನ್ನು ಕತ್ತರಿಸಿದ್ದರು!

ಪಂದ್ಯದ ವೇಳೆ ಭದ್ರತೆ ಎಷ್ಟು ಮುಖ್ಯವೋ ಈ ಆರೋಪಿಗಳಿಗೆ ಚೆನ್ನಾಗಿ ತಿಳಿದಿತ್ತು. ಹಾಗಾಗಿ, ಯಾರಿಗೂ ಅನುಮಾನ ಬಾರದಂತೆ ಹೋಗಿ ಪ್ರಮುಖ ಕೇಬಲ್‌ಗಳನ್ನೇ ಕಟ್ ಮಾಡಿದ್ದರು. ಪಂದ್ಯದ ಸಂಜೆಯ ಹೊತ್ತಿಗೆ ಸಿಸಿಟಿವಿ ಫೀಡ್ ಸ್ಥಗಿತಗೊಂಡಾಗ ಪೊಲೀಸರು ಹಾಗೂ ಭದ್ರತಾ ಸಿಬ್ಬಂದಿ ಕಂಗಾಲಾಗಿದ್ದರು. ಸಿಸಿಟಿವಿ ನಿಯಂತ್ರಣ ಕೊಠಡಿಯಲ್ಲಿದ್ದ ಪೊಲೀಸರು ತಪಾಸಣೆ ನಡೆಸಿದಾಗ ಕೇಬಲ್ ಕಟ್ ಆಗಿರುವುದು ಪತ್ತೆಯಾಗಿತ್ತು. ನಂತರ ಕಾರ್ಯಾಚರಣೆ ನಡೆಸಿದ ಪೊಲೀಸರು ತಾಂತ್ರಿಕ ಆಧಾರದ ಮೇಲೆ ಮಂಜುನಾಥ್ ಮತ್ತು ಅಬ್ದುಲ್ ಕಲಾಂನನ್ನು ಈ ಕೃತ್ಯ ಎಸಗಿದ್ದರು.

ಪಂದ್ಯದ ದಿನವೇ ಸಿಸಿಟಿವಿಗಳು ಆಫ್ ಆಗಿದ್ದರಿಂದ ಭದ್ರತಾ ವ್ಯವಸ್ಥೆ ಬಗ್ಗೆ ಭಾರಿ ಆತಂಕ ವ್ಯಕ್ತವಾಗಿತ್ತು. ವಿಷಯ ತಿಳಿಯುತ್ತಿದ್ದಂತೆಯೇ ಎಚ್ಚೆತ್ತ ಪೊಲೀಸರು, ತಕ್ಷಣ ಮೇಲಾಧಿಕಾರಿಗಳಿಗೆ ಮಾಹಿತಿ ನೀಡಿ ಬದಲಿ ತಾಂತ್ರಿಕ ವ್ಯವಸ್ಥೆ ಮಾಡಿದ್ದರು. ಭದ್ರತಾ ಲೋಪದ ನಡುವೆಯೂ ಪೊಲೀಸರು ಸಮಯಪ್ರಜ್ಞೆಯಿಂದ ಕಾರ್ಯನಿರ್ವಹಿಸಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಪರಿಸ್ಥಿತಿ ನಿಭಾಯಿಸಿದ್ದರು. ಸಿಸಿಟಿವಿ ನಿಯಂತ್ರಣ ಕೊಠಡಿಯಲ್ಲಿದ್ದ ಪೊಲೀಸರು ತಪಾಸಣೆ ನಡೆಸಿದಾಗ ಕೇಬಲ್ ಕಟ್ ಆಗಿರುವುದು ಪತ್ತೆಯಾಗಿತ್ತು. ನಂತರ ಕಾರ್ಯಾಚರಣೆ ನಡೆಸಿದ ಪೊಲೀಸರು ತಾಂತ್ರಿಕ ಆಧಾರದ ಮೇಲೆ ಮಂಜುನಾಥ್ ಮತ್ತು ಅಬ್ದುಲ್ ಕಲಾಂನನ್ನು ಬಂಧಿಸಿದ್ದಾರೆ.

# ಬೆಂಗಳೂರಿನಲ್ಲಿ ಅಪೂರ್ವ ಪಾರಿವಾಳ ಹಾರಾಟ ಕೌಶಲ್ಯ ಪ್ರದರ್ಶನ

ಬೆಂಗಳೂರು

ನಗರದಲ್ಲಿ ಮೊದಲ ಬಾರಿಗೆ ಆಯೋಜಿಸಲಾದ ರಾಯಲ್ ಬ್ರದರ್ಸ್ ಪಿಜನ್ ಟೂರ್ನಮೆಂಟ್ ಯಶಸ್ವಿಯಾಗಿ ನಡೆಯಿತು. ಸ್ಪರ್ಧೆಯಲ್ಲಿ ಉತ್ಸಾಹಭರಿತ ಭಾಗವಹಿಸುವಿಕೆ ಕಂಡುಬಂದಿದ್ದು, ತರಬೇತಿ ಪಡೆದ ಪಾರಿವಾಳಗಳ ಅದ್ಭುತ ಹಾರಾಟ ಸಾಮರ್ಥ್ಯ ಎಲ್ಲರ ಗಮನ ಸೆಳೆಯಿತು.

ವಿಶೇಷ ವಿಭಾಗದಲ್ಲಿ ರಾಜಶೇಖರ್ ಅತ್ಯುತ್ತಮ ಪ್ರದರ್ಶನ ನೀಡಿ ಸನ್ಮಾನಿತರಾದರು. ಅವರ ಪಾರಿವಾಳವು ಶಕ್ತಿ, ಸಹನಶೀಲತೆ ಹಾಗೂ ಉತ್ತಮ ತಳಿಯ ಗುಣಮಟ್ಟವನ್ನು ಪ್ರದರ್ಶಿಸಿತು.

ಸಾಮಾನ್ಯ ವಿಭಾಗದಲ್ಲಿ ವೇದಶ್ರೀ ಧವಾಡಿ ಪ್ರಥಮ ಸ್ಥಾನ ಪಡೆದರೆ, ಮಂಜುನಾಥ್ ಗಮನಾರ್ಹ ಹಾರಾಟ ಪ್ರದರ್ಶನಕ್ಕಾಗಿ ಗುರುತಿಸಿಕೊಂಡರು.

ಈ ಟೂರ್ನಮೆಂಟ್‌ನ್ನು ಧನರಾಜ್ ಆಯೋಜಿಸಿದ್ದು, ಕಾರ್ಯಕ್ರಮದ ಯಶಸ್ಸು ಹಾಗೂ ಬೆಂಗಳೂರಿನಲ್ಲಿ ಪಾರಿವಾಳ ಪ್ರೇಮಿಗಳ




ಹೆಚ್ಚುತ್ತಿರುವ ಆಸಕ್ತಿ ಬಗ್ಗೆ ಸಂತೋಷ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಉದ್ದೇಶ ಪಾರಿವಾಳಗಳ ಅಸಾಧಾರಣ ಹಾರಾಟ ಸಾಮರ್ಥ್ಯದ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಮತ್ತು ಈ ಹವ್ಯಾಸದಲ್ಲಿ ಜವಾಬ್ದಾರಿಯುತ ಭಾಗವಹಿಸುವಿಕೆಯನ್ನು ಉತ್ತೇಜಿಸುವುದಾಗಿದೆ ಎಂದು ಆಯೋಜಕರು ತಿಳಿಸಿದರು.

ಇಂತಹ ಕಾರ್ಯಕ್ರಮಗಳು ವಿವಿಧ ಪ್ರದೇಶಗಳ ಪಾರಿವಾಳ ಪ್ರೇಮಿಗಳನ್ನು ಒಗ್ಗೂಡಿಸಿ ಸ್ನೇಹಭಾವ ಬೆಳೆಸಲು ಸಹಕಾರಿಯಾಗುತ್ತವೆ. ಉತ್ತಮ ಪ್ರತಿಕ್ರಿಯೆಯಿಂದ ಪ್ರೇರಿತರಾದ ಆಯೋಜಕರು ಮುಂದಿನ ವರ್ಷಗಳಿಂದ ಈ ಸ್ಪರ್ಧೆಯನ್ನು ವಾರ್ಷಿಕವಾಗಿ ನಡೆಸಲು ನಿರ್ಧರಿಸಿದ್ದಾರೆ.

ಈ ಕಾರ್ಯಕ್ರಮದಲ್ಲಿ ಇಂದಿರಾನಗರ, ಹಲಸೂರು ಸೇರಿದಂತೆ ಬೆಂಗಳೂರಿನ ವಿವಿಧ ಭಾಗಗಳಿಂದ ಪಾರಿವಾಳ ಪ್ರೇಮಿಗಳು ಸಕ್ರಿಯವಾಗಿ ಭಾಗವಹಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

# ಮೈತ್ರಿ ಚೆನ್ನಾಗಿದೆ, ಸಮಸ್ಯೆ ಇಲ್ಲ: ಹೆಚ್.ಡಿ.ಕುಮಾರಸ್ವಾಮಿ

ಕೋಲಾರ

ನಮ್ಮ ಮೈತ್ರಿ ಬಲಿಷ್ಠವಾಗಿದೆ. ಏನು ಸಮಸ್ಯೆ ಇಲ್ಲ. ಸಣ್ಣಪುಟ್ಟ ಸಮಸ್ಯೆಗಳಿದ್ದರೆ ನಾವು ಒಟ್ಟಿಗೆ ಕೂತು ಬಗೆಹರಿಸಿಕೊಳ್ಳುತ್ತೇವೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಹೇಳಿದರು.

ಮಾಲೂರಿನಲ್ಲಿ ರಾಮೇಗೌಡ ಮತ್ತು ರಶ್ಮಿ ರಾಮೇಗೌಡರ ನಿವಾಸದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಕೇಂದ್ರ ಸಚಿವರು, ಮಾಲೂರು ಕ್ಷೇತ್ರದಲ್ಲಿ ಮೈತ್ರಿ ಪಕ್ಷಗಳ ನಡುವೆ ಸಮಸ್ಯೆ ಇದೆಯಲ್ಲ ಎಂದು ಮಾಧ್ಯಮಗಳು ಕೇಳಿದ ಪ್ರಶ್ನೆಗೆ, ಸಮಸ್ಯೆಗಳು ಯಾವ ಪಕ್ಷದಲ್ಲಿ ಇಲ್ಲ ಹೇಳಿ. ನಮ್ಮ ಮೈತ್ರಿಯಲ್ಲಿ ಯಾವುದೇ ಗೊಂದಲ ಅಥವಾ ಗೋಜಲು ಇಲ್ಲ. ಅಂತಹ ಸಮಸ್ಯೆಗಳು ಏನಾದರೂ ಕಂಡ್ರೆ ಸರಿಪಡಿಸಿಕೊಳ್ಳುತ್ತೇವೆ ಎಂದರು.

ಮಿತ್ರಪಕ್ಷ ಬಿಜೆಪಿಯಲ್ಲಿ ಸಮರ್ಥ ನಾಯಕತ್ವದ ಕೊರತೆ ಇದೆ ಎನ್ನುವ ಮಾಧ್ಯಮಗಳ ಪ್ರಶ್ನೆಯನ್ನು ಸಾರಾಸಕಟ್ಟಾಗಿ ತಳ್ಳಿ ಹಾಕಿದ ಸಚಿವರು, ಬಿಜೆಪಿಯಲ್ಲಿ ಸಮರ್ಥವಾಗಿ ನಾಯಕತ್ವ ನಿರ್ವಹಣೆ ಮಾಡುವಂತಹವರು ಸಾಕಷ್ಟು ಜನ



ಇದ್ದಾರೆ. ಅದು ರಾಷ್ಟ್ರೀಯ ಪಕ್ಷ. ಹಲವಾರು ಪ್ರಮುಖರಿದ್ದಾರೆ. ಅವರಿಗೆ ಆಡಳಿತ ನಡೆಸಿದ ಅನುಭವ, ಪಕ್ಷ ಕಟ್ಟಿದ ಅನುಭವಿದೆ. ಅವರಲ್ಲಿ ಕೂಡ ಏನಾದರೂ ಸಮಸ್ಯೆ ಇದ್ದರೆ ಅದನ್ನು ಸರಿ ಮಾಡುವ ಶಕ್ತಿ ಆ ಪಕ್ಷದ ಹೈಕಮಾಂಡ್ ಗೆ ಇದೆ ಎಂದು ಉತ್ತರಿಸಿದರು.

ರಾಜ್ಯ ಕಾಂಗ್ರೆಸ್ ನಲ್ಲಿ ಸದ್ಯಕ್ಕೆ ಮುಖ್ಯಮಂತ್ರಿಯ ಪೈಪೋಟಿ ನಡೆಯುತ್ತಿದೆ. ಹಲವು ವರ್ಷಗಳಿಂದ ಸಂಕ್ರಾಂತಿ, ಯುಗಾದಿ, ದೀಪಾವಳಿ ಕ್ರಾಂತಿ ಅಂತ ಕೇಳಿದ್ದೇನೆ, ಈಗ ಪಂಚರಾಜ್ಯದ ಚುನಾವಣೆ ಫಲಿತಾಂಶದ ಬಳಿಕ ಎನ್ನಲಾಗುತ್ತಿದೆ. ಮುಂದೆ ಏನಾಗುತ್ತದೆ ಎಂಬುದನ್ನು ಕಾದು ನೋಡೋಣ ಎಂದು ಸಚಿವರು ಪ್ರಶ್ನೆ ಒಂದಕ್ಕೆ ಉತ್ತರಿಸಿದರು.

ಒಳ ಮೀಸಲಾತಿಗೆ ಸಂಬಂಧಿಸಿದಂತೆ ಕೇಳಿದ ಪ್ರಶ್ನೆಗೆ, ಒಳಮೀಸಲಾತಿ ವಿಚಾರವನ್ನು ರಾಜಕೀಯವಾಗಿ ಬಳಸಿಕೊಳ್ಳಲು ಇಷ್ಟಪಡುವುದಿಲ್ಲ. ಕಳೆದ 78 ವರ್ಷದಲ್ಲಿ ಮೀಸಲಾತಿ ಬಗ್ಗೆ ಬಾಬಾ ಸಾಹೇಬ್ ಅಂಬೇಡ್ಕರ್ ಕೊಟ್ಟಿರುವ ಮೀಸಲಾತಿ ಶಕ್ತಿ ಆ ಕುಟುಂಬಗಳಿಗೆ ಪ್ರಾಮಾಣಿಕರವಾಗಿ ಸಿಗಬೇಕು ಅನ್ನೋದು ನನ್ನ ಉದ್ದೇಶ. ಅದರಲ್ಲಿ ರಾಜಕೀಯ ಬೆರೆಸಲ್ಲ, ಎಲ್ಲಾ ಸಂತೃಪ್ತಿಯಾಗಿರಬೇಕು ನಾನು ಅದನ್ನು ಎತ್ತಿಕಟ್ಟಲು ಸಿದ್ದನಿಲ್ಲ ಎಂದು ತೀಕ್ಷ್ಣವಾಗಿ ಹೇಳಿದರು.

ರಾಜ್ಯದಲ್ಲಿ ಅಭಿವೃದ್ಧಿ ಸಂಪೂರ್ಣವಾಗಿ ಕುಂಠಿತವಾಗಿದೆ. ಹಣಕಾಸು ವ್ಯವಸ್ಥೆ ನಿರ್ವಹಣೆ ಹದಗೆಟ್ಟು ಹೋಗಿದೆ ಎಂದ ಕೇಂದ್ರ ಸಚಿವರು; ಗ್ರೇಟರ್ ಬೆಂಗಳೂರು ಸೇರಿ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಲು ಸರ್ಕಾರದ ಬಳಿ ಹಣವಿಲ್ಲ. ಹಾಗೆಯೇ ಹಳ್ಳಿಗಳಿಗೆ ಕುಡಿಯುವ ನೀರು ಪೂರೈಸಲು ಪಂಚಾಯಿತಿಗಳಲ್ಲಿ ಬಿಡಿಗಾಸು ಕೂಡ ಇಲ್ಲ ಎಂದು ಅವರ ಪಕ್ಷದ ಶಾಸಕರೇ ಹೇಳುತ್ತಿದ್ದಾರೆ. ರಾಜ್ಯದ ಹಣಕಾಸು ವ್ಯವಸ್ಥೆ ಅದೆಷ್ಟು ಅದಕ್ಕೆ ಇಟ್ಟಿದೆ ಎಂಬುದಕ್ಕೆ ಹಿರಿಯ ಶಾಸಕ ಬಿಆರ್ ಪಾಟೀಲ್ ಅವರು ನೀಡಿರುವ ಹೇಳಿಕೆ ಸಾಕಲ್ಲವೇ ಎಂದು ಹೇಳಿದರು.

ನನಗೆ ಮುಖ್ಯಮಂತ್ರಿ ಸ್ಥಾನಕ್ಕಿಂತ ರಾಜ್ಯಕ್ಕೆ ಒಳ್ಳೆದಾಗಬೇಕು ರಾಜ್ಯದಲ್ಲಿರುವ ಕೆಟ್ಟ ವಾತಾವರಣ ಸರಿಹೋಗಬೇಕು. ರಾಜ್ಯ ಸರ್ಕಾರ ಗ್ಯಾರಂಟಿ ಅಥವಾ ನಾವು ನುಡಿದಂತೆ ನಡೆದಿದ್ದೇವೆ ಎಂದು ಏನೇ ಹೇಳಿದರೂ ಜನರಿಗೆ ಈ ಸರ್ಕಾರದ ಮೇಲೆ ಅಸಮಧಾನವೂ ಇದೆ ಆಕ್ರೋಶವು ಇದೆ, ರಾಜ್ಯದ ಆರ್ಥಿಕ ಪರಿಸ್ಥಿತಿ ಹೇಗಿದೆ ಅನ್ನೋದಕ್ಕೆ ಚುನಾವಣಾ ಆಯೋಗದ ಆಯುಕ್ತರು ಚುನಾವಣೆ ನಡೆಸಲು ನಮ್ಮಲ್ಲಿ ಹಣ ಇಲ್ಲ ಎಂದು ನ್ಯಾಯಾಲಯಕ್ಕೆ ಅಫಿಡವಿಟ್ ಸಲ್ಲಿಸುತ್ತಾರೆ ಎಂದರೆ ಸರ್ಕಾರದ ಪರಿಸ್ಥಿತಿ ಎಲ್ಲಿಗೆ ಬಂದಿದೆ ಎಂಬುದು ಅರ್ಥವಾಗುತ್ತದೆ.

ರಾಜ್ಯದಲ್ಲಿ ಕುಡಿಯುವ ನೀರಿನ ಸಮಸ್ಯೆ ಎಲ್ಲಿಗೆ ಬಂದಿದೆ ಅದರ ಬಗ್ಗೆ ಬಗೆಹರಿಸಿಲ್ಲ ಈಗ 40 ಕೋಟಿ ಹಣ ಕೊಡ್ತೀವಿ ಎನ್ನುತ್ತಿದ್ದಾರೆ, ಅದು ಕುಡಿಯುವ ನೀರಿಗೆ ಕೊಡ್ತಾರಾ ಇಲ್ಲಾ ಯಾರಾದರೂ ಜೇಬು ತುಂಬಿಸಿಕೊಳ್ಳಲು ಕೊಡುತ್ತಾರಾ ನೋಡಬೇಕು ಸಚಿವರು ಕಿಡಿಕಾರಿದರು.

# ವಿಳಂಬ ನೀತಿ ಭ್ರಷ್ಟಾಚಾರಕ್ಕೆ ಎಡೆ ಮಾಡಿಕೊಡುತ್ತದೆ: ಸಿಎಂ

ಬೆಂಗಳೂರು

ಮಧ್ಯವರ್ತಿಗಳು ಎಲ್ಲೆಡೆ ಇರುತ್ತಾರೆ ಆದರೆ ಅವರನ್ನು ಕಚೇರಿಯೊಳಗೆ ಬಿಟ್ಟುಕೊಳ್ಳದೇ ಹೊರಗೆ ಕಳಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚಿಸಿದರು.

ಅವರು ಕರ್ನಾಟಕ ಆಡಳಿತ ಸೇವೆ ಅಧಿಕಾರಿಗಳ ಒಕ್ಕೂಟ ಸಂಘ ಬೆಂಗಳೂರು ಇವರ ವತಿಯಿಂದ ಇನ್ ಫೆಂಟ್ರಿ ರಸ್ತೆಯಲ್ಲಿರುವ ಏಂಖ ಅಧಿಕಾರಿಗಳ ಸಂಘದ ನವೀಕರಿಸಿದ ಕಟ್ಟಡ ಹೊಸದಾಗಿ ನಿರ್ಮಿಸಿದ ಹೆಚ್ಚುವರಿ ಕೊಠಡಿಗಳನ್ನು ಉದ್ಘಾಟನೆ ಮಾಡಿ ಸ್ಮರಣ ಸಂಚಿಕೆಯನ್ನು ಬಿಡುಗಡೆ ಮಾಡಿ ಮಾತನಾಡಿದರು.

ಅಧಿಕಾರಿಗಳು ಯಾವುದೇ ಕಾರಣಕ್ಕೂ ಮಾಡದೇ, ಶೀಘ್ರವಾಗಿ ಕಡತಗಳನ್ನು ವಿಲೇವಾರಿ ಮಾಡಬೇಕು. ವಿಳಂಬ ನೀತಿ ಭ್ರಷ್ಟಾಚಾರಕ್ಕೆ ಎಡೆಮಾಡಿಕೊಡುತ್ತದೆ ಎಂದರು.

ಕೆಎಎಸ್ ಅಧಿಕಾರಿಗಳು ತಮ್ಮ ಕರ್ತವ್ಯವನ್ನು ನಿಷ್ಠೆಯಿಂದ ಪ್ರಾಮಾಣಿಕವಾಗಿ ಮಾಡಬೇಕು.



ಕೆಎಎಸ್ ಅಧಿಕಾರಿಗಳ ಸಂಘಕ್ಕೆ ನೂರು ವರ್ಷಗಳ ಇತಿಹಾಸವಿದ್ದು, ನಾಲ್ವಡಿ ಕೃಷ್ಣರಾಜ ಒಡೆಯರ್ ಮೈಸೂರು ರಾಜ್ಯಕ್ಕೆ ಅಪಾರ ಕೊಡುಗೆ ಕೊಟ್ಟಿದ್ದಾರೆ. ಸಾಮಾಜಿಕ, ಆರ್ಥಿಕ, ಮೂಲಭೂತ ಸೌಕರ್ಯಗಳು,ಕೈಗಾರಿಕೆಗಳ ಬೆಳವಣಿಗೆಗೆ ಕಾರಣೀಭೂತಗಿದ್ದಾರೆ. ಅವರ ಕಾಲದಲ್ಲಿ ದಿವಾನರಾಗಿದ್ದವರು ಸಂಘದ ಅಧ್ಯಕ್ಷರಾಗಿದ್ದರು ಎನ್ನುವುದು ಈ ಸಂಘದ ಹೆಗ್ಗಳಿಕೆ ಎಂದರು.

ಅವರೆಲ್ಲರೂ ದಕ್ಷ ಆಡಳಿತಕ್ಕೆ ನಮಗೆ ದಾರಿದೀಪವಾಗಿದ್ದಾರೆ ಎಂದರು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಕಾರ್ಯಾಂಗ ಹಾಗೂ ಶಾಸಕಾಂಗ ಒಟ್ಟಾಗಿ ಕೆಲಸ ಮಾಡಬೇಕು. ಈ ಎರಡೂ ಜನರ ಪ್ರತಿನಿಧಿಗಳಾಗಿ ಜನರ ಹಿತವನ್ನು ಕಾಪಾಡುವುದು ನಮ್ಮ ಕರ್ತವ್ಯ ಎಂದರು.

ಅಧಿಕಾರಿಗಳಿಗೆ ಕಾನೂನಿನ ಅರಿವಿನ ಜೊತೆಗೆ ಸಾಮಾನ್ಯ ಜ್ಞಾನ, ಸಮಾಜದ ಬಗ್ಗೆ ಅರಿವು ಇರಬೇಕು. ನಿವೃತ್ತರಾಗುವವರೆಗೆ ಜನಸೇವೆಯಲ್ಲಿ ತೊಡಗಿಸಿಕೊಳ್ಳುವ ಅವಕಾಶವಿದೆ. ಅಸಮಾನತೆ ಇರುವ ಸಮಾಜದಲ್ಲಿ ದುರ್ಬಲ ವರ್ಗಕ್ಕೆ ಸ್ಪಂದಿಸಬೇಕು. ಅಧಿಕಾರಿಗಳಿಗೆ ಕಾನೂನಿನ ಅರಿವಿನ ಜೊತೆಗೆ ಸಾಮಾನ್ಯ ಜ್ಞಾನ, ಸಮಾಜದ ಬಗ್ಗೆ ಅರಿವು ಇರಬೇಕು. ಆಗ ಮಾತ್ರ ಜನರಿಗೆ ಸ್ಪಂದಿಸಲು ಸಾಧ್ಯ ಎಂದರು.

ನಮ್ಮ ಕೆಲಸವನ್ನು ನಾವು ಪ್ರೀತಿಸಬೇಕು. ಗ್ರಾಮೀಣ ಜನರನ್ನು ಪ್ರೀತಿಯಿಂದ ಮಾತನಾಡಿಸಿ ಅವರ ಸಮಸ್ಯೆ ಅರ್ಥೈಸಿಕೊಂಡು ಬಗೆಹರಿಸಿದರೆ ಅವರು ನಿಮ್ಮನ್ನು ಮರೆಯುವುದಿಲ್ಲ. ಮಧ್ಯವರ್ತಿಗಳ ಹಾವಳಿ ತಪ್ಪಿಸುವ ನಿಟ್ಟಿನಲ್ಲಿ ಗ್ಯಾರಂಟಿ ಯೋಜನೆಗಳು ಸಹಕಾರಿಯಾಗಿವೆ. ನೇರವಾಗಿ ಫಲಾನುಭವಿಗಳ ಖಾತೆಗೆ ಹಣ ವರ್ಗಾಯಿಸಲಾಗುತ್ತಿದೆ ಎಂದರು.

ಸರ್ಕಾರ ರೂಪಿಸುವ ನೀತಿಗಳು ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರುವಲ್ಲಿ ಅಧಿಕಾರಿಗಳ ಪಾತ್ರ ಹಿರಿದು. ಜನಸೇವೆಗೆ ದೊರಕಿರುವ ಅವಕಾಶವನ್ನು ಸದುಪಯೋಗ ಮಾಡಿಕೊಳ್ಳಬೇಕು. ತೃಪ್ತಿದಾಯಕವಾಗಿ ಕೆಲಸ ಮಾಡಿರುವುದಕ್ಕಿಂತ ದೊಡ್ಡ ಪ್ರಮಾಣಪತ್ರ ಇನ್ನೊಂದಿಲ್ಲ ಎಂದರು. ಈ ಬಗ್ಗೆ ಅಧಿಕಾರಿಗಳು ಆತ್ಮಾವಲೋಕನ ಮಾಡಿಕೊಳ್ಳಬೇಕು. ಜೀವನ ಸಾರ್ಥಕವಾಗಿ ಸೇವೆ ತೃಪಿಕರವಾಗಿ ಮಾಡಿದ್ದೇನೆ ಎಂಬ ಭಾವನೆ ನಿಮ್ಮಲ್ಲಿ ಇರಬೇಕು ಎಂದರು.

ಪದೋನ್ನತಿ ಬಗ್ಗೆ ಕಂದಾಯ ಸಚಿವರು ಕಾರ್ಯೋನ್ಮುಖರಾಗಿದ್ದು, ಶ್ರೀಘ್ರವಾಗಿ ಪದೋನ್ನತಿ ಆಗಲಿದೆ. ಶೇ. 33% ಅಧಿಕಾರಿಗಳನ್ನು ಸಿಇಒಗಳಾಗಿ ಬಡ್ತಿ ನೀಡುವ ಭರವಸೆಯನ್ನು ಮುಖ್ಯಮಂತ್ರಿಗಳು ನೀಡಿದರು.

ಕೆಎಎಸ್ ಅಧಿಕಾರಿಗಳ ಸಂಘದಲ್ಲಿ ಹೆಚ್ಚುವರಿಯಾಗಿ ಹನ್ನೊಂದು ಕೊಠಡಿಗಳನ್ನು ನಿರ್ಮಿಸಿದ್ದು, ಹೊರಭಾಗಗಳಿಂದ ಆಗಮಿಸುವ ಅಧಿಕಾರಿಗಳಿಗೆ ಉಪಯೋಗವಾಗಲಿದೆ. ಕಂದಾಯ ಸಚಿವ ಕೃಷ್ಣಭೈರೇಗೌಡ, ಕೆಎಎಸ್ ಅಧಿಕಾರಿಗಳ ಸಂಘದ ಅಧ್ಯಕ್ಷ ಶಿವಸ್ವಾಮಿ, ಉಪಾಧ್ಯಕ್ಷ ಚನ್ನಬಸಪ್ಪ, ಕಾರ್ಯದರ್ಶಿ ಶಿವಕುಮಾರ್ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಮ್ಯಾನ್ ಹೋಲ್‌ನಿಂದ ದುರ್ವಾಸನೆ: ಕಿರಿಕಿರಿ

ರಾಮನಗರ

ತಾಲ್ಲೂಕಿನ ಬಿಡದಿ ಪಟ್ಟಣದಲ್ಲಿ ಅಭಿವೃದ್ಧಿಗಾಗಿ ಅಗೆದ ರಸ್ತೆಗಳಿಗೆ ಇನ್ನೂ ಮುಕ್ತಿ ಸಿಗದ ಕಾರಣ ಎಲ್ಲೆಡೆ ಧೂಳಿನ ಸಿಂಚನವಾಗುತ್ತಿದೆ. ಮತ್ತೊಂದು ಕಡೆ ಒಳಚರಂಡಿ(ಯುಜಿಡಿ) ಬ್ಲಾಕ್ ಆಗಿರುವ ಪರಿಣಾಮ ಮ್ಯಾನ್ ಹೋಲ್‌ನಿಂದ ಹೊಲಸು ನೀರು ಹಾದಿ ಬೀದಿಯಲ್ಲಿ ಹರಿಯುತ್ತಾ ದುರ್ವಾಸನೆ ಬೀರುತ್ತಿದ್ದು ನಾಗರಿಕರು ಪರಿತಪಿಸುವಂತಾಗಿದೆ.

ಪಟ್ಟಣದಲ್ಲಿ ವರ್ಷದ ಹಿಂದೆ ಸಮರೋಪಾದಿಯಲ್ಲಿ ಆರಂಭಗೊಂಡ ಅಭಿವೃದ್ಧಿ ಕಾಮಗಾರಿಗಳು ಆಮೇವೇಗದಲ್ಲಿ ಸಾಗುತ್ತಿದ್ದು ಸಧ್ಯಕ್ಕೆ ಪೂರ್ಣಗೊಳ್ಳುವ ಲಕ್ಷಣಗಳು ಕಾಣುತ್ತಿಲ್ಲ. ಇದರಿಂದಾಗಿ ಕೆಲವು ರಸ್ತೆಗಳು ಧೂಳುಮಯವಾಗಿವೆ. ವಾಣಿಜ್ಯ ಕೇಂದ್ರವಾಗಿರುವ ಪಟ್ಟಣದಲ್ಲಿ ಜನಸಂದಣಿ ಹಾಗೂ ವಾಹನಗಳ ಸಂಚಾರದಿಂದ ಪುಟಿದೆದ್ದ ಧೂಳಿನಿಂದ ನಾಗರಿಕರ ಜೀವ ಹಿಂಡುತ್ತಿದೆ.

ಮತ್ತೊಂದೆಡೆ ಸೂಕ್ತ ನಿರ್ವಹಣೆ ಇಲ್ಲದ ಯುಜಿಡಿ ಮ್ಯಾನ್ ಹೋಲ್‌ಗಳಿಂದ ಹೊಲಸು ನೀರು ರಸ್ತೆಯಲ್ಲಿ ಹರಿಯುತ್ತಿದ್ದು ಸಾರ್ವಜನಿಕರು ಕಲ್ಮಶ ಮಿಶ್ರಣದ ಕೆಸರನ್ನು ತುಳಿದು ಸಾಗುವುದು ಸಾಮಾನ್ಯವಾಗಿದೆ. ಕೇತುಗಾನಹಳ್ಳಿ ಹಳೇ



ರಸ್ತೆಯಲ್ಲಿ ಹೊಲಸು ನೀರು ರಸ್ತೆಯಲ್ಲಿ ಹರಿಯುತ್ತಿದೆ. ಇಲ್ಲಿ ಸಮಸ್ಯೆ ಕೇಳೋರೆ ದಿಕ್ಕಿಲ್ಲ. ಸಂಬಂಧಪಟ್ಟ ಪುರಸಭೆ ಅಧಿಕಾರಿಗಳಿಗೆ ಕರೆ ಮಾಡಿದರೆ ಸ್ವೀಕರಿಸುವುದಿಲ್ಲ, ದೂರು ಹೇಳಿದರೆ ಸ್ಪಂದನೆಯಿಲ್ಲದಂತಾಗಿದೆ.

ಬಿಸಿಲ ಬೇಗೆಯ ಜತೆಗೆ ಧೂಳು ಮತ್ತು ಹೊಲಸು ನೀರಿನ ಗಬ್ಬುವಾಸನೆಯಿಂದ ಕಂಗಾಲಾಗಿರುವ ನಾಗರಿಕರು ಅಧಿಕಾರಿಗಳ ವಿರುದ್ಧ ಹಿಡಿಶಾಪ ಹಾಕುತ್ತಾ ಕಂಡಕಂಡವರಲ್ಲಿ ಬಿಡದಿ ಪುರಸಭೆ ಇದೆಯಾ ಅಥವಾ ಸತ್ತು ಹೋಗಿದೆಯಾ? ಎಂದು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಉಪಾಧ್ಯಕ್ಷರ ವಾರ್ಡ್‌ನಲ್ಲಿಯೇ ಹೆಚ್ಚು ಪ್ರಾಬ್ಲಮ್:

ಪುರಸಭೆ ಉಪಾಧ್ಯಕ್ಷರಾದ ಆಯಿಷಾ ಖಲೀಲ್ ಅವರು ಪ್ರತಿನಿಧಿಸುವ 10ನೇ ವಾರ್ಡ್ ಸಹರದ್ದಿನಲ್ಲೇ ಹೆಚ್ಚು ಸಮಸ್ಯೆಗಳು ಕಾಡುತ್ತಿವೆ. ಪಟ್ಟಣದ ಪೇಟೆಬೀದಿ ಸೇರಿದಂತೆ ಹೃದಯ ಭಾಗದಲ್ಲಿ ಹರಡಿಕೊಂಡಿರುವ ವಾರ್ಡ್‌ನಲ್ಲಿ ವಾಣಿಜ್ಯ ಕೇಂದ್ರಗಳು ಮತ್ತು ವಸತಿ ಪ್ರದೇಶವಿದೆ.

ಈ ಭಾಗದಲ್ಲಿ ಕಾಡುತ್ತಿದ್ದ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಿಕೊಳ್ಳಲು ಉಪಾಧ್ಯಕ್ಷರು ಪುರಸಭೆ ಅಧಿಕಾರಿಗಳ ಜತೆಗೆ ಸಂಘರ್ಷಕ್ಕೆ ಇಳಿದಿದ್ದರು. ಈಗ ಯುಜಿಡಿ ನೀರು ರಸ್ತೆಯಲ್ಲಿ ಹರಿಯುತ್ತಿದ್ದು ಅಧಿಕಾರಿಗಳ ಗಮನಕ್ಕೆ ತರಲು ಕರೆ ಮಾಡಿದರೆ ಸ್ವೀಕರಿಸುವುದಿಲ್ಲ ಎಂಬ ದೂರುಗಳು ಕೇಳಿಬಂದಿವೆ.

ರಾಜಕೀಯ ದ್ವೇಷಕ್ಕೆ ಅಭಿವೃದ್ಧಿ ಕುಂಠಿತ:

ಬಿಡದಿ ಪುರಸಭೆಯಲ್ಲಿ ಜೆಡಿಎಸ್ ಪಕ್ಷಕ್ಕೆ ಸ್ಪಷ್ಟ ಬಹುಮತವಿದ್ದು ಆಡಳಿತದ ಚುಕ್ಕಾಣಿ ಹಿಡಿದಿದೆ. ಆದರೆ ಕಳೆದ ಒಂದು ವರ್ಷದ ಹಿಂದೆ ಇಷ್ಟೊಂದು ಪ್ರಮಾಣದ ಸಮಸ್ಯೆಗಳಿರಲಿಲ್ಲ. ಪುರಸಭೆಯ ನಿಕಟಪೂರ್ವ ಅಧ್ಯಕ್ಷರು ಸಮಸ್ಯೆಗಳಿಗೆ ಸೂಕ್ತವಾಗಿ ಸ್ಪಂದಿಸುತ್ತಿದ್ದರು. ಅಧಿಕಾರಿಗಳು ಕೂಡ ಹಿಡಿತದಲ್ಲಿದ್ದರು ಆದರೆ ಇತ್ತೀಚೆಗೆ ಯಾವ ಅಧಿಕಾರಿಗಳು ಎಷ್ಟೊತ್ತಿಗೆ ಕೆಲಸಕ್ಕೆ ಬರುತ್ತಾರೆ. ಎಲ್ಲಿರುತ್ತಾರೆಂದು ತಿಳಿಯುವುದು ಕಷ್ಟ. ಕರೆ ಮಾಡಿದರೆ ಸ್ವೀಕರಿಸುವುದಿಲ್ಲ ಎಂಬ ಆಪಾದನೆ ವ್ಯಾಪಕವಾಗಿದೆ.

ಪಟ್ಟಣದಲ್ಲಿ ರಸ್ತೆಗಳ ಕಾಮಗಾರಿ ನಿಂತಿರುವ ಕಾರಣ ವಾಹನಗಳು ಹಾಗೂ ನಾಗರೀಕರಿಗೆ ಸಂಚಾರ ಅವ್ಯವಸ್ಥೆಯೇ ದೊಡ್ಡ ಸಮಸ್ಯೆಯಾಗಿದೆ. ಕೆಲವು ತಿಂಗಳ ಹಿಂದೆ ಟ್ರಾಫಿಕ್ ಸಮಸ್ಯೆಗೆ ಪರಿಹಾರ ಕಂಡುಹಿಡಿಯಲು ಮುಂದಾದ ಪೊಲೀಸರು ಇದೀಗ ನಮಗೇನೂ ಸಂಬಂಧವಿಲ್ಲ ಎಂಬಂತೆ ಕೈಚಲ್ಲಿ ಕುಳಿತಿದ್ದಾರೆ. ಪುರಸಭೆ ಮುಖ್ಯರಸ್ತೆ ಮತ್ತು ನಲ್ಲಿಗುಡ್ಡೆಕೆರೆ ರಸ್ತೆಗಳು ಪ್ರಮುಖ ವಾಣಿಜ್ಯ ಕೇಂದ್ರಗಳಾಗಿರುವುದರಿಂದ ಹೆಚ್ಚಿನ ಸಂಖ್ಯೆಯ ಜನರು ಪೇಟೆ ಬೀದಿಯಲ್ಲಿ ಸೇರುತ್ತಾರೆ. ಪುರಸಭೆಯಾಗಿ ಮೇಲ್ದರ್ಜೆಗೇರಿದ ಬಿಡದಿಯಲ್ಲಿ ರಸ್ತೆ ಅಭಿವೃದ್ಧಿ ಸಹಿತ ಮೂಲ ಸೌಲಭ್ಯಗಳ ವಿಷಯದಲ್ಲಿ ಇತ್ತ ನಗರವೂ ಅಲ್ಲ ಅತ್ತ ಹಳ್ಳಿಯೂ ಅಲ್ಲ ಎನ್ನುವ ಸ್ಥಿತಿಯಲ್ಲಿದೆ, ಪಟ್ಟಣದಲ್ಲಿ ಯಾವ ಕಡೆ ಹೋದರೂ ರಸ್ತೆಗಳು ಕಿಷ್ಕಿಂದೆಯಾಗಿರುವ ಪರಿಣಾಮ ಸಂಚಾರ ಅಸ್ತವ್ಯಸ್ತದ ಸಮಸ್ಯೆ ಇಲ್ಲಿ ನಿತ್ಯ ನಿರಂತರವಾಗಿದೆ. ಸುಂದರ ಮತ್ತು ಸ್ವಚ್ಛ ಪಟ್ಟಣ ನಿರ್ಮಾಣದ ಹೊಣೆ ಹೊತ್ತಿರುವ ಪುರಸಭೆ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಬೇಜವಾಬ್ದಾರಿಯಿಂದ ಸಮಸ್ಯೆಗಳಿಗೆ ಪರಿಹಾರ ದೊರೆತಿಲ್ಲ.

# 'ನೀರಿನ ಅದಾಲತ್' ಅನುಷ್ಠಾನ

ಕೋಲಾರ

ಜಿಲ್ಲೆಯಲ್ಲಿ ಬೇಸಿಗೆಯ ಅವಧಿಯಲ್ಲಿ ಕುಡಿಯುವ ನೀರಿನ ಅಭಾವವನ್ನು ತಡೆಗಟ್ಟಲು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ತಕ್ಷಣದ ಕ್ರಮಗಳನ್ನು ಕೈಗೊಳ್ಳಲು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ನಿರ್ಧರಿಸಿದೆ. ಮುಖ್ಯಮಂತ್ರಿಗಳ ನಿರ್ದೇಶನದ ಮೇರೆಗೆ ಮತ್ತು ದಿನಾಂಕ 13.04.2026 ರಂದು ನಡೆದ ಸಭೆಯ ಆಧಾರದ ಮೇಲೆ ಈ ಪ್ರಮಾಣಿತ ಕಾರ್ಯಾಚರಣಾ ಕಾರ್ಯವಿಧಾನಗಳನ್ನು ರೂಪಿಸಲಾಗಿದೆ.

ಇದರ ಉದ್ದೇಶ ನೀರಿನ ವಿತರಣೆಯಲ್ಲಿನ ತಾಂತ್ರಿಕ ಅಡೆತಡೆಗಳನ್ನು ನಿವಾರಿಸುವುದು.ನೀರು ಪೋಲಾಗುವುದನ್ನು ತಡೆಗಟ್ಟುವುದು ಮತ್ತು ಜಲಮೂಲಗಳ ಮಾಲಿನ್ಯ ನಿಯಂತ್ರಣ. ಪೈಪ್‌ಲೈನ್ ಸೋರಿಕೆ ಹಾಗೂ ಪಂಪ್‌ಸೆಟ್ ದುರಸ್ತಿಗಳಿಗೆ ಸ್ಥಳದಲ್ಲೇ ಪರಿಹಾರ ಒದಗಿಸುವುದು. ನೀರಿನ ಅಭಾವದಿಂದ ಸಾರ್ವಜನಿಕರಲ್ಲಿ ಉಂಟಾಗುವ ಆತಂಕವನ್ನು ನಿವಾರಿಸುವುದು ಆಗಿದೆ.

ಗ್ರಾಮ ಪಂಚಾಯತ್ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೀರಿನ ನಿರ್ವಹಣಾ ಸಮಿತಿಗಳನ್ನು ರಚಿಸಿ, ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಕಾರ್ಯನಿರ್ವಹಿಸಲು ಅದರಲ್ಲಿ ಸೂಚನೆ ನೀಡಲಾಗಿದೆ.

ಹೆಚ್ಚು ನೀರಿನ ಅಭಾವವಿರುವ ಪ್ರದೇಶಗಳನ್ನು ಗುರುತಿಸುವುದು, ಬೋರ್‌ವೆಲ್‌ಗಳು, ಬಾವಿಗಳು ಮತ್ತು ಇತರ ನೀರಿನ ಮೂಲಗಳ ಲಭ್ಯತೆಯ ವಿವರಗಳನ್ನು ಸಿದ್ಧಪಡಿಸುವುದು ಈ ಹಂತದಲ್ಲಿ ಸೇರಿದೆ.ತಾರತಮ್ಯವಿಲ್ಲದೆ ಪ್ರತಿ ವಾರ್ಡ್ ಅಥವಾ ಓಣಿಗೆ ನೀರು ತಲುಪುವಂತೆ ವೇಳಾಪಟ್ಟಿಯನ್ನು ಸರಿಪಡಿಸುವುದು.

ದಿನನಿತ್ಯದ ನೀರಿನ ಲಭ್ಯತೆ ಮತ್ತು ಬಳಕೆಯನ್ನು (ನಗರ ಪ್ರದೇಶದಲ್ಲಿ ತಲಾ 135 ಲೀಟರ್ ಹಾಗೂ ಗ್ರಾಮೀಣ ಪ್ರದೇಶದಲ್ಲಿ 55 ಲೀಟರ್) ಅಳೆಯುವುದು ಕಡ್ಡಾಯವಾಗಿದೆ. ಸಭೆಗೂ 5 ದಿನಗಳ ಮುಂಚಿತವಾಗಿ ಸಾಮಾಜಿಕ ಮಾಧ್ಯಮ ಮತ್ತು ಧ್ವನಿವರ್ಧಕಗಳ ಮೂಲಕ ಸಾರ್ವಜನಿಕರಿಗೆ ಮಾಹಿತಿ ನೀಡಬೇಕೆಂದು ಎಸ್ ಓ ಪಿಯಲ್ಲಿ ತಿಳಿಸಲಾಗಿದೆ.

ನೀರಿನ ಅದಾಲಾತ್ ಸಭೆಗಳನ್ನು ಬೆಳಿಗ್ಗೆ 09 ರಿಂದ 12 ಗಂಟೆಯ ಒಳಗಾಗಿ, ಎಲ್ಲರಿಗೂ ಸುಲಭವಾಗಿ ತಲುಪುವಂತಹ ಕೇಂದ್ರ ಸ್ಥಳಗಳಲ್ಲಿ ನಡೆಸಬೇಕು. ಮೇ ಮತ್ತು ಜೂನ್ ತಿಂಗಳಲ್ಲಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಕನಿಷ್ಠ 3 ರಿಂದ 5 ಹಾಗೂ ನಗರ ಸ್ಥಳೀಯ ಸಂಸ್ಥೆಗಳಲ್ಲಿ 2 ರಿಂದ 3 ಸಭೆಗಳನ್ನು ನಡೆಸಿ ವರದಿ ಸಲ್ಲಿಸಬೇಕು. ಪ್ರಸ್ತುತ ನೀರಿನ ಲಭ್ಯತೆ ಮತ್ತು ಸರಬರಾಜು ವೇಳಾಪಟ್ಟಿಯ ಬಗ್ಗೆ ಅಧಿಕಾರಿಗಳಿಂದ ವಿವರಣೆ ಪಡೆಯಲು ಸೂಚನೆ ನೀಡಲಾಗಿದೆ.

ಸಾರ್ವಜನಿಕರ ದೂರುಗಳ ಸ್ವೀಕಾರ (ಅಕ್ರಮ ಮೋಟಾರ್, ವಾಲ್ವ್ ನಿರ್ವಹಣಾ ತಾರತಮ್ಯ, ಕಲುಷಿತ ನೀರು). ತ್ವರಿತ ಕ್ರಮಗಳು ಮತ್ತು ಸ್ಥಳದಲ್ಲೇ ಕೆಲಸದ ಆದೇಶ (ಘಂಡಿಇ ಔಡಿಜಜಡಿ) ನೀಡುವುದು. ಟ್ಯಾಂಕ್‌ಗಳ ಅಳವಡಿಕೆ ಮತ್ತು ಸ್ಥಳೀಯರ ಸಲಹೆಗಳ ಸ್ವೀಕಾರ. ಪಂಪ್/ಮೋಟಾರ್ ಕೆಟ್ಟರೆ 24 ಗಂಟೆಗಳಲ್ಲಿ ಮತ್ತು ಪೈಪ್ ಒಡೆದರೆ ಕೂಡಲೇ ಸರಿಪಡಿಸಬೇಕು.

ಪ್ರತಿ ವಾರ ಕ್ಲೋರಿನೇಷನ್ ಮಾಡುವುದು ಮತ್ತು ನೀರಿನ ಗುಣಮಟ್ಟವನ್ನು ದೈನಂದಿನ ಆಧಾರದಲ್ಲಿ ಪರೀಕ್ಷಿಸುವುದು. ಸಾಂಕ್ರಾಮಿಕ ರೋಗಗಳನ್ನು ತಡೆಯಲು ಪ್ರತಿ 15 ದಿನಕ್ಕೊಮ್ಮೆ ಓವರ್ ಹೆಡ್ ಟ್ಯಾಂಕ್‌ಗಳನ್ನು ಸ್ವಚ್ಛಗೊಳಿಸಿ ಬ್ಲೀಚಿಂಗ್ ಪೌಡರ್ ಬಳಸಬೇಕು.

# ವಸತಿ ಶಾಲೆಗಳ

## ಎಸ್‌ಎಸ್‌ಎಲ್‌ಸಿ ಫಲಿತಾಂಶ

ಕೋಲಾರ

ಕರ್ನಾಟಕ ಸರ್ಕಾರದ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ನಡೆಯುತ್ತಿರುವ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಕೋಲಾರ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ/ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ/ ಡಾ. ಬಿ. ಆರ್. ಅಂಬೇಡ್ಕರ್ ವಸತಿ ಶಾಲೆ ಹಾಗೂ ಏಕಲವ್ಯ ಮಾದರಿ ವಸತಿ ಶಾಲೆಗಳಲ್ಲಿ 2025-06ನೇ ಶೈಕ್ಷಣಿಕ ಸಾಲಿನಲ್ಲಿ ಎಸ್.ಎಸ್. ಎಲ್.ಸಿ ಪರೀಕ್ಷೆ ತೆಗೆದುಕೊಂಡಿರುವ 1158 ವಿದ್ಯಾರ್ಥಿಗಳಲ್ಲಿ 1155 ವಿದ್ಯಾರ್ಥಿಗಳು ಉತೀರ್ಣರಾಗಿರುತ್ತಾರೆ. ಹಾಗೂ ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಗೌನಿಪಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಸಂಧ್ಯಾ ಎ.ವಿ ಎಂಬ ವಿದ್ಯಾರ್ಥಿನಿಯು 625ಕ್ಕೆ 617 ಅಂಕಗಳನ್ನು ಪಡೆದು ಕೋಲಾರ ಜಿಲ್ಲೆಯ ವಸತಿ ಶಾಲೆಗಳಲ್ಲಿ ಪ್ರಥಮ ಸ್ಥಾನವನ್ನು ಪಡೆದಿರುತ್ತಾರೆ.

ಬಂಗಾರಪೇಟೆ ತಾಲ್ಲೂಕಿನ ದೊಡ್ಡಪನ್ನಾಂಡಹಳ್ಳಿಯ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಗೋಪಾಲ. ಆರ್. ಎಂಬ ವಿದ್ಯಾರ್ಥಿಯು 625ಕ್ಕೆ 615 ಅಂಕಗಳನ್ನು ಪಡೆದು ದ್ವಿತೀಯ ಸ್ಥಾನವನ್ನು ಪಡೆದಿರುತ್ತಾರೆ. ಜಿಲ್ಲೆಯ 25 ವಸತಿ ಶಾಲೆಗಳ ಪೈಕಿ 23 ವಸತಿ ಶಾಲೆಗಳು ಶೇ100 ರಷ್ಟು ಫಲಿತಾಂಶವನ್ನು ಪಡೆದಿರುತ್ತವೆ. ಉತೀರ್ಣರಾದ 1155 ವಿದ್ಯಾರ್ಥಿಗಳಲ್ಲಿ 433 ವಿದ್ಯಾರ್ಥಿಗಳು ಅತ್ಯುತ್ತಮ ಶ್ರೇಣಿಯಲ್ಲಿ 617 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ, 81 ವಿದ್ಯಾರ್ಥಿಗಳು ದ್ವಿತೀಯ ದರ್ಜೆಯಲ್ಲಿ, 25 ವಿದ್ಯಾರ್ಥಿಗಳು ತೃತೀಯ ದರ್ಜೆಯಲ್ಲಿ ಉತೀರ್ಣರಾಗಿರುತ್ತಾರೆ.

ಪರೀಕ್ಷೆಗೆ ಹಾಜರಾದ 549 ಬಾಲಕರು ಪೈಕಿ 547(ಶೇ99.63) ವಿದ್ಯಾರ್ಥಿಗಳು ಉತೀರ್ಣರಾಗಿರುತ್ತಾರೆ. 607 ಬಾಲಕಿಯರ ಪೈಕಿ 606(ಶೇ99.83) ವಿದ್ಯಾರ್ಥಿಗಳು ಉತೀರ್ಣರಾಗಿರುತ್ತಾರೆ. ಜಿಲ್ಲೆಯ ವಸತಿ ಶಾಲೆಗಳ ಒಟ್ಟು ಶೇಕಡವಾರು ಫಲಿತಾಂಶ 99.74% ಆಗಿರುತ್ತದೆ. ಭವಿಷ್ಯದಲ್ಲಿ ದೊಡ್ಡ ಕನಸುಗಳನ್ನು ಹೊತ್ತ ವಿದ್ಯಾರ್ಥಿಗಳು ಸರ್ಕಾರಿ ವಸತಿ ಶಾಲೆಗಳಲ್ಲಿ ವ್ಯಾಸಂಗ ಮಾಡಿ ವ್ಯಾಸಂಗದ ಮೊದಲನೇ ಹಂತದ ಎಸ್,ಎಸ್,ಎಲ್,ಸಿ. ಯಲ್ಲಿ ಕೋಲಾರ ಜಿಲ್ಲೆಯ ವಿದ್ಯಾರ್ಥಿಗಳು ಅತ್ಯುತ್ತಮ ಅಂಕಗಳನ್ನು ಪಡೆದಿದ್ದಾರೆಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರ ಭೂಮಿ ಸ್ವಾಧೀನ ಖಂಡಿಸಿ ಪ್ರತಿಭಟನೆ

ತುಮಕೂರು

ಜಿಲ್ಲಾಡಳಿತ ಮತ್ತು ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರ ಜನರಿಗೆ ನಿವೇಶನ ಹಂಚಲು ರೈತರ ಒಪ್ಪಿಗೆ ಪಡೆಯದೆ, ರೈತರ ಭೂಮಿ ಸ್ವಾಧೀನಕ್ಕೆ ಮಾಡಿಕೊಳ್ಳಲು ಮುಂದಾಗಿರುವ ಕ್ರಮವನ್ನು ಖಂಡಿಸಿ, ಇಂದು ಮಾಚೇನಹಳ್ಳಿ ಗ್ರಾಮದಲ್ಲಿ ನೂರಾರು ರೈತರು ಟೂಡಾ ನಿವೇಶನಕ್ಕಾಗಿ ಗುದ್ದಲಿ ಪೂಜೆ ನೆರವೇರಿಸಿದ ಜಾಗದಲ್ಲಿಯೇ ಪ್ರತಿಭಟನಾ ಸಮಾವೇಶ ನಡೆಸಿದರು.

ಕರ್ನಾಟಕ ಪ್ರಾಂತ ರೈತ ಸಂಘ,ಆಲ್ ಇಂಡಿಯಾ ಕಿಸಾನ್ ಸಭಾ(ಎಐಕೆಎಸ್), ರೈತ ಸಂಘದ ನೇತೃತ್ವದಲ್ಲಿ ನೂರಾರು ರೈತರು, ಗ್ರಾಮಸ್ಥರು, ಮಾಚೇನಹಳ್ಳಿ ಗ್ರಾಮದ ತಿರುಮಲ ರಂಗನಾಥಸ್ವಾಮೀ ದೇವಾಲಯದ ಬಳಿಯಿಂದ ಟೂಡಾ ನಿವೇಶನಕ್ಕೆ ಶಂಕು ಸ್ಥಾಪನೆ ನೆರವೇರಿದ ಜಾಗದವರೆಗೂ




ಮೆರವಣಿಗೆ ನಡೆಸಿ, ತದನಂತರ ಜಿಲ್ಲಾಡಳಿತ ಮತ್ತು ಟೂಡಾದ ನಡೆ ಖಂಡಿಸಿ ಸಮಾವೇಶ ನಡೆಸಿದರು.

ಸಮಾವೇಶದ ಅಧ್ಯಕ್ಷತೆ ವಹಿಸಿ ಪ್ರಾಸ್ತಾವಿಕವಾಗಿ ಮಾತನಾಡಿದ ಎಐಕೆಎಸ್‌ನ ಕೆಂಬೇಗೌಡ,ತುಮಕೂರು ನಗರಾಭಿವೃದ್ದಿ ಪ್ರಾಧಿಕಾರದಿಂದ ಮಾಚೇನಹಳ್ಳಿ,ಸಿಂಗನಹಳ್ಳಿ ಮತ್ತು ಬೊಮ್ಮೇನಹಳ್ಳಿ ಗ್ರಾಮಗಳಲ್ಲಿ 70 ಎಕರೆ ಸರಕಾರಿ ಭೂಮಿಯೂ ಸೇರಿದಂತೆ, ಸುಮಾರು 200 ಎಕರೆಗೂ ಹೆಚ್ಚು ಭೂಮಿಯನ್ನು ವಶಪಡಿಸಿಕೊಂಡು ನಿವೇಶನಗಳಾಗಿ ಅಭಿವೃದ್ಧಿ ಪಡಿಸಿ, 50:50ರ ಅನುಪಾತದಲ್ಲಿ ಹಂಚಿಕೆ ಮಾಡಲು ಯೋಜನೆ ರೂಪಿಸಿದೆ. ಆದರೆ ಇದಕ್ಕೆ ರೈತರ ಒಪ್ಪಿಗೆ ಪಡೆದಿಲ್ಲ.ಅಲ್ಲದೆ ಸರಕಾರಿ ಭೂಮಿಯನ್ನು ಉಳುಮೆ ಮಾಡುತ್ತಿರುವ ರೈತರನ್ನು ಸಹ ಪರಿಗಣಿಸಿಲ್ಲ.ಹಾಗಾಗಿ ಮೂರು ಗ್ರಾಮಗಳ ರೈತರು ಒಗ್ಗೂಡಿ, ಹೋರಾಟ ರೂಪಿಸಿದರೆ, ಈ ಯೋಜನೆಗೆ ರೈತರು ತಮ್ಮ ಫಲವತ್ತಾದ ಭೂಮಿ ಕಳೆದುಕೊಳ್ಳುವುದು ತಪ್ಪುತ್ತದೆ.

ಹಾಗಾಗಿ ಹೋರಾಟಗಾರರು ತಮ್ಮಲ್ಲಿ ಒಡಕು ಉಂಟು ಮಾಡುವ ಶಕ್ತಿಗಳಿಂದ ದೂರವಿದ್ದು, ಇಂದೇ ಜಿಲ್ಲಾಡಳಿತ ಮತ್ತು ಟೂಡಾಗೆ ನಿಮ್ಮ ಯೋಜನೆಗೆ ನಮ್ಮ ಭೂಮಿ ನೀಡುವುದಿಲ್ಲ ಎಂದು ದೂರು ಸಲ್ಲಿಸುವಂತೆ ಸಲಹೆ ನೀಡಿದರು.

# ಯಡಿಯೂರಪ್ಪ 50 ವರ್ಷಗಳ ರಾಜಕೀಯ ಬದುಕಿಗೆ ಅಭಿಮಾನೋತ್ಸವ

ಮಾಲೂರು

ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ 50 ವರ್ಷಗಳ ಸುದೀರ್ಘ ರಾಜಕೀಯ ಜೀವನದ ಅಂಗವಾಗಿ ಮೇ 4ರಂದು ಚಿತ್ರದುರ್ಗದಲ್ಲಿ ಬಿಜೆಪಿ ವತಿಯಿಂದ ಅದ್ದೂರಿ ಅಭಿಮಾನೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಮಾಜಿ ಶಾಸಕ ಕೆ.ಎಸ್. ಮಂಜುನಾಥ್ ಗೌಡ ತಿಳಿಸಿದರು.

ತಾಲೂಕಿನ ಬೆಳ್ಳಾವಿ ಗ್ರಾಮದಲ್ಲಿರುವ ಬೆಳ್ಳಾವಿ ಸಂಸ್ಥಾನ ಮಠಕ್ಕೆ ಭೇಟಿ ನೀಡಿ ಮಠಾಧೀಶರಾದ ಮಹಾಂತ ಲಿಂಗ ಶಿವಾಚಾರ್ಯ ಸ್ವಾಮೀಜಿಗಳಿಗೆ ಕಾರ್ಯಕ್ರಮದ ಆಹ್ವಾನ ನೀಡಿ ಅವರು ಮಾತನಾಡಿದರು. ಯಡಿಯೂರಪ್ಪ ಅವರು ರಾಜ್ಯಾಧ್ಯಕ್ಷರಾಗಿ ಹಾಗೂ ಮುಖ್ಯಮಂತ್ರಿಯಾಗಿ ರಾಜ್ಯದ ಅಭಿವೃದ್ಧಿ



ಮತ್ತು ಪಕ್ಷದ ಸಂಘಟನೆಗೆ ಅಪಾರ ಸೇವೆ ಸಲ್ಲಿಸಿದ್ದು, ರಾಜ್ಯದಾದ್ಯಂತ ಅಪಾರ ಅಭಿಮಾನಿಗಳನ್ನು ಹೊಂದಿದ್ದಾರೆ ಎಂದು ಹೇಳಿದರು.

ಮೇ 4ರಂದು ನಡೆಯುವ ಈ ಅಭಿಮಾನೋತ್ಸವಕ್ಕೆ ರಾಜ್ಯದ ವಿವಿಧ ಮಠಗಳ ಸ್ವಾಮೀಜಿಗಳನ್ನು ಆಹ್ವಾನಿಸಲಾಗುತ್ತಿದ್ದು, ವಿಶೇಷವಾಗಿ ಬೆಳ್ಳಾವಿ ಹಾಗೂ ನಾಗಲಾಪುರ ಮಠಗಳ ಶ್ರೀಗಳಿಗೂ ಆಹ್ವಾನ ನೀಡಲಾಗಿದೆ. ಈ ಕಾರ್ಯಕ್ರಮಕ್ಕೆ ಸುಮಾರು 10 ಲಕ್ಷಕ್ಕೂ ಹೆಚ್ಚು ಮಂದಿ ಆಗಮಿಸುವ ನಿರೀಕ್ಷೆ ಇದ್ದು, ಯಡಿಯೂರಪ್ಪ ಅವರ ರಾಜಕೀಯ ಬದುಕಿನ ಕುರಿತ ಡಾಕ್ಯುಮೆಂಟರಿ ಪ್ರದರ್ಶನವೂ ಏರ್ಪಡಿಸಲಾಗಿದೆ ಎಂದು ಮಾಹಿತಿ ನೀಡಿದರು.

ಬೆಳ್ಳಾವಿ ಸಂಸ್ಥಾನ ಮಠದ ಮಹಾಂತ ಲಿಂಗ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಯಡಿಯೂರಪ್ಪ ಅವರ ಸುದೀರ್ಘ ರಾಜಕೀಯ ಬದುಕನ್ನು ಸ್ಮರಿಸಿ ರಾಜ್ಯಾದ್ಯಂತ ಅಭಿಮಾನೋತ್ಸವ ನಡೆಯುತ್ತಿರುವುದು ಸಂತಸದ ವಿಚಾರ ಎಂದು ಹೇಳಿದರು. ಅವರು ಕೂಡ ಕಾರ್ಯಕ್ರಮದಲ್ಲಿ ಭಾಗವಹಿಸುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಚಿನ್ನಸ್ವಾಮಿಗೌಡ, ಪಿಎಲ್‌ಡಿ ಬ್ಯಾಂಕ್ ಮಾಜಿ ನಿರ್ದೇಶಕ ಸೋಮಶೇಖರ್, ಎಪಿಎಂಸಿ ಮಾಜಿ ಸದಸ್ಯ ಚಂದ್ರಶೇಖರ್ ಸೇರಿದಂತೆ ಹಲವು ಮುಖಂಡರು ಮತ್ತು ಭಕ್ತರು ಉಪಸ್ಥಿತರಿದ್ದರು.

# ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆ

ರಾಮನಗರ

ಬಿಡದಿ ವಿವಿದೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ಆಡಳಿತ ಮಂಡಳಿ ನೂತನ ಅಧ್ಯಕ್ಷರಾಗಿ ಎಸ್.ಜೀವನ್(ಬಾಬು) ಉಪಾಧ್ಯಕ್ಷರಾಗಿ ಕೆ.ಪಿ.ಬಾಲಕೃಷ್ಣ ಆಯ್ಕೆಯಾಗಿದ್ದಾರೆ.

ಇತ್ತೀಚೆಗೆ ಸಂಘದ ಆಡಳಿತ ಮಂಡಳಿಯ 12 ನಿರ್ದೇಶಕರ ಸ್ಥಾನಗಳಿಗೆ ಚುನಾವಣೆ ನಡೆದಿದ್ದು ನೂತನ ಅಧ್ಯಕ್ಷ-ಉಪಾಧ್ಯಕ್ಷರ ಹುದ್ದೆಗಳ ಆಯ್ಕೆಗೆ ಏ.27ರಂದು ಚುನಾವಣೆ ನಿಗದಿಯಾಗಿತ್ತು. ಪಟ್ಟಣದಲ್ಲಿರುವ ಸಂಘದ ಕಾರ್ಯಾಲಯದಲ್ಲಿ ಸೋಮವಾರ ನಡೆದ ಚುನಾವಣೆ ಪ್ರಕ್ರಿಯೆಯಲ್ಲಿ ಸಾಲಗಾರರ ಸಾಮಾನ್ಯ ಕ್ಷೇತ್ರದಿಂದ ಆಯ್ಕೆಯಾಗಿರುವ ಇಟ್ಟಮಡು ಗ್ರಾಮದ ಕಾಂಗ್ರೆಸ್ ಬೆಂಬಲಿತ ನಿರ್ದೇಶಕರಾದ ಎಸ್.ಜೀವನ್(ಬಾಬು) ಅಧ್ಯಕ್ಷ ಸ್ಥಾನಕ್ಕೆ ಹಾಗೂ ಹಿಂದುಳಿತ ವರ್ಗ ಎ ಕ್ಷೇತ್ರದಿಂದ ಆಯ್ಕೆಯಾಗಿರುವ ಕೆ.ಪಿ.ಬಾಲಕೃಷ್ಣ ಉಪಾಧ್ಯಕ್ಷ ಸ್ಥಾನಕ್ಕೆ ಸ್ಪರ್ಧೆಬಯಸಿ ನಾಮಪತ್ರ ಸಲ್ಲಿಸಿದ್ದರು.

ಚುನಾವಣೆ ಸಭೆಯಲ್ಲಿ ಕಾಂಗ್ರೆಸ್ ಬೆಂಬಲಿತ 11 ಜನ ನಿರ್ದೇಶಕರು, ಜೆಡಿಎಸ್ ಬೆಂಬಲಿತ ಏಕೈಕ ಸದಸ್ಯ ನಿತ್ಯಾನಂದ ಹಾಗೂ ಬಿಡಿಸಿಸಿ ಬ್ಯಾಂಕ್ ನಾಮನಿರ್ದೇಶಿತ ಸದಸ್ಯ ವೆಂಕಟೇಶ್.ಎಸ್ ಸೇರಿದಂತೆ 13 ಜನ ನಿರ್ದೇಶಕರು ಹಾಜರಿದ್ದರು. ಚುನಾವಣೆ ಪ್ರಕ್ರಿಯೆಯಲ್ಲಿ ಇಬ್ಬರು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಆಯ್ಕೆಯನ್ನು ಅವಿರೋಧ ಎಂದು ಘೋಷಿಸಲಾಯಿತು. ಚುನಾವಣಾಧಿಕಾರಿಯಾಗಿ ಸಹಕಾರ ಇಲಾಖೆಯ ಅಧಿಕಾರಿ ಬಿ.ಕೆ.ಮಂಜುನಾಥ್ ಕಾರ್ಯನಿರ್ವಹಿಸಿದರು.

ಇತ್ತೀಚೆಗೆ ನಡೆದ ಆಡಳಿತ ಮಂಡಳಿಯ 12 ನಿರ್ದೇಶಕರ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿತರು 11 ಸ್ಥಾನಗಳ ಭರ್ಜರಿ ಗೆಲುವಿನೊಂದಿಗೆ ಸಂಪೂರ್ಣ ಬಹುಮತ ಸಾಧಿಸಿದ್ದರು. ಆಯ್ಕೆ ಪ್ರಕ್ರಿಯೆ ಘೋಷಣೆಯಾಗುತ್ತಿದ್ದಂತೆ ನಿರ್ದೇಶಕರು ಮತ್ತು ಅಧಿಕಾರಿಗಳು ನೂತನ ಅಧ್ಯಕ್ಷ-ಉಪಾಧ್ಯಕ್ಷರನ್ನು ಅಭಿನಂದಿಸಿದರು. ಸಂಘದ ಸಿಇಒ ಕಿರಣ್. ಎಂ, ನಿಕಟಪೂರ್ವ ಪ್ರಬಾರ ಸಿಇಒ ವಿ.ಸೀನಪ್ಪ ಮತ್ತು ಸಿಬ್ಬಂದಿ ಹಾಜರಿದ್ದರು.

ಸೊಸೈಟಿ ಚುನಾವಣೆ ಪ್ರಕ್ರಿಯೆ ಪೂರ್ಣಗೊಳ್ಳುತ್ತಿದ್ದಂತೆ ಕಾಂಗ್ರೆಸ್ ಬೆಂಬಲಿತ ನೂತನ ಅಧ್ಯಕ್ಷ-ಉಪಾಧ್ಯಕ್ಷರು ಮತ್ತು ನಿರ್ದೇಶಕರು ಹಾಗೂ ಮುಖಂಡರು ಮಾಜಿ ಶಾಸಕ ಸಿ.ಎಂ.ಲಿಂಗಪ್ಪ ಅವರನ್ನು ಭೇಟಿ ಮಾಡಿ ಆಶೀರ್ವಾದ ಪಡೆದರು. ಈ ವೇಳೆ ಲಿಂಗಪ್ಪನವರನ್ನು ಸೊಸೈಟಿ ಆಡಳಿತ ಮಂಡಳಿ ಪರವಾಗಿ ಅಭಿನಂದಿಸಲಾಯಿತು.

ಕಳೆದ 60 ವರ್ಷಗಳಿಂದ ಜೆಡಿಎಸ್ ಬೆಂಬಲಿತರ ವಶದಲ್ಲಿದ್ದ ಸೊಸೈಟಿಯನ್ನು ಸದಸ್ಯ ಮತದಾರರು ಈ ಬಾರಿ ಕಾಂಗ್ರೆಸ್ ಬೆಂಬಲಿತರ ಮೇಲೆ ವಿಶ್ವಾಸವಿರಿಸಿ ಸಂಪೂರ್ಣ ಬಹುಮತದೊಂದಿಗೆ ಅಧಿಕಾರದ ಅವಕಾಶ ಕೊಟ್ಟಿದ್ದಾರೆ.

# ಕೃಷಿ ಪರಿಕರ ಮಾರಾಟಗಾರರ ಸಮಸ್ಯೆ ಬಗೆಹರಿಸಲು ಆಗ್ರಹ

ಶ್ರೀನಿವಾಸಪುರ

ತಾಲ್ಲೂಕು ಕೃಷಿ ಪರಿಕರ ಮಾರಾಟಗಾರರ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ತಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಸೋಮವಾರ ಕೃಷಿ ಇಲಾಖೆ ಅಧಿಕಾರಿ ಈಶ್ವರ್ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ತಾಲ್ಲೂಕು ಕೃಷಿ ಪರಿಕರ ಮಾರಾಟಗಾರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ನೀಲಟೂರು ಚಂದ್ರಶೇಖರ್ ಮಾತನಾಡಿ, ಸರ್ಕಾರ ಯೂರಿಯಾ ರಸಗೊಬ್ಬರದ ಜತೆ ಇನ್ನಿತರ ಗೊಬ್ಬರಗಳನ್ನು ಟ್ಯಾಗ್ ಮಾಡುವುದನ್ನು ನಿಲ್ಲಿಸಬೇಕು. ಅವುಗಳನ್ನು ಡೀಲರ್‌ಗಳಿಗೆ ಎಫ್‌ಒಎಲ್ ಮೂಲಕ ವಿತರಿಸಬೇಕು. ಕೃಷಿ ಪರಿಕರಗಳ



ಗುಣಮಟ್ಟ ಕಳಪೆ ಎಂದು ಕಂಡುಬಂದಲ್ಲಿ ಅದಕ್ಕೆ ಸದರಿ ಪರಿಕರಗಳ ಉತ್ಪಾದಕರನ್ನು ಹೊಣೆಗಾರರನ್ನಾಗಿ ಮಾಡಬೇಕು ಎಂದು ಆಗ್ರಹಪಡಿಸಿದರು.

ಸಂಘದ ಗೌರವಾಧ್ಯಕ್ಷ ಎಂ.ಕೋಟೇಶ್ ಮಾತನಾಡಿ, ಎಲ್ಲಾ ರಾಸಾಯನಿಕ ಗೊಬ್ಬರಗಳ ಮಾರಾಟದ ಮೇಲೆ ಡೀಲರ್‌ಗಳಿಗೆ ಶೇ.8 ರಷ್ಟು ಲಾಭಾಂಶ ನೀಡಬೇಕು. ಬಿತ್ತನೆ ಬೀಜದ ಸಾಥಿ ಪೋರ್ಟ್‌ಲ್ಲನ್ನು ಮಾರಾಟ ಸ್ನೇಹಿಯನ್ನಾಗಿ ಮಾಡಬೇಕು. ರೈತರಿಗೆ ರಸಗೊಬ್ಬರ ವಿತರಣೆ ಮಾಡಲು ಎಫ್‌ಐಡಿ ಕೆಕಿಸಾನ್ ತಂತ್ರಾಂಶದ ಮೂಲಕ ವಿತರಿಸುವುದರಿಂದ ವಿನಾಯಿತಿ ನೀಡಬೇಕು ಎಂದು ಒತ್ತಾಯಿಸಿದರು.

ಸಂಘದ ಕಾರ್ಯದರ್ಶಿ ಕೆ.ಆರ್. ಮಂಜುನಾಥರೆಡ್ಡಿ, ಖಜಾಂಚಿ ರಾಜೇಶ್, ಉಪಾಧ್ಯಕ್ಷ ಎ.ಎಚ್.ಶ್ರೀನಿವಾಸರೆಡ್ಡಿ, ಸಹಕಾರ್ಯದರ್ಶಿ ಗಂಗಾಧರ್, ನಿರ್ದೇಶಕರಾದ ಎನ್.ಎಸ್. ವೆಂಕಟರಮಣ, ಎನ್.ಶ್ರೀನಿವಾಸ್, ಜಿ.ವಿ.ಮಂಜುನಾಥರೆಡ್ಡಿ, ಚೌಡರೆಡ್ಡಿ, ಚಂದ್ರಶೇಖರ್, ಪ್ರಕಾಶ್, ಬಾಬುರೆಡ್ಡಿ, ಗೋಪಾಲಕೃಷ್ಣ, ಶ್ರೀನಾಥರೆಡ್ಡಿ, ತುಮ್ಮಲಪಲ್ಲಿ ರಮಣಾರೆಡ್ಡಿ ಇದ್ದರು.

# ಭಯದಿಂದ ಬದುಕಿದ್ದು ಸಾಕು: ಮೋದಿ

ಲಕ್ನೋ

ಪಶ್ಚಿಮ ಬಂಗಾಳದ ವಿಧಾನಸಭಾ ಚುನಾವಣೆಯ ಕೊನೆಯ ಹಂತದ ಪ್ರಚಾರ ಮುಗಿದ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಸೋಮವಾರ ಅಲ್ಲಿನ ಜನರಿಗೆ ಬಹಿರಂಗ ಪತ್ರ ಬರೆದಿದ್ದಾರೆ. ಹಲವು ವರ್ಷಗಳಿಂದ ಭಯದಲ್ಲಿ ಬದುಕುತ್ತಿದ್ದ ಮತದಾರರು ಬದಲಾವಣೆ ಮತ್ತು ಅಭಿವೃದ್ಧಿಯನ್ನು ಬಯಸಿದ್ದಾರೆ. ಪಶ್ಚಿಮ ಬಂಗಾಳದ ಮತದಾರರು, ವಿಶೇಷವಾಗಿ ಕಾರ್ಮಿಕರು ಬದಲಾವಣೆ ಬಯಸಿದ್ದಾರೆ. ಜೊತೆಗೆ ಪ್ರಮುಖ ಬೇಡಿಕೆಗಳನ್ನು ಹೊಂದಿದ್ದಾರೆ. ಇದೆಲ್ಲವನ್ನೂ ನಾನು ಗ್ರಹಿಸಿದ್ದೇನೆ ಎಂದು ಮೋದಿ ಪತ್ರದಲ್ಲಿ ತಿಳಿಸಿದ್ದಾರೆ.

ತೃಣಮೂಲ ಕಾಂಗ್ರೆಸ್ ಅಡಿಯಲ್ಲಿ ಭಯದ ವಾತಾವರಣವಿದೆ ಅಂತ ಅದರಿಂದ ದೂರ ಸರಿದು ಜನರು ಉತ್ತಮ ಅವಕಾಶಗಳು, ಸುರಕ್ಷತೆ ಮತ್ತು ಅಭಿವೃದ್ಧಿಯನ್ನು ಹುಡುಕುತ್ತಿದ್ದಾರೆ.

# ಮಾದಕ ವಸ್ತುಗಳ ಹಾವಳಿ ತಡೆಗೆ 'ಜೀರೋಟಾಲರೆನ್ಸ್'

ಕೋಲಾರ

ಜಿಲ್ಲೆಯಲ್ಲಿ ಮಾದಕ ವಸ್ತುಗಳ ಸಾಗಾಟ ಮತ್ತು ಬಳಕೆಯನ್ನು ಸಂಪೂರ್ಣವಾಗಿ ತಡೆಗಟ್ಟುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಹಾಗೂ ಸಂಬಂಧಪಟ್ಟ ಇಲಾಖೆಗಳು ಜಂಟಿಯಾಗಿ ಕಾರ್ಯಪ್ರವೃತ್ತರಾಗಬೇಕು. ಮಾದಕ ದ್ರವ್ಯ ವ್ಯಸನದ ವಿರುದ್ಧ 'ಜೀರೋ ಟಾಲರೆನ್ಸ್' ನೀತಿಯನ್ನು ಅನುಸರಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ತಿಳಿಸಿದರು.

ಇಂದು ನಗರದ ಜಿಲ್ಲಾಧಿಕಾರಿ ಕಚೇರಿಯ ಕೇಸ್ವಾನ್ ಸಭಾಂಗಣದಲ್ಲಿ ನಡೆದ ಎನ್.ಸಿ.ಓ.ಆರ್.ಡಿ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

ತರಕಾರಿ ಮತ್ತು ಕೃಷಿ ಉತ್ಪನ್ನಗಳ ನೆಪದಲ್ಲಿ ಲಾರಿ ಹಾಗೂ ಇತರೆ ವಾಹನಗಳಲ್ಲಿ ಮಾದಕ ವಸ್ತುಗಳನ್ನು ಸಾಗಾಟ ಮಾಡುತ್ತಿರುವ ಬಗ್ಗೆ



ಮಾಹಿತಿ ಲಭ್ಯವಿದ್ದು, ಇಂತಹ ವಾಹನಗಳ ಮೇಲೆ ತೀವ್ರ ನಿಗಾ ಇರಿಸುವಂತೆ ಜಿಲ್ಲಾಧಿಕಾರಿ ಪೊಲೀಸ್ ಇಲಾಖೆಗೆ ನಿರ್ದೇಶನ ನೀಡಿದರು.

ಸಾರಿಗೆದಾರರು, ಚಾಲಕರು ಮತ್ತು ವರ್ತಕರಿಗೆ ಮಾದಕ ವಸ್ತುಗಳ ಸಾಗಾಟದ ಗಂಭೀರತೆಯ ಬಗ್ಗೆ ಅರಿವು ಮೂಡಿಸಬೇಕು. ಉದ್ದೇಶಪೂರ್ವಕವಾಗಿ ಅಥವಾ ಅರಿವಿಲ್ಲದೆ ಇಂತಹ ಚಟುವಟಿಕೆಗಳಲ್ಲಿ ಭಾಗಿಯಾಗುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಮಾದಕ ವಸ್ತುಗಳ ಮಾರಾಟ ಮತ್ತು ಸಾಗಾಟದಲ್ಲಿ ಪದೇ ಪದೇ ಭಾಗಿಯಾಗುವ ಕಳ್ಳಸಾಗಣೆದಾರರ ಮೇಲೆ 'ಗುಂಡಾ ಕಾಯ್ದೆ'ಯಡಿ ಪ್ರಕರಣಗಳನ್ನು ದಾಖಲಿಸಲು ಮುಂದಾಗುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಕೈಗಾರಿಕಾ ಪ್ರದೇಶಗಳಲ್ಲಿ ಮತ್ತು ಕಾರ್ಮಿಕರ ವಸತಿ ಪ್ರದೇಶಗಳಲ್ಲಿ ಮಾದಕ ದ್ರವ್ಯಗಳ ಹಾವಳಿ ಪತ್ತೆಹಚ್ಚಲು ಸಮೀಕ್ಷೆ ನಡೆಸಬೇಕು. ಕಾರ್ಮಿಕ ಇಲಾಖೆ ಹಾಗೂ ಕೈಗಾರಿಕಾ ಇಲಾಖೆಗಳ ಸಮನ್ವಯದೊಂದಿಗೆ ಕಾರ್ಮಿಕರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದರು.

ಮಾದಕ ವಸ್ತುಗಳಿಗೆ ದಾಸರಾದವರಿಗೆ ಚಿಕಿತ್ಸೆ ಮತ್ತು ಪುನರ್ವಸತಿ ಕಲ್ಪಿಸಲು ಜಿಲ್ಲೆಯಲ್ಲಿರುವ ಡ್ರಗ್ ಡಿ-ಅಡಿಕ್ಷನ್ ಸೆಂಟರ್‌ಗಳ ಸಹಕಾರ ಪಡೆದುಕೊಳ್ಳಲು ಸಭೆಯಲ್ಲಿ ನಿರ್ಧರಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್ ಪಿ. ಬಾಗೇವಾಡಿ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಟಿ. ಕೆ. ರಮೇಶ್, ಕೋಲಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕನ್ನಿಕಾ ಸಿಕ್ರಿವಾಲ್, ಕೆಜಿಎಫ್ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಷು ರಜಪೂತ್, ಉಪವಿಭಾಗಾಧಿಕಾರಿ ಜಂಬಗಿ ರೇಣುಕಾಪ್ರಸಾದ್ ದಿಲೀಪ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಶ್ರೀನಿವಾಸ್, ಕಾರ್ಮಿಕ ಇಲಾಖೆಯ ವರಲಕ್ಷ್ಮಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಶ್ರೀನಿವಾಸನ್ ಸೇರಿದಂತೆ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

29/04/2026
# ಭಾರತ ಸಾರಥಿ
BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ಶ್ರೀ ಶಂಕರ ಸೇವಾ ಸಮಿತಿ ವತಿಯಿಂದ ಮಧುಗಿರಿ ಪಟ್ಟಣದ ಶ್ರೀ ಶಂಕರ ಮಠದಲ್ಲಿ ಸಾಮೂಹಿಕ ಉಪನಯನಗಳು ನೆರವೇರಿತು. ಶ್ರೀ ಶಂಕರ ಸೇವಾ ಸಮಿತಿ ಅಧ್ಯಕ್ಷ ಬಿ. ಆರ್. ಸತ್ಯನಾರಾಯಣ, ತಾಲ್ಲೂಕು ಬ್ರಾಹ್ಮಣ ಸಂಘದ ಅಧ್ಯಕ್ಷ ಹಾಗೂ ವಕೀಲ ದತ್ತಾತ್ರೇಯ, ಖಜಾಂಚಿ ಕೆ. ಲಕ್ಷ್ಮಿ ಪ್ರಸಾದ್, ನಿರ್ದೇಶಕರುಗಳಾದ ಕೆ. ನಾರಾಯಣ್, ಟಿ.ಎಚ್.ಸಂಜೀವ ಮೂರ್ತಿ, ಭೀಮೇಶ್ ಶರ್ಮ, ಶ್ರೀನಿವಾಸ ಶಾಸ್ತ್ರಿ, ಎಂ. ಎನ್. ನಾಗಭೂಷಣ್, ಬಿ. ಎಸ್. ರವೀಶ್, ಕೆ.ಆರ್.ರಮ್ಯಾ, , ಎಂ. ಎಸ್. ಬದರಿನಾಥ್, ಪ್ರದೀಪ್, ನಟರಾಜ ದೀಕ್ಷಿತ್, ಎಚ್. ವಿ. ಮಂಜುನಾಥ್, ಎಸ್. ಜೆ. ಮುರಳಿಧರ, ರಾಮಚಂದ್ರರಾವ್, ರಘುನಾಥ್ ಬಾಬು, ಹನುಮಂತರಾವ್, ಮುಂತಾದವರು ಇದ್ದರು.

## ಜನಿವಾರ ತೆಗೆಸಿದ ಪ್ರಕರಣ: ಕ್ರಮಕ್ಕೆ ಒತ್ತಾಯ

ಬೆಂಗಳೂರು

ಸಿಇಟಿ ಪರೀಕ್ಷೆಯ ವೇಳೆ ವಿದ್ಯಾರ್ಥಿಗಳ ಧಾರ್ಮಿಕ ಭಾವನೆಗಳಿಗೆ ಅವಮಾನ ಮಾಡಲಾಗಿದೆ. ಈ ಘಟನೆಯ ವಿರುದ್ಧ ಕ್ರಮ ಕೈಗೊಳ್ಳುವಂತೆ ವಿಪ್ರ ಪರಸ್ಪರ ಸಹಾಯ ಸಮಿತಿ ಆಗ್ರಹಿಸಿ ಮನವಿ ಸಲ್ಲಿಸಿದೆ.

ಏಪ್ರಿಲ್ 23ರಂದು ನಡೆದ ಸಿಇಟಿ ಪರೀಕ್ಷೆಯ ಸಂದರ್ಭದಲ್ಲಿ ಕೋರ ಮಂಗಲದಲ್ಲಿರುವ ಕೃಪಾನಿಧಿ ಶಾಲೆ ಹಾಗೂ ನಾಗಾರ್ಜುನ ಎಜುಕೇಶನ್ ಸೊಸೈಟಿ ಪರೀಕ್ಷಾ ಕೇಂದ್ರಗಳಲ್ಲಿ ವಿಪ್ರ ಸಮುದಾಯದ ವಿದ್ಯಾರ್ಥಿಗಳ ಧಾರ್ಮಿಕ ಚಿಹ್ನೆಯಾದ ಜನಿವಾರವನ್ನು ಪರೀಕ್ಷಾ ಸಿಬ್ಬಂದಿ ಬಲವಂತವಾಗಿ ತೆಗೆಸಿರುವುದಾಗಿ ಮತ್ತು ಕತ್ತರಿಸಿ ಹಾಕಲಾಗಿತ್ತು.



ಈ ಘಟನೆ ಮಾನವೀಯತೆ ಮತ್ತು ಸಂವಿಧಾನಾತ್ಮಕ ಹಕ್ಕುಗಳಿಗೆ ವಿರುದ್ಧವಾಗಿದ್ದು, ಅತ್ಯಂತ ಖಂಡನೀಯ ಎಂದು ಸಮಿತಿ ಹೇಳಿಕೆ ನೀಡಿದೆ. ಈ ಸಂಬಂಧ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಲಕ್ಷ್ಮಿಕಾಂತ್ ರೆಡ್ಡಿ ಅವರಿಗೆ ಮನವಿ ಸಲ್ಲಿಸಲಾಗಿದೆ.

ಈ ಸಂದರ್ಭದಲ್ಲಿ ವಿಪ್ರ ಪರಸ್ಪರ ಸಹಾಯ ಸಮಿತಿಯ ಗೌರವಾಧ್ಯಕ್ಷರಾದ ಇಳೈ ಆಳ್ವಾರ್ ಸ್ವಾಮೀಜಿ, ಸಂಚಾಲಕರಾದ ಬಿ.ಎಸ್. ಸುಂದರೇಶ್, ಸಹಸಂಚಾಲಕರಾದ ಎಸ್. ರಂಗನಾಥ, ರಾಜ್ಯ ಕಾರ್ಯಕಾರಿಣಿ ಸದಸ್ಯರಾದ ಎಂ.ಎಸ್. ಪ್ರಶಾಂತ್, ಎನ್. ವಿಶ್ವನಾಥ್ ಸೇರಿದಂತೆ ಹಲವು ಸದಸ್ಯರು ಉಪಸ್ಥಿತರಿದ್ದರು.

ಘಟನೆಯ ಕುರಿತು ಸಮಗ್ರ ತನಿಖೆ ನಡೆಸಿ, ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸಮಿತಿ ಒತ್ತಾಯಿಸಿದೆ.

## ವೈದ್ಯರ ವರ್ಗಾವಣೆಗೆ ಖಂಡನೆ

ಬಂಗಾರಪೇಟೆ

ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಸೇವೆ ಸಲ್ಲಿಸುತ್ತಿದ್ದ ವೈದ್ಯರಾದ ಡಾ. ಮಹಮ್ಮದ್ ಉಮರ್ ಫಾರೂಕ್ ಅವರ ಏಕಾಏಕಿ ವರ್ಗಾವಣೆ ಹಿನ್ನೆಲೆಯಲ್ಲಿ ಸ್ಥಳೀಯ ಸಾರ್ವಜನಿಕರಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿದೆ.

ಹಲವಾರು ವರ್ಷಗಳಿಂದ ಸೇವಾಭಾವ ಮತ್ತು ಸಮಾಜಮುಖಿ ಮನೋಭಾವದಿಂದ ರೋಗಿಗಳಿಗೆ ಚಿಕಿತ್ಸೆ ನೀಡುತ್ತಿದ್ದ ಡಾ. ಉಮರ್ ಫಾರೂಕ್ ಅವರನ್ನು ಯಾವುದೇ ಪೂರ್ವ ಸೂಚನೆಯಿಲ್ಲದೆ ವರ್ಗಾವಣೆ ಮಾಡಿರುವುದು ಜನತೆಗೆ ಆಘಾತ ಉಂಟುಮಾಡಿದೆ. ವೈದ್ಯಕೀಯ ಸೇವೆಗೆ ಮಾತ್ರ ಸೀಮಿತವಾಗದೆ ಮಾನವೀಯ ಮೌಲ್ಯಗಳೊಂದಿಗೆ ಕೆಲಸ ಮಾಡುತ್ತಿದ್ದ ಅವರು ಬಡವರು, ನಿರ್ಗತಿಕರು, ವೃದ್ಧರು ಸೇರಿದಂತೆ ಎಲ್ಲಾ ವರ್ಗದ ರೋಗಿಗಳಿಗೂ ಸಮಾನ ಸೇವೆ ನೀಡುವ ಮೂಲಕ ಅಪಾರ ವಿಶ್ವಾಸ ಗಳಿಸಿದ್ದರು.

ವಿಶೇಷವಾಗಿ ಆರ್ಥಿಕವಾಗಿ ಹಿಂದುಳಿದವರಿಗೆ ಉಚಿತ ಸಲಹೆ, ತುರ್ತು ಸಂದರ್ಭಗಳಲ್ಲಿ ಸಮಯದ ಮಿತಿ ನೋಡದೆ ಸೇವೆ ನೀಡುವುದು ಅವರ ಪ್ರಮುಖ ಗುಣವಾಗಿತ್ತು. ಅವರ ಹಾಜರಾತಿಯಿಂದಲೇ ಆಸ್ಪತ್ರೆಯಲ್ಲಿ ರೋಗಿಗಳ ಸಂಖ್ಯೆ ಹೆಚ್ಚಾಗುತ್ತಿತ್ತು. "ಡಾ. ಉಮರ್ ಫಾರೂಕ್ ಇದ್ದರೆ ನಮಗೆ ಧೈರ್ಯ ಇರುತ್ತಿತ್ತು" ಎಂದು ಅನೇಕ ರೋಗಿಗಳು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಡಾ. ಉಮರ್ ಫಾರೂಕ್ ಅವರು ಔಷಧಿ ಕೊರತೆ, ಸಿಬ್ಬಂದಿ ಅಭಾವದ ನಡುವೆಯೂ ಆಸ್ಪತ್ರೆಯ ಅಭಿವೃದ್ಧಿಗೆ ಶ್ರಮಿಸಿದ್ದು, ಅವರ ಅನುಪಸ್ಥಿತಿಯಿಂದ ಆಸ್ಪತ್ರೆಯ ಸೇವೆ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ಸ್ಥಳೀಯರು ಅಭಿಪ್ರಾಯಪಟ್ಟಿದ್ದಾರೆ.

ಈ ಹಿನ್ನೆಲೆಯಲ್ಲಿ ಸ್ಥಳೀಯ ಸಂಘಟನೆಗಳು ಹಾಗೂ ನಾಗರಿಕರು ಪ್ರತಿಭಟನೆಗೆ ಸಜ್ಜಾಗುತ್ತಿದ್ದು, "ಉತ್ತಮ ಸೇವೆ ನೀಡಿದ ವೈದ್ಯರನ್ನು ಉಳಿಸಿಕೊಳ್ಳುವುದು ನಮ್ಮ ಹಕ್ಕು. ಸರ್ಕಾರ ತಕ್ಷಣ ಕ್ರಮ ಕೈಗೊಂಡು ವರ್ಗಾವಣೆ ಹಿಂಪಡೆಯಬೇಕು" ಎಂದು ಒತ್ತಾಯಿಸಿದ್ದಾರೆ.

## ಕಾಲು-ಬಾಯಿ ರೋಗ ಮುಕ್ತ ಅಭಿಯಾನಕ್ಕೆ ಚಾಲನೆ

ಬಂಗಾರಪೇಟೆ

ತಾಲ್ಲೂಕಿನ ಹೈನುಗಾರರ ಆರ್ಥಿಕ ಬೆನ್ನೆಲುಬಾಗಿರುವ ಜಾನುವಾರುಗಳ ಆರೋಗ್ಯ ರಕ್ಷಣೆಗೆ ಪಶುಪಾಲನಾ ಇಲಾಖೆ ಮತ್ತು ಕೋಮುಲ್ ವತಿಯಿಂದ ಕಾಲು–ಬಾಯಿ ರೋಗ ಮುಕ್ತ ಅಭಿಯಾನಕ್ಕೆ ಚಾಲನೆ ನೀಡಲಾಗಿದೆ. ನಗರದ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಕಚೇರಿಯಲ್ಲಿ ಸೋಮವಾರ ನಡೆದ ಕಾರ್ಯಕ್ರಮದಲ್ಲಿ ಶಾಸಕ ಎಸ್.ಎನ್. ನಾರಾಯಣಸ್ವಾಮಿ ಅಭಿಯಾನಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ರೈತರ ಆರ್ಥಿಕ ಪ್ರಗತಿಯಲ್ಲಿ ಜಾನುವಾರುಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದರು. ಕಾಲು–ಬಾಯಿ ರೋಗದಂತಹ ಸಾಂಕ್ರಾಮಿಕ




ರೋಗಗಳು ಹರಡಿದರೆ ಹೈನುಗಾರರು ತೀವ್ರ ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆ ಇದೆ ಎಂದು ಎಚ್ಚರಿಸಿದರು. ಹೈನುಗಾರಿಕೆಯನ್ನು ನಂಬಿ ಬದುಕುತ್ತಿರುವ ಸಾವಿರಾರು ರೈತ ಕುಟುಂಬಗಳಿಗೆ ಜಾನುವಾರುಗಳೇ ನಿಜವಾದ ಆಸ್ತಿ ಎಂದು ಹೇಳಿದರು.

ರೋಗ ಬಂದ ನಂತರ ಚಿಕಿತ್ಸೆಗಾಗಿ ಸಾವಿರಾರು ರೂಪಾಯಿ ಖರ್ಚು ಮಾಡುವುದಕ್ಕಿಂತ ಮುನ್ನೆಚ್ಚರಿಕೆಯಾಗಿ ಲಸಿಕೆ ಹಾಕಿಸುವುದು ಹೆಚ್ಚು ಲಾಭದಾಯಕ ಎಂದು ಸಲಹೆ ನೀಡಿದರು. ಸರ್ಕಾರ ಮತ್ತು ಕೋಮುಲ್ ವತಿಯಿಂದ ಉಚಿತವಾಗಿ ನೀಡಲಾಗುತ್ತಿರುವ ಲಸಿಕೆ ಸೌಲಭ್ಯವನ್ನು ಪ್ರತಿಯೊಬ್ಬ ರೈತರೂ ಬಳಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ಪಶುಪಾಲನಾ ಇಲಾಖೆಯ ಸಹಾಯಕ ನಿರ್ದೇಶಕ ಸುದರ್ಶನ್ ಮಾತನಾಡಿ, ಕಾಲು–ಬಾಯಿ ರೋಗವು ವೈರಾಣುಗಳಿಂದ ಹರಡುವುದರಿಂದ ಮುನ್ನೆಚ್ಚರಿಕೆ ಅತ್ಯಂತ ಮುಖ್ಯವಾಗಿದೆ ಎಂದರು. ಲಸಿಕೆ ಹಾಕಿಸುವುದರಿಂದ ಜಾನುವಾರುಗಳಲ್ಲಿ ರೋಗನಿರೋಧಕ ಶಕ್ತಿ ಹೆಚ್ಚುತ್ತದೆ. ರೋಗ ಹರಡಿದರೆ ಹಾಲು ಉತ್ಪಾದನೆ ಕುಂಠಿತವಾಗಿ ರೈತರ ಆದಾಯಕ್ಕೆ ಹೊಡೆತ ಬೀಳುತ್ತದೆ ಎಂದು ವಿವರಿಸಿದರು.

ಗ್ರಾಮಕ್ಕೆ ಲಸಿಕಾ ತಂಡ ಬಂದಾಗ ಎಲ್ಲಾ ಜಾನುವಾರುಗಳಿಗೆ ಲಸಿಕೆ ಹಾಕಿಸಬೇಕು. ಗರ್ಭಿಣಿ ಜಾನುವಾರುಗಳಿದ್ದರೆ ವೈದ್ಯರ ಸಲಹೆ ಪಡೆದು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು. ಕೊಟ್ಟಿಗೆಯನ್ನು ಸ್ವಚ್ಛವಾಗಿಡುವುದು, ಸುಣ್ಣ ಅಥವಾ ಸೋಂಕುನಿವಾರಕ ದ್ರಾವಣಗಳನ್ನು ಬಳಸಿ ರೋಗ ಹರಡುವಿಕೆಯನ್ನು ತಡೆಯುವುದು ಅಗತ್ಯವೆಂದರು.

ಹೊಸ ಜಾನುವಾರುಗಳನ್ನು ಖರೀದಿಸಿದಾಗ ಅವುಗಳನ್ನು ಕೆಲ ದಿನ ಪ್ರತ್ಯೇಕವಾಗಿ ಇಟ್ಟು ಗಮನಿಸಬೇಕು. ಲಸಿಕೆ ಹಾಕಿದ ಬಳಿಕ ಕಿವಿಗೊಪ್ಪೆ ಹಾಕಿ ನೋಂದಣಿ ಮಾಡುವುದು ಕಡ್ಡಾಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕೋಮುಲ್ ಉಪ ವ್ಯವಸ್ಥಾಪಕ ಗಿರೀಶ್ ಗೌಡ, ಲಕ್ಷ್ಮೀ, ಮೋಹನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## 'ಮಹಿಳಾ ವಿರೋಧಿ ಕಾಂಗ್ರೆಸ್ ಪಕ್ಷಕ್ಕೆ ತಕ್ಕ ಶಾಸ್ತಿ'

ಕನಕಪುರ

ಲೋಕಸಭೆ ವಿಧಾನ ಸಭೆಗಳಲ್ಲಿ ಮಹಿಳಾ ಮೀಸಲಾತಿ ಮಸೂದೆಗೆ ಅವಕಾಶ ನೀಡದಿದ್ದಲ್ಲಿ ಇಂಡಿಯಾ ಮೈತ್ರಿಕೂಟದ ವಿರುದ್ಧ ದೇಶದ ನಾರಿಯರು ನಿರಂತರ ಹೋರಾಟ ಮುಂದುವರೆಯುವುದಾಗಿ ತಾಲೂಕು ಬಿಜೆಪಿ ಮಹಿಳಾ ಮೋರ್ಚಾದ ಮಹಿಳಾ ಮುಖಂಡರು ಎಚ್ಚರಿಕೆ ನೀಡಿದ್ದಾರೆ.

ನಗರದ ಚನ್ನಬಸಪ್ಪ ವೃತ್ತದ ಬಳಿ ಮಹಿಳಾ ಮೀಸಲಾತಿ ಜಾರಿಗೆ ಅಡ್ಡಿಪಡಿಸುತ್ತಿರುವ ಕಾಂಗ್ರೆಸ್ ಹಾಗೂ ಇಂಡಿಯ ಮೈತ್ರಿಕೂಟದ ವಿರುದ್ಧ ಪ್ರತಿಭಟನೆ ನಡೆಸಿ ಮಾತನಾಡಿದ ಬಿಜೆಪಿ ಮಹಿಳಾ ಮುಖಂಡರುಗಳಾದ ಮಮತಾ ಹಾಗೂ ಪವಿತ್ರ ಸೇರಿದಂತೆ ಹಲವರು ಮಾತನಾಡಿ ನಮ್ಮ ದೇಶದ ಮಹಿಳೆಯರು ಅಡುಗೆ ಮನೆಗೆ ಸ್ಥೀಮಿತವಲ್ಲ, ಇವರು ದೇಶ ಸೈನಿಕ ಹುದ್ದೆ ಸೇರಿದಂತೆ ಹಲವಾರು ರಂಗಗಳಲ್ಲಿ ಪುರುಷರ ಸಮಾನವಾಗಿ ದುಡಿಯುತ್ತಿದ್ದಾರೆ, ಮಹಿಳಾ ಮಸೂದೆ ಅಂಗೀಕಾರವಾಗಿದ್ದಲ್ಲಿ ದೇಶದ ಮಹಿಳೆಯರು ವಿರೋಧಿಗಳಿಗೆ ತಕ್ಕಪಾಠ ಕಲಿಸುತ್ತಾರೆ ಎಂದರು.



ಮಹಿಳಾ ಮಸೂದೆಯ ಬಗ್ಗೆ ಇಂಡಿಯಾ ಒಕ್ಕೂಟದ ನಾಯಕರು ಇಲ್ಲ ಸಲ್ಲದ ಅಪಪ್ರಚಾರ ಮಾಡುತ್ತಿದ್ದು ಮಹಿಳೆ ಯರ ಹಕ್ಕುಗಳನ್ನು ಕಸಿದುಕೊಳ್ಳಲು ಪ್ರಧಾನಿ ಮೋದಿ ಹಾಗೂ ಬಿಜೆಪಿ ಪಕ್ಷದ ಬಗ್ಗ ಅಪಪ್ರಚಾರ ಮಾಡುತ್ತಾ ದೇಶದ ಜನರಿಗೆ ತಪ್ಪು ಸಂದೇಶ ನೀಡುವ ಮೂಲಕ ರಾಷ್ಟ್ರ ಹಾಗೂ ಮಹಿಳಾ ವಿರೋದಿ ಧೋರಣೆಯನ್ನು ಖಂಡಿಸುವುದಲ್ಲದೆ ಮಹಿಳೆಯರ ಹಕ್ಕುಗಳನ್ನು ಕಸಿಯಲು ನಾವು ಎಂದಿಗೂ ಅವಕಾಶ ಕೊಡುವುದಿಲ್ಲ.

ಈ ಬಗ್ಗೆ ತಾಲ್ಲೂಕು ಹಾಗೂ ರಾಜ್ಯಾದ್ಯಂತ ಜಾಗೃತಿ ಮೂಡಿಸುವ ಕೆಲಸವನ್ನು ಮಹಿಳಾ ಮೋರ್ಚಾ ಸದಸ್ಯರು ಮಾಡಲಿದ್ದಾರೆ ಎಂದರು.

ಅರ್.ಇ.ಎಸ್. ಮುಂಭಾಗದ ಗಾಂಧಿ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮುಖ್ಯರಸ್ತೆಯಲ್ಲಿ ಇಂಡಿಯಾ ಒಕ್ಕೂಟದ ವಿರುದ್ಧ ಘೋಷಣೆ ಕೂಗಿ ವೃತ್ತದ ಬಳಿ ಸಮಾವೇಶಗೊಂಡು ಪ್ರತಿಭಟನೆ ನಡೆಸಿ ರಾಹುಲ್ ಗಾಂಧಿ ಪ್ರತಿಕೃತಿ ದಹಿಸಿ ಆಕ್ರೋಶ ವ್ಯಕ್ತಪಡಿಸಿದ ನಂತರ ತಾಲೂಕು ಕಚೇರಿಗೆ ಧಾವಿಸಿ ಮಹಿಳಾ ಮೀಸಲಾತಿ ಮಸೂದೆ ಜಾರಿಗಾಗಿ ಒತ್ತಾಯಿಸುವ ಮನವಿ ಪತ್ರವನ್ನು ತಹಶೀಲ್ದಾರ್ ಸಂಜಯ್ ಅವರಿಗೆ ನೀಡಿದರು.

ಬಿಜೆಪಿ ಗ್ರಾಮಾಂತರ ಘಟಕದ ಅಧ್ಯಕ್ಷ ಕೆ ಪಿ ಕುಮಾರ್, ನಗರ ಮಂಡಲದ ಅಧ್ಯಕ್ಷ ಕೆ.ಆರ್. ಚಂದ್ರಶೇಖರ್, ಮಾಜಿ ಅಧ್ಯಕ್ಷ ಕೋಟೆ ಮಂಜುನಾಥ್, ಜಿಲ್ಲಾ ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ನಾಗಾನಂದ, ಗ್ರಾಮಾಂತರ ಬಿಜೆಪಿ ಉಪಾಧ್ಯಕ್ಷ ಅಶ್ವತ್ಥ್ ನಾರಾಯಣ, ಪ್ರಧಾನ ಕಾರ್ಯದರ್ಶಿ ಪಾಲಾಕ್ಷ, ಮುಖಂಡರುಗಳಾದ ಮರೀಗೌಡ, ಡಿ.ಶ್ರೀನಿವಾಸ್ ರಾಜ್ಯಬಿಜೆಪಿ ಸದಸ್ಯೆ ತಹಸೀನಾ ಖಾನಂ ಸೇರಿದಂತೆ ಪಕ್ಷದ ಹಲವು ಮುಖಂಡರು ಕಾರ್ಯಕರ್ತರು ಈ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಪಿ.ಪಾಂಡುಸಿಂಧೆ ಅವಿರೋಧ ಆಯ್ಕೆ

ದೊಡ್ಡಬಳ್ಳಾಪುರ

ಕರ್ನಾಟಕ ರಾಜ್ಯ ಪೌರನೌಕರರ ಸಂಘದ ಬೆಂಗಳೂರು ಗ್ರಾಮಾಂತರ ಜಿಲ್ಲಾ ಅಧ್ಯಕ್ಷರಾಗಿ ನಗರಸಭೆಯ ಲೆಕ್ಕಾಧಿಕಾರಿ ಡಾ. ಪಿ.ಪಾಂಡುಸಿಂಧೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ಅಧ್ಯಕ್ಷ ಪ್ರಭಾಕರ್ ಆದೇಶದಂತೆ ಆಯ್ಕೆ ಪ್ರಕ್ರಿಯೆ ನಡೆದಿದೆ.



ನಗರದ ಡಾ.ರಾಜಕುಮಾರ್ ಕಲಾ ಮಂದಿರದಲ್ಲಿ ಶುಕ್ರವಾರ ನಡೆದ ಸಭೆಯಲ್ಲಿ ಸರ್ವಾನುಮತದಿಂದ ಜಿಲ್ಲಾಧ್ಯಕ್ಷ ಮತ್ತು ಜಿಲ್ಲಾ ಪದಾಧಿಕಾರಿಗಳ ಆಯ್ಕೆ ಮಾಡಲಾಯಿತು.

ನೂತನ ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾದ ಡಾ.ಪಿ.ಪಾಂಡುಸಿಂಧೆ ಮಾತನಾಡಿ ಪೌರಕಾರ್ಮಿಕರು ಪ್ರತಿನಿತ್ಯವೂ ಹಲವು ಸಮಸ್ಯೆಗಳನ್ನು ಅನುಭವಿಸುತ್ತಿದ್ದಾರೆ. ಇಂತಹ ಜ್ವಲಂತ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸ್ಪಂದಿಸುತ್ತೇನೆ.

ಸರ್ಕಾರದಿಂದ ದೊರೆಯುವಂತ ಪ್ರತಿಯೊಂದು ಸೌಲಭ್ಯಗಳನ್ನು ಪ್ರತಿಯೊಬ್ಬ ಪೌರನೌಕರರಿಗೂ ತಲುಪುವಂತೆ ನೋಡಿಕೊಳ್ಳಲಾಗಿವುದು. ನೌಕರರು ಸಮಸ್ಯೆಗಳನ್ನ ತಿಳಿಸಿದರೆ ಸೂಕ್ತ ಕ್ರಮವಹಿಸಲಾಗುವುದು ಎಂದರು.

## ಮುಷ್ಕರಕ್ಕೆ ರೈತರ ಬೆಂಬಲ

ಚಿಕ್ಕಬಳ್ಳಾಪುರ

ಡಿ.ಎ.ಪಿ. ಹಾಗೂ ಯೂರಿಯಾ ರಸಗೊಬ್ಬರಗಳೊಂದಿಗೆ ಇತರೆ ರಸಗೊಬ್ಬರ ಉತ್ಪನ್ನಗಳ ಕಡ್ಡಾಯ ಖರೀದಿ ಜೋಡಣೆಯನ್ನು ವಿರೋಧಿಸಿ, ರಸಗೊಬ್ಬರ ಸಾಗಾಣಿಕೆ ವೆಚ್ಚವನ್ನು ಉತ್ಪಾದಕ ಕಂಪನಿಗಳೇ ಭರಿಸಬೇಕು ಹಾಗೂ ರೈತರ ಗುರುತು ಸಂಖ್ಯೆ ಪಡೆಯಲು ಹೆಚ್ಚಿನ ಅವಧಿ ನೀಡಬೇಕು ಎಂಬ ಪ್ರಮುಖ ಬೇಡಿಕೆಗಳನ್ನು ಮುಂದಿರಿಸಿ ಏಪ್ರಿಲ್ 27ರಂದು ದೇಶದಾದ್ಯಂತ ಕೃಷಿ ಪರಿಕರ ಮಾರಾಟಗಾರರು ಕರೆ ನೀಡಿದ್ದ ರಾಷ್ಟ್ರವ್ಯಾಪಿ ಮುಷ್ಕರಕ್ಕೆ ಕರ್ನಾಟಕ ಪ್ರಾಂತ ರೈತ ಸಂಘ ಚಿಕ್ಕಬಳ್ಳಾಪುರ ಜಿಲ್ಲಾ ಸಮಿತಿ ಸಂಪೂರ್ಣ ಬೆಂಬಲ ವ್ಯಕ್ತಪಡಿಸಿದೆ.

ಈ ಕುರಿತು ಸಂಘ ಬಿಡುಗಡೆ ಮಾಡಿದ ಪ್ರಕಟಣೆಯಲ್ಲಿ, ರಸಗೊಬ್ಬರ, ಕೀಟನಾಶಕ, ಬಿತ್ತನೆ ಬೀಜ ಸೇರಿದಂತೆ ವಿವಿಧ ಕೃಷಿ ಪರಿಕರಗಳ ಕಾಳಸಂತೆ ಮಾರಾಟ, ಕಳಪೆ ಗುಣಮಟ್ಟದ ಸರಕುಗಳ ವಿತರಣಾ, ನಿಗದಿತ ಗರಿಷ್ಠ ಚಿಲ್ಲರೆ ದರಕ್ಕಿಂತ ಹೆಚ್ಚಾಗಿ ಮಾರಾಟ ಮಾಡುವ ದುರುಪಯೋಗ, ಅಗತ್ಯವಿಲ್ಲದ ಪರಿಕರಗಳ ಕಡ್ಡಾಯ ಖರೀದಿಗೆ ಒತ್ತಾಯಿಸುವ ಶೋಷಣೆಗೆ ರೈತರು ನಿರಂತರವಾಗಿ ಒಳಗಾಗುತ್ತಿರುವುದಾಗಿ ಆರೋಪಿಸಲಾಗಿದೆ.

ಕೆಲವು ದೊಡ್ಡ ಬಹುರಾಷ್ಟ್ರೀಯ ಕಾರ್ಪೊರೇಟ್ ಕಂಪನಿಗಳು ಕೃಷಿ ಪರಿಕರಗಳ ಉತ್ಪಾದನೆ ಮತ್ತು ಮಾರಾಟದ ಮೇಲೆ ಏಕಸ್ವಾಮ್ಯ ಸಾಧಿಸಿರುವುದೇ ಈ ಶೋಷಣೆಗೆ ಮೂಲ ಕಾರಣವಾಗಿದ್ದು, ಇಂತಹ ಅನ್ಯಾಯಗಳ ವಿರುದ್ಧ ಚಿಲ್ಲರೆ ಮಾರಾಟಗಾರರು ನಡೆಸಿದ ರಾಷ್ಟ್ರವ್ಯಾಪಿ ಮುಷ್ಕರವನ್ನು ಸಂಘ ಸ್ವಾಗತಿಸಿದೆ ಎಂದು ತಿಳಿಸಲಾಗಿದೆ.

ಅದೇ ವೇಳೆ, ದೇಶದ ಆಹಾರ ಭದ್ರತೆ ಮತ್ತು ಕೃಷಿ ಉತ್ಪಾದನೆಯಲ್ಲಿ ಸುಧಾರಿತ ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳ ಮಹತ್ವವನ್ನು ನಿರ್ಲಕ್ಷಿಸಲು ಸಾಧ್ಯವಿಲ್ಲ. ಜಾಗತಿಕ ಮಟ್ಟದಲ್ಲಿ ನಡೆಯುತ್ತಿರುವ ಯುದ್ಧ ಪರಿಸ್ಥಿತಿಗಳ ಪರಿಣಾಮವಾಗಿ ಉತ್ಪಾದನೆ ಮತ್ತು ಲಭ್ಯತೆ ಮೇಲೆ ಪರಿಣಾಮ ಬೀರುತ್ತಿದ್ದು, ಇದರಿಂದ ಕೃಷಿ ಉತ್ಪಾದನೆಗೆ ತೊಂದರೆ ಉಂಟಾಗುವ ಸಾಧ್ಯತೆ ಇದೆ ಎಂದು ಸಂಘ ಎಚ್ಚರಿಸಿದೆ.

ಹೀಗಾಗಿ ತಕ್ಷಣವೇ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕೃಷಿ ಪರಿಕರಗಳ ಬೆಲೆ ನಿಯಂತ್ರಣಕ್ಕೆ ಕ್ರಮ ಕೈಗೊಂಡು, ರೈತರಿಗೆ ಸರಿಯಾದ ಸಮಯದಲ್ಲಿ ಮತ್ತು ಕೈಗೆಟುಕುವ ದರದಲ್ಲಿ ಲಭ್ಯವಾಗುವಂತೆ ವ್ಯವಸ್ಥೆ ಮಾಡಬೇಕು ಎಂದು ಸಂಘದ ಗೌರವಾಧ್ಯಕ್ಷ ಬಿ.ಎನ್. ಮುನಿಕೃಷ್ಣಪ್ಪ, ಜಿಲ್ಲಾಧ್ಯಕ್ಷ ಜಯರಾಮರೆಡ್ಡಿ ಹಾಗೂ ಜಿಲ್ಲಾ ಕಾರ್ಯದರ್ಶಿ ಚನ್ನರಾಯಪ್ಪ ಜಂಟಿ ಪ್ರಕಟಣೆಯಲ್ಲಿ ಆಗ್ರಹಿಸಿದ್ದಾರೆ.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು ಹಾಗೂ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಕಚೇರಿ ಹಾಗೂ ವಿವಿಧ ಇಲಾಖೆಗಳು ಮತ್ತು ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಮಲೇರಿಯಾ ದಿನ ಏಪ್ರಿಲ್-25 ಅಂಗವಾಗಿ ಜಿಲ್ಲಾ ಮಟ್ಟದಲ್ಲಿ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಮತ್ತು ಮುಂಜಾಗ್ರತ ಕ್ರಮಗಳ ಬಗ್ಗೆ ಜಾಗೃತಿ ಕಾರ್ಯಕ್ರಮವನ್ನು ನಗರದ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದಲ್ಲಿ ಆಯೋಜಿಸಲಾಗಿತ್ತು. ಈ ಸಂದರ್ಭದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿ ವಿಠ್ಠಲ್ ಆರ್, ಜಿಲ್ಲಾ ಕೀಟ ಶಾಸ್ತ್ರಜ್ಞರಾದ ಸೌಮ್ಯ ಎನ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ವಿಜೃಂಭಣೆಯಿಂದ ನಡೆದ ಕರಗ ಮಹೋತ್ಸವ

ಚಿಕ್ಕಬಳ್ಳಾಪುರ

ನಗರದ ಭಗತ್‌ಸಿಂಗ್ ನಗರದಲ್ಲಿ ನಡೆದ ಶ್ರೀ ಧರ್ಮರಾಯಸ್ವಾಮಿ ಹೂವಿನ ಕರಗ ಮಹೋತ್ಸವವು ರಾತ್ರಿ ಅತ್ಯಂತ ವಿಜೃಂಭಣೆಯಿಂದ ನೆರವೇರಿತು. ಸಾವಿರಾರು ಭಕ್ತರು ಭಾಗವಹಿಸಿ ಉತ್ಸವಕ್ಕೆ ಸಾಕ್ಷಿಯಾದರು.

42ನೇ ವರ್ಷದ ಕರಗ ಮಹೋತ್ಸವದ ಅಂಗವಾಗಿ ಭಗತ್‌ಸಿಂಗ್ ನಗರದ ಧರ್ಮರಾಯಸ್ವಾಮಿ ದೇವಾಲಯದಲ್ಲಿ ವಿವಿಧ ಧಾರ್ಮಿಕ ವಿಧಿವಿಧಾನಗಳು ನೆರವೇರಿದವು. ದೇವಾಲಯ ಹಾಗೂ ನಗರದ ಪ್ರಮುಖ ರಸ್ತೆಗಳನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿದ್ದು, ನಗರವೇ ಹಬ್ಬದ ಸಂಭ್ರಮದಲ್ಲಿ ಮೆರೆಯಿತು.

ಅರಿಶಿನ ಬಣ್ಣದ ಸೀರೆ ಉಟ್ಟು, ಬಳೆ ತೊಟ್ಟು ಸರ್ವಾಲಂಕಾರದಿಂದ ಸಿಂಗರಿಸಲ್ಪಟ್ಟ ಕರಗದ ಪೂಜಾರಿ ಆಂಧ್ರಪ್ರದೇಶದ ಚಿತ್ತೂರು ಜಿಲ್ಲೆಯ ಕುಪ್ಪಂನ ಎಂ. ಬಾಲಾಜಿ ಅವರು ಹೂವಿನ ಕರಗವನ್ನು ಹೊತ್ತು, ಒಂದು ಕೈಯಲ್ಲಿ ಕತ್ತಿ ಮತ್ತು ಇನ್ನೊಂದು ಕೈಯಲ್ಲಿ ಮಂತ್ರದಂಡ ಹಿಡಿದು ರಾತ್ರಿ 9:30ಕ್ಕೆ ಗರ್ಭಗುಡಿಯಿಂದ ಹೊರಬಂದರು. ತಮಟೆ ಮತ್ತು ಮಂಗಳವಾದ್ಯಗಳ ಘೋಷಣೆಯ ನಡುವೆ ವೀರಕುಮಾರರು ಅವರ ಹಿಂದೆ ಸಾಗಿದರು.

ಮಲ್ಲಿಗೆ ಮತ್ತು ಕನಕಾಂಬರ ಹೂವಿನ ಅಲಂಕಾರದಿಂದ ಕಂಗೊಳಿಸಿದ್ದ ಕರಗದಿಂದ ಹರಡಿದ ಪರಿಮಳ ಭಕ್ತರನ್ನು



ಆಕರ್ಷಿಸಿತು. ನಗರದೆಲ್ಲೆಡೆ ಮನೆಗಳ ಮುಂದೆ ರಂಗೋಲಿ, ತೋರಣಗಳಿಂದ ಸ್ವಾಗತ ಕೋರಲಾಗಿದ್ದು, ಗಲ್ಲಿಗಳಲ್ಲಿ ಜನರು ರಾತ್ರಿ ಪೂರ್ತಿ ನಿಂತು ಕರಗದ ದರ್ಶನ ಪಡೆದರು.

ಕರಗ ಹೊತ್ತ ಪೂಜಾರಿ ಬಾಲಾಜಿ ತಮಟೆ ಸದ್ದಿನ ನಡುವೆ ವಿವಿಧ ಭಂಗಿಗಳಲ್ಲಿ ನೃತ್ಯ ಪ್ರದರ್ಶಿಸಿ ಭಕ್ತರನ್ನು ಮೂಕವಿಸ್ಮಿತರನ್ನಾಗಿ ಮಾಡಿದರು. ಜನರು ಈ ಕ್ಷಣಗಳನ್ನು ಮೊಬೈಲ್‌ಗಳಲ್ಲಿ ಚಿತ್ರೀಕರಿಸಿದರು.

ರಾತ್ರಿ ದೇವಾಲಯದಿಂದ ಹೊರಟ ಕರಗವು ನಗರ ಹಾಗೂ ಹೊರವಲಯದ ಮುಸ್ಟೂರು, ಅಣಕನಗೊಂದಿ ಗ್ರಾಮಗಳಿಗೆ ತೆರಳಿ ಪೂಜೆ ಸ್ವೀಕರಿಸಿ ಸುಮಾರು 23 ಗಂಟೆಗಳ ಬಳಿಕ ದೇವಾಲಯಕ್ಕೆ ವಾಪಸ್ಸು ಬಂದು, ಅಗ್ನಿಕುಂಡ ಹಾಯ್ದು ಒಳಪ್ರವೇಶಿಸಿತು.

ಉತ್ಸವದ ಅಂಗವಾಗಿ ನಗರದ ವಿವಿಧ ಭಾಗಗಳಲ್ಲಿ ರಸಮಂಜರಿ, ವಾದ್ಯಗೋಷ್ಠಿ, ನಾಟಕ ಪ್ರದರ್ಶನಗಳು ನಡೆದವು. 25ಕ್ಕೂ ಹೆಚ್ಚು ಮುತ್ತಿನ ಪಲ್ಲಕ್ಕಿಗಳಲ್ಲಿ ಗ್ರಾಮದೇವತೆಗಳ ಮೆರವಣಿಗೆ ಜರುಗಿತು. ಭಕ್ತರಿಗೆ ಅನ್ನದಾನ ಮತ್ತು ಪಾನಕ ವಿತರಣೆ ಕೂಡ ಮಾಡಲಾಯಿತು.

ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸರು ಬಿಗಿ ಬಂದೋಬಸ್ತು ಏರ್ಪಡಿಸಿದ್ದರು.

ಈ ಸಂದರ್ಭದಲ್ಲಿ ಬಿಎಂಟಿಸಿ ಮಾಜಿ ಉಪಾಧ್ಯಕ್ಷ ಕೆ.ವಿ.ನವೀನ್ ಕಿರಣ್, ಕರಗ ಅಭಿವೃದ್ಧಿ ಸಮಿತಿಯ ಅರುಣ್ ಕುಮಾರ್, ನಗರಸಭೆ ಮಾಜಿ ಸದಸ್ಯ ನರಸಿಂಹಮೂರ್ತಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ಸೋಮನಾಥ ಜ್ಯೋತಿರ್ಲಿಂಗ ಯಾತ್ರೆ ತಿಪಟೂರಿಗೆ ಆಗಮನ

ತಿಪಟೂರು

ಸೋಮನಾಥ ಜ್ಯೋತಿರ್ಲಿಂಗ ಯಾತ್ರೆ ಏಪ್ರಿಲ್ 30ರಂದು ತಿಪಟೂರಿಗೆ ಆಗಮಿಸಲಿದ್ದು, ನಗರದ ಶ್ರೀ ಸತ್ಯಗಣಪತಿ ಆಸ್ಥಾನ ಮಂಟಪದಲ್ಲಿ ಎರಡು ದಿನಗಳ ಕಾಲ ಸಾರ್ವಜನಿಕರ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ ಎಂದು ಆರ್ಟ್ ಆಫ್ ಲಿವಿಂಗ್ ಸಂಸ್ಥೆಯ ಅವಿನಾಶ್ ತಿಳಿಸಿದ್ದಾರೆ.

ನಗರದ ಶಿವಂ ಕೆಫೆ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಂದೂಗಳ ಭಾವೈಕ್ಯದ ಸಂಕೇತವಾಗಿರುವ ಸೋಮನಾಥ ಜ್ಯೋತಿರ್ಲಿಂಗಕ್ಕೆ ಶತಮಾನಗಳ ಇತಿಹಾಸವಿದ್ದು, ಅದರ ದರ್ಶನವು ಭಕ್ತರಲ್ಲಿ ಆಧ್ಯಾತ್ಮಿಕ ಉಲ್ಲಾಸವನ್ನು ಉಂಟುಮಾಡುತ್ತದೆ ಎಂದರು. ಈ ಮಹತ್ವದ ಜ್ಯೋತಿರ್ಲಿಂಗದ ದರ್ಶನವನ್ನು ಸಾರ್ವಜನಿಕರಿಗೆ ಕಲ್ಪಿಸುವ ಉದ್ದೇಶದಿಂದ ರಾಜ್ಯದಾದ್ಯಂತ ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿದರು.

ಈ ಯಾತ್ರೆಯನ್ನು ಶ್ರೀ ರವಿಶಂಕರ್ ಅವರ ಮಾರ್ಗದರ್ಶನದಲ್ಲಿ ಆಯೋಜಿಸಲಾಗಿದ್ದು, ಜನವರಿ ತಿಂಗಳ ಮಹಾಶಿವರಾತ್ರಿ ಸಂದರ್ಭದಲ್ಲಿ ಸಾರ್ವಜನಿಕ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಆರ್ಟ್ ಆಫ್ ಲಿವಿಂಗ್ ಸಂಸ್ಥೆಯ ಅಂತರಾಷ್ಟ್ರೀಯ ಯೋಗ ತರಬೇತುದಾರರಾದ ಅರ್ಚನಾ ಪ್ರಸಾದ್ ಮಾತನಾಡಿ, ಸನಾತನ ಧರ್ಮದ ಪ್ರಕಾರ 12 ಜ್ಯೋತಿರ್ಲಿಂಗಗಳಲ್ಲಿ ಸೋಮನಾಥ ಜ್ಯೋತಿರ್ಲಿಂಗಕ್ಕೆ ವಿಶೇಷ ಸ್ಥಾನವಿದೆ ಎಂದರು. ಪೌರಾಣಿಕವಾಗಿ ಚಂದ್ರನಿಂದ ಪ್ರತಿಷ್ಠಾಪಿತವಾಗಿದ್ದು, ಶ್ರೀಕೃಷ್ಣನು ಇಲ್ಲಿ ತಪಸ್ಸು ಮಾಡಿದರೆಂಬ ನಂಬಿಕೆ ಇದೆ ಎಂದು ವಿವರಿಸಿದರು.

ಇತಿಹಾಸದಲ್ಲಿ ಕ್ರಿ.ಶ. 1026ರಲ್ಲಿ ಘಜ್ನಿ ಮಹಮ್ಮದ್ ದಾಳಿ ನಡೆಸಿದ ನಂತರವೂ ಲಿಂಗದ ಅವಶೇಷಗಳನ್ನು ಸಂರಕ್ಷಿಸಿ ಇಂದಿನ ರೂಪದಲ್ಲಿ ಉಳಿಸಿಕೊಂಡು ಬಂದಿರುವುದು ವಿಶಿಷ್ಟವಾಗಿದೆ ಎಂದು ತಿಳಿಸಿದರು. ಈ ಜ್ಯೋತಿರ್ಲಿಂಗದ ವೈಶಿಷ್ಟ್ಯಗಳು ವಿಜ್ಞಾನಕ್ಕೂ ಅಚ್ಚರಿಯನ್ನುಂಟುಮಾಡುವಂತಿವೆ ಎಂದರು.

ಏಪ್ರಿಲ್ 30 ಮತ್ತು ಮೇ 1ರಂದು ನಗರದ ಸತ್ಯಗಣಪತಿ ಆಸ್ಥಾನ ಮಂಟಪದಲ್ಲಿ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು.

## ಅಪಘಾತ: ಯುವಕ ಸಾವು

ಬಂಗಾರಪೇಟೆ

ಕೋಲಾರ ಮುಖ್ಯರಸ್ತೆಯಲ್ಲಿ ಬೆಳಂಬೆಳಗ್ಗೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಯುವಕನೊಬ್ಬ ಮೃತಪಟ್ಟ ಘಟನೆ ನಡೆದಿದೆ. ತಾಲ್ಲೂಕಿನ ಬೀರಂಡಹಳ್ಳಿ ಸಮೀಪ ಈ ದುರ್ಘಟನೆ ನಡೆದಿದೆ.

ಮೃತರನ್ನು ಕೆಜಿಎಫ್‌ನ ನಾಗಶೆಟ್ಟಿಹಳ್ಳಿಯ ನಿವಾಸಿ ಶ್ರೀನಿವಾಸ್ (22) ಎಂದು ಗುರುತಿಸಲಾಗಿದೆ. ಅವರು ನಾಗಶೆಟ್ಟಿಹಳ್ಳಿಯಿಂದ ಬೆಂಗಳೂರಿನತ್ತ ಕೆಲಸಕ್ಕೆ ತೆರಳುತ್ತಿದ್ದ ವೇಳೆ, ಚಾಲನೆಯಲ್ಲಿದ್ದ ಕಾರಿನ ನಿಯಂತ್ರಣ ತಪ್ಪಿ ಪಲ್ಟಿಯಾದ ಪರಿಣಾಮ ಗಂಭೀರ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಅಪಘಾತದ ಸುದ್ದಿ ತಿಳಿದು ಬಂಗಾರಪೇಟೆ ಸರ್ಕಲ್ ಇನ್ಸ್ಪೆಕ್ಟರ್ ರವಿಕುಮಾರ್ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಸಂಬಂಧ ಬಂಗಾರಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆಯನ್ನು ಮುಂದುವರೆಸಿದ್ದಾರೆ.

## ಮೇ.1 ಹೂವಿನ ಕರಗ ಮಹೋತ್ಸವ

ಕೋಲಾರ


ನಗರದ ಪಿಸಿ ಬಡಾವಣೆಯಲ್ಲಿ ಪ್ರಸಿದ್ದ ರೇಣುಕಾಯಲ್ಲಮ್ಮ ದೇವಿ ಹೂವಿನ ಕರಗ ಮಹೋತ್ಸವ ಮೇ.1 ರ ಶುಕ್ರವಾರ ರಾತ್ರಿ 8 ಗಂಟೆಗೆ ನಡೆಯಲಿದ್ದು, ಏ.28ರ ಧ್ವಜಾರೋಹಣದೊಂದಿಗೆ ಪೂಜಾ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗುತ್ತಿದೆ ಎಂದು ರೇಣುಕಾಂಭ ಸೇವಾ ಸಂಸ್ಥೆ ಅಧ್ಯಕ್ಷ ಕೆ.ಗಣೇಶ್ ತಿಳಿಸಿದ್ದಾರೆ.

ಕರಗಮಹೋತ್ಸವದ ಕುರಿತು ಮಾಹಿತಿ ನೀಡಿರುವ ಅವರು, ಏ.28 ಶುಕ್ರವಾರ ಸಂಜೆ 6 ಗಂಟೆಗೆ ಧ್ವಜಾರೋಹಣದೊಂದಿಗೆ ಕರಗಮಹೋತ್ಸವ ಕಾರ್ಯಕ್ರಮಕ್ಕೆ ಚಾಲನೆ ಸಿಗಲಿದೆ. ಏ.29ರಂದು ರಾತ್ರಿ 9 ಗಂಟೆಗೆ ಹಸಿ ಕರಗ ಮಹೋತ್ಸವ ನಡೆಯಲಿದೆ.

ಏ.30ರ ಗುರುವಾರ ದೀಪೋತ್ಸವ ನಡೆಯಲಿದ್ದು, ಹಲವಾರು ದೇವತೆಗಳಿಗೆ ದೀಪಗಳನ್ನು ಬೆಳಗುವ ಕಾರ್ಯಕ್ರಮವಿದೆ.

ಮೇ.1 ರಂದು ರಾತ್ರಿ 8 ಗಂಟೆಗೆ ಹೂವಿನ ಕರಗ ನಡೆಯಲಿದ್ದು, ಮೇ,2ರ ಶನಿವಾರ ಸಂಜೆ 6 ಗಂಟೆಗೆ ಅಗ್ನಿಕುಂಡ ಪ್ರವೇಶ ಹಾಗೂ ರಾತ್ರಿ ಭಾರತ ಪಠಣ ನಡೆಯಲಿದೆ. ಮೇ.3 ರಂದು ವಸಂತೋತ್ಸವ ಅಥವಾ ಒನಕೆ ಕರಗ ಸಂಜೆ 5 ಗಂಟೆಗೆ ನಡೆಯಲಿದೆ ಎಂದು ತಿಳಿಸಿದ್ದಾರೆ.

## ಕಲಾವಿದರ ಸಂಭಾವನೆ ಬಿಡುಗಡೆಗೆ ಮನವಿ



ಕೋಲಾರ

ಜಿಲ್ಲೆಯಲ್ಲಿ ನಡೆದ ಧಾರ್ಮಿಕ ಉತ್ಸವಗಳಲ್ಲಿ ಪಾಲ್ಗೊಂಡಿದ್ದ ಕಲಾ ತಂಡಗಳ ಸಂಭಾವನೆ ಬಿಲ್ ಪಾವತಿಸಲು ವಿಳಂಬವಾಗುತ್ತಿರುವುದನ್ನು ಖಂಡಿಸಿ 'ಗಾನಸುಧಾ ಸಾಂಸ್ಕೃತಿಕ ಕಲಾ ಸಂಸ್ಥೆ'ಯ ಪದಾಧಿಕಾರಿಗಳು ಸೋಮವಾರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಕಳೆದ ಡಿಸೆಂಬರ್ ತಿಂಗಳಿನಲ್ಲಿ ನಡೆದ ವೈಕುಂಠ ಏಕಾದಶಿ ಹಾಗೂ ಜನವರಿ 1ರಂದು ನಡೆದ ಬ್ರಹ್ಮರಥೋತ್ಸವ ಮತ್ತು ಪಲ್ಲಕ್ಕಿ ಉತ್ಸವಗಳ ಸಂದರ್ಭದಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮಗಳಲ್ಲಿ ಪ್ರದರ್ಶನ ನೀಡಿದ ಕಲಾವಿದರ ಸಂಭಾವನೆಯ ಬಿಲ್ ನೀಡಲು ಅಧಿಕಾರಿಗಳು ಮೀನಾಮೇಷ ಎಣಿಸುತ್ತಿದ್ದಾರೆ ಎಂದು ಸಂಸ್ಥೆಯು ದೂರಿದೆ. ಕಲಾವಿದರು ಕೇವಲ ಇಂತಹ ಕಾರ್ಯಕ್ರಮಗಳನ್ನೇ ನಂಬಿ ಜೀವನ ನಡೆಸುತ್ತಿದ್ದು, ಆರ್ಥಿಕ ಸಂಕಷ್ಟ ಎದುರಾಗಿದೆ. ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿ, ಬಾಕಿ ಇರುವ ಹಣವನ್ನು ಕೂಡಲೇ ಬಿಡುಗಡೆಗೊಳಿಸಬೇಕೆಂದು ಮನವಿಯಲ್ಲಿ ಒತ್ತಾಯಿಸಲಾಗಿದೆ. ಈ ಸಂದರ್ಭದಲ್ಲಿ ಸಂಸ್ಥೆಯ ಪ್ರಮುಖರು ಹಾಗೂ ಕಲಾವಿದರು ಉಪಸ್ಥಿತರಿದ್ದರು.

## ಕಾಡಾನೆ ದಾಳಿ: ರೈತ ಸಾವಿಗೆ ಗ್ರಾಮಸ್ಥರ ಆಕ್ರೋಶ

ಕನಕಪುರ

ತಾಲೂಕಿನ ಸಂಗಮ ವನ್ಯಜೀವಿ ವಲಯ ವ್ಯಾಪ್ತಿಯ ಕಾಡಂಚಿನ ಗ್ರಾಮದಲ್ಲಿ ಕಾಡಾನೆ ದಾಳಿಗೆ ವ್ಯಕ್ತಿಯೊಬ್ಬ ಧಾರುಣವಾಗಿ ಸಾವನ್ನಪ್ಪಿದ ಘಟನೆ ನಡೆದಿದೆ. ಉಯ್ಯಂಬಳ್ಳಿ ಹೋಬಳಿಯ ಶಿವಾಲ್ದಪ್ಪನ ಬೆಟ್ಟದ ಬಳಿಯ ಚೀಲಂದವಾಡಿ ಗ್ರಾಮದ ಹೊರವಲಯದ ಒಂಟಿ ಮನೆಯಲ್ಲಿ ವಾಸವಿದ್ದ ರೈತ ಶಿವು (53) ಮೃತ ದುರ್ದೈವಿ.

ಬೇಸಿಗೆಯ ತೀವ್ರ ಬಿಸಿಲಿನಿಂದ ನೀರಿಗಾಗಿ ಗ್ರಾಮ ಸಮೀಪದ ಶೆಟ್ಟಿ ಕೆರೆಗೆ ಬಂದಿದ್ದ ಕಾಡಾನೆ, ಶನಿವಾರ ರಾತ್ರಿ ವೇಳೆ ಶಿವು ಮೇಲೆ ಏಕಾಏಕಿ ದಾಳಿ ನಡೆಸಿದೆ. ದಾಳಿಯ ವೇಳೆ ಆನೆಯು ತಲೆಯ ಮೇಲೆ ಕಾಲಿಟ್ಟ ಪರಿಣಾಮ ಅವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.

ಭಾನುವಾರ ಬೆಳಿಗ್ಗೆ ಸ್ಥಳೀಯರಿಂದ ಮಾಹಿತಿ ತಿಳಿದು ಸ್ಥಳಕ್ಕೆ ಅರಣ್ಯಾಧಿಕಾರಿಗಳು ಹಾಗೂ ಸಾತನೂರು ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಮೃತದೇಹವನ್ನು ತಾಲೂಕು ಸರ್ಕಾರಿ ಆಸ್ಪತ್ರೆಗೆ ರವಾನಿಸಿ ಮರಣೋತ್ತರ ಪರೀಕ್ಷೆ ನಡೆಸಿ ಕುಟುಂಬಸ್ಥರಿಗೆ ಹಸ್ತಾಂತರಿಸಲಾಯಿತು.

ಕಾಡಾನೆಗಳ ಉಪಟಳ ತಡೆಯುವಲ್ಲಿ ಅರಣ್ಯ ಇಲಾಖೆ ವಿಫಲವಾಗಿದೆ ಎಂದು ಆರೋಪಿಸಿ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದರು. ಇತ್ತೀಚೆಗಷ್ಟೇ ಸಂಗಮದ ಕಾವೇರಿ ನದಿಯಲ್ಲಿ ಪ್ರವಾಸಿಗರ ನಡುವೆ ಕಾಡಾನೆ ಕಾಣಿಸಿಕೊಂಡ ಘಟನೆ ನಡೆದಿದ್ದರೂ ಸೂಕ್ತ ಕ್ರಮ ಕೈಗೊಳ್ಳದಿರುವುದು ಕಳವಳಕಾರಿ ಎಂದು ಹೇಳಿದರು. ಗ್ರಾಮಸ್ಥರ ಪ್ರಾಣರಕ್ಷಣೆಗಾಗಿ ಶಾಶ್ವತ ಪರಿಹಾರ ಕಂಡುಹಿಡಿಯಬೇಕೆಂದು ಆಗ್ರಹಿಸಿದರು.

ಈ ಕುರಿತು ಪ್ರತಿಕ್ರಿಯಿಸಿದ ಅರಣ್ಯ ಇಲಾಖೆಯ ಅಧಿಕಾರಿಗಳು, ಅರಣ್ಯ ಪ್ರದೇಶಗಳಲ್ಲಿ ನೀರಿನ ಕೊರತೆಯಿಂದ ಕಾಡುಪ್ರಾಣಿಗಳು ಗ್ರಾಮಗಳತ್ತ ಬರುತ್ತಿರುವುದು ಇಂತಹ ಘಟನೆಗಳಿಗೆ ಕಾರಣವಾಗಿದೆ ಎಂದು ತಿಳಿಸಿದ್ದಾರೆ. ಮೃತರ ಕುಟುಂಬಕ್ಕೆ ತಕ್ಷಣ ಐದು ಲಕ್ಷ ರೂಪಾಯಿ ಪರಿಹಾರ ನೀಡಲಾಗುವುದು ಎಂದು ಸಿ.ಸಿ.ಎಫ್ ಮಾಲತಿ ಪ್ರಿಯಾ ಮಾಹಿತಿ ನೀಡಿದರು.

## ಮಹಿಳಾ ಮೀಸಲಾತಿ ವಿರೋಧಿಸಿದ ಕಾಂಗ್ರೆಸ್ ವಿರುದ್ಧ ಪ್ರತಿಭಟನೆ

ಗುಡಿಬಂಡೆ

ಕೇಂದ್ರ ಸರ್ಕಾರ ಜಾರಿಗೆ ತರಲು ಮಂಡಿಸಿದ ಮಹಿಳಾ ಮೀಸಲಾತಿ ಮಸೂದೆಯನ್ನು ಕಾಂಗ್ರೆಸ್ ನೇತೃತ್ವದ ಮಿತ್ರಕೂಟ ವಿರೋಧಿಸಿರುವುದನ್ನು ಖಂಡಿಸಿ, ಗುಡಿಬಂಡೆಯಲ್ಲಿ ಬಿಜೆಪಿ ಘಟಕದ ವತಿಯಿಂದ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು.



ಪ್ರತಿಭಟನೆಯಲ್ಲಿ ಪಾಲ್ಗೊಂಡು ಮಾತನಾಡಿದ ಬಿಜೆಪಿ ಮುಖಂಡೆ ಆಶಾ ಜಯಪ್ಪ, ತಾವು ಮಹಿಳಾ ಪರ ಎಂದು ಹೇಳಿಕೊಳ್ಳುವ ಕಾಂಗ್ರೆಸ್ ಮಿತ್ರಕೂಟವು ಮಹಿಳಾ ಮೀಸಲಾತಿ ಮಸೂದೆಯನ್ನು ವಿರೋಧಿಸುವ ಮೂಲಕ ಮಹಿಳೆಯರಿಗೆ ದೊಡ್ಡ ಮಟ್ಟದ ದ್ರೋಹ ಎಸಗಿದೆ. ಸಂವಿಧಾನದಲ್ಲಿಯೇ ಬಾಬಾ ಸಾಹೇಬ್ ಅಂಬೇಡ್ಕರ್ ರವರು ಮಹಿಳೆಯರಿಗೂ ಸಮಾನ ಅವಕಾಶ ಸಿಗಬೇಕೆಂದು ತಿಳಿಸಿದ್ದರು. ಆದರೆ ಕಾಂಗ್ರೆಸ್‌ನ ಈ ನಡೆ ಅಂಬೇಡ್ಕರ್ ಅವರ ಆಶಯಗಳಿಗೆ ವಿರುದ್ಧವಾಗಿದ್ದು, ಮುಂಬರುವ ದಿನಗಳಲ್ಲಿ ಜನತೆ ಈ ಕೂಟಕ್ಕೆ ಸರಿಯಾದ ಪಾಠ ಕಲಿಸಲಿದ್ದಾರೆ ಎಂದು ಅವರು ಎಚ್ಚರಿಸಿದರು.

ಬಳಿಕ ಮಾತನಾಡಿದ ಪ್ರಧಾನ ಕಾರ್ಯದರ್ಶಿ ಜಿ ಎ ಅಮರೇಶ, ಪ್ರಧಾನಿ ನರೇಂದ್ರ ಮೋದಿ ಅವರು ಮಹಿಳೆಯರಿಗೆ ಸಮಾನ ಅವಕಾಶ ನೀಡುವ ಉದ್ದೇಶದಿಂದ ಈ ಕ್ರಾಂತಿಕಾರಿ ಮಸೂದೆಯನ್ನು ಜಾರಿಗೆ ತರಲು ಮುಂದಾಗಿದ್ದಾರೆ. ಆದರೆ ಇದನ್ನು ವಿರೋಧಿಸುವ ಮೂಲಕ ವಿರೋಧ ಪಕ್ಷಗಳು ಮಹಿಳೆಯರ ಪ್ರಗತಿಗೆ ಅಡ್ಡಿಪಡಿಸುತ್ತಿವೆ.

ಆದರೆ ಚುನಾವಣೆಗಳಲ್ಲಿ ಮಾತ್ರ ತಾವು ಮಹಿಳೆಯರ ಪರ ಕೆಲಸ ಮಾಡುತ್ತೇವೆ. ಮಹಿಳೆಯರಿಗೆ ಸಾಕಷ್ಟು ಸೌಲಭ್ಯಗಳನ್ನು ಕೊಟ್ಟಿದ್ದೇವೆ ಎಂದು ಹೇಳುವ ಕಾಂಗ್ರೆಸ್ ಮಿತ್ರ ಕೂಟ, ಇದೀಗ ಮಹಿಳಾ ಮೀಸಲಾತಿಗೆ ಮಾತ್ರ ವಿರೋಧ ವ್ಯಕ್ತಪಡಿಸುತ್ತಿರುವುದನ್ನು ಕಂಡರೇ ಅವರ ಮನಸ್ಸು ಹೇಗೆ ಎಂಬುದು ಸ್ಪಷ್ಟವಾಗಿ ತಿಳಿಯುತ್ತದೆ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ತಾಲ್ಲೂಕು ಘಟಕದ ಅಧ್ಯಕ್ಷ ಗಂಗರೆಡ್ಡಿ, ಕಾರ್ಯದರ್ಶಿ ಮದನ ಮೋಹನ ರೆಡ್ಡಿ, ಮಹಿಳಾ ಮೋರ್ಚಾ ಅಧ್ಯಕ್ಷೆ ಮಂಜುಳಾ ಸಿಂಗ್, ಪ್ರಧಾನ ಕಾರ್ಯದರ್ಶಿಗಳಾದ ಅರುಣಾ ಹಾಗೂ ಜ್ಯೋತಿ, ಯುವ ಮೋರ್ಚಾ ಅಧ್ಯಕ್ಷ ನರಸಿಂಹಮೂರ್ತಿ, ಹಿಂದುಳಿದ ವರ್ಗಗಳ ಮೋರ್ಚಾ ಅಧ್ಯಕ್ಷ ಬೀಚಗಾನಹಳ್ಳಿ ಸುರೇಶ್, ಎಸ್ ಸಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ನರಸಿಂಹಮೂರ್ತಿ, ಪ್ರೆಸ್ ಶಿವಪ್ಪ, ಗಜನಾಣ್ಯ ನಾಗರಾಜ್, ಪದ್ಮಾವತಿ, ಈಶ್ವರ್ ರೆಡ್ಡಿ, ಚೇತನ್, ವಿಜಯ ರಾಘವರೆಡ್ಡಿ ಸೇರಿದಂತೆ ಹಲವು ಕಾರ್ಯಕರ್ತರು ಪ್ರತಿಭಟನೆಯಲ್ಲಿ ಹಾಜರಿದ್ದರು.


## ಎಲ್ಲಾ ಕ್ಷೇತ್ರಗಳಲ್ಲೂ ಅಧಃಪತನ ಕಾಣುತ್ತಿದ್ದೇವೆ: ಕಳವಳ

ಬೆಂಗಳೂರು

ಎಲ್ಲ ಕ್ಷೇತ್ರಗಳಲ್ಲೂ ಅಧಃಪತನವನ್ನು ಕಾಣುತ್ತಿದ್ದೇವೆ. ವ್ಯವಸ್ಥೆಯ ಕೆಡಿಕಿನ ಬಗ್ಗೆ ವಿವೇಕಶಾಲಿಗಳು ಸಿನಿಕರಾಗುತ್ತಿದ್ದಾರೆ. ಜನಪರ ಚಳುವಳಿಗಳು ಕ್ಷೀಣವಾಗುತ್ತಿವೆ. ಹಾಗಾಗಿ ಇಂದು ನಮಗೆ ಅಲ್ಲಮನ ತಾತ್ವಿಕತೆ, ಬಸವಣ್ಣನ ಕ್ರೀಯಾಶೀಲತೆ, ಅಂಬಿಗರ ಚೌಡಯ್ಯನ ಆಕ್ರೋಶ ಬೇಕಾಗಿದೆ ಎಂದು ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು ಪ್ರತಿಪಾದಿಸಿದ್ದಾರೆ.

ಬಸವ ವೇದಿಕೆ ವತಿಯಿಂದ ತಮಗೆ 'ಬಸವಶ್ರೀ' ಪ್ರಶಸ್ತಿ ಘೋಷಣೆ ಮಾಡಿರುವುದಕ್ಕೆ ವೇದಿಕೆಗೆ ಪತ್ರ ಬರೆದು ಧನ್ಯವಾದ ತಿಳಿಸಿರುವ ಅವರು, ಸದ್ಯದ ಸಂದರ್ಭದಲ್ಲಿ ವಚನಕಾರರ ಮಹತ್ವ ಹಾಗೂ ಪ್ರಾಮುಖ್ಯತೆ ಬಗ್ಗೆ ಒತ್ತಿ ಹೇಳಿದ್ದಾರೆ.

ಶ್ರೀಮಂತ ಬಡವ, ಹೆಣ್ಣು ಗಂಡು, ಮೇಲು ಕೀಳು, ಉಚ್ಚ ನೀಚ ತಾರತಮ್ಯಗಳನ್ನು ತೊಲಗಿಸುವ ಒಂದು ದಿವ್ಯಮಂತ್ರವಾಗಿ ಬಸವಣ್ಣನವರು ಸಾರಿದ್ದು ಏಕದೇವೋಪಾಸನೆ ಮತ್ತು ಕಾಯಕ ಮಹತ್ವ. ಅವರು ಜನರಿಂದ, ಜನರಿಗಾಗಿ ಜನರ ಮಹಾಮನೆಯನ್ನು ಕಟ್ಟಿ ಬಿಜ್ಜಳನ ಅರಮನೆಯನ್ನು ತೃಣವಾಗಿ ಭಾವಿಸಿದವರು. ಹಾಗೆ ನಡೆದ ಕಲ್ಯಾಣ ಕ್ರಾಂತಿಯಲ್ಲಿ ಸಾವಿರಾರು ಶರಣ ಶರಣೆಯರನ್ನು ತಮ್ಮ ತಮ್ಮ ಅನುಭವ, ಅನುಭಾವದಿಂದ ರಚಿಸಿದ ವಚನಗಳು



ಕನ್ನಡದ ಸಾಹಿತ್ಯ ಲೋಕವನ್ನು ವಿಸ್ತರಿಸಿ ಸಂಸ್ಕೃತ ಮತ್ತು ಸಂಸ್ಕಾರವನ್ನು ಪ್ರಚುರಗೊಳಿಸಿದ ವಿಶಿಷ್ಟ ಸಾಹಿತ್ಯವಾಗಿದೆ ಎಂದು ಮಾಜಿ ಪ್ರಧಾನಿಗಳು ಬಣ್ಣಿಸಿದ್ದಾರೆ.

ಬಸವ ವೇದಿಕೆಯ ಮಿತ್ರರು ಬಸವ ಜಯಂತಿ ಅಂಗವಾಗಿ ಏರ್ಪಡಿಸಿರುವ ವಿಶಿಷ್ಟ ಕಾರ್ಯಕ್ರಮ ನಿಜಕ್ಕೂ ಅಭಿನಂದನೀಯ. ಈ ಕಾರ್ಯಕ್ರಮದ ಸಾನ್ನಿಧ್ಯವನ್ನು ವಹಿಸಿರುವ ಪೂಜ್ಯ ಶ್ರೀ ಶ್ರೀ ಶಿವರಾತ್ರಿ ದೇಶೀಕೇಂದ್ರ ಸ್ವಾಮೀಜಿಯವರಿಗೆ ಭಕ್ತಿಪೂರ್ವಕ ಪ್ರಣಾಮಗಳನ್ನು ಅರ್ಪಿಸುತ್ತೇನೆ. ಬಸವ ವೇದಿಕೆ ಗೆಳೆಯರು ನನ್ನ ಮೇಲಿನ ಅಭಿಮಾನದಿಂದಲೋ ಅಥವಾ ನನ್ನ ಹಿರಿತನದ ವಯಸ್ಸಿನ ಕಾರಣದಿಂದಲೋ ನನಗೆ 'ಬಸವಶ್ರೀ' ಪ್ರಶಸ್ತಿ ಪ್ರದಾನ ಮಾಡಲು ನಿರ್ಧರಿಸಿ ಆಯೋಜಿಸಿದ್ದಾರೆ ಎಂದು ಮಾಜಿ ಪ್ರಧಾನಿಗಳು ಹೇಳಿದ್ದಾರೆ.

ಈ ಕಾರ್ಯಕ್ರಮದಲ್ಲಿ ಗುರುರಾಜ ಕರ್ಜಗಿಯವರೂ ಸೇರಿದಂತೆ ಅನೇಕ ಶರಣರ ಸೂಳ್ನುಡಿಗಳನ್ನು ಕೇಳಲಾದರೂ ನಾನು ಬರಬೇಕೆಂದಿದ್ದೆ. ಆದರೆ ನನ್ನ ಆರೋಗ್ಯ ವ್ಯತ್ಯಯದಿಂದಾಗಿ ಬರಲಾಗುತ್ತಿಲ್ಲ.

ಆದುದರಿಂದ ಪೂಜ್ಯ ಸ್ವಾಮೀಜಿಯವರಲ್ಲಿ, ಸಂಘಟಕರಲ್ಲಿ, ಗೌರವಾನ್ವಿತ ಅತಿಥಿವರೇರ್ಯಾರಲ್ಲಿ, ಶರಣ ಸಮೂಹದಲ್ಲಿ ಕ್ಷಮೆ ಕೋರುತ್ತೇನೆ ಎಂದರು.

## ಪಾರದರ್ಶಕವಾಗಿ ನಡೆಸಲು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸೂಚನೆ

ತುಮಕೂರು

ಮೇ 3ರಂದು ನಡೆಯಲಿರುವ ನೀಟ್(ಯುಜಿ)–2026 ಪರೀಕ್ಷೆಯನ್ನು ಯಾವುದೇ ಅಡಚಣೆ ಇಲ್ಲದೆ ಪಾರದರ್ಶಕವಾಗಿ ಹಾಗೂ ವ್ಯವಸ್ಥಿತವಾಗಿ ನಡೆಸಲು ಅಗತ್ಯವಿರುವ ಎಲ್ಲಾ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ನೀಟ್(ಯುಜಿ)–2026 ಪರೀಕ್ಷೆಯನ್ನು ತುಮಕೂರು ಜಿಲ್ಲೆಯ 13 ಪರೀಕ್ಷಾ ಕೇಂದ್ರಗಳಲ್ಲಿ ಸುಸೂತ್ರ, ಶಾಂತಿಯುತ ಹಾಗೂ ಪಾರದರ್ಶಕವಾಗಿ ನಡೆಸುವ ಸಂಬಂಧ ಸೋಮವಾರ ನಡೆದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ವಿಶೇಷವಾಗಿ ಪರೀಕ್ಷಾ ಕೇಂದ್ರಗಳ ಪ್ರವೇಶ ದ್ವಾರಗಳ ಬಳಿ ಅನಧಿಕೃತ ವ್ಯಕ್ತಿಗಳು, ಅನಗತ್ಯ ಗುಂಪು ಸೇರುವಿಕೆ ಅಥವಾ ಅಕ್ರಮ ಚಟುವಟಿಕೆಗಳಿಗೆ ಅವಕಾಶ ನೀಡದಂತೆ ಶಿಕ್ಷಣ ಇಲಾಖೆ ಮತ್ತು ಪೊಲೀಸ್ ಇಲಾಖೆಗೆ ಕಟ್ಟುನಿಟ್ಟಿನ ಭದ್ರತಾ ಕ್ರಮ ಜರುಗಿಸಲು ನಿರ್ದೇಶನ ನೀಡಿದರು.

ಅಲ್ಲದೆ, ಪರೀಕ್ಷಾರ್ಥಿಗಳು ನಿಗದಿತ ಸಮಯದೊಳಗೆ ಪರೀಕ್ಷಾ ಕೇಂದ್ರಗಳಿಗೆ ಸುಗಮವಾಗಿ ಆಗಮಿಸಿ ಪರೀಕ್ಷೆಗೆ ಹಾಜರಾಗಲು ಅಗತ್ಯ ಸಾರಿಗೆ, ಮಾರ್ಗದರ್ಶನ ಹಾಗೂ ಪರೀಕ್ಷಾ ಕೇಂದ್ರಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಸಮರ್ಪಕವಾಗಿ ಒದಗಿಸುವಂತೆ ಸಂಬಂಧಿತ ಅಧಿಕಾರಿಗಳಿಗೆ ಸೂಚಿಸಿದರು.

ಪರೀಕ್ಷಾರ್ಥಿಗಳಿಗೆ ಯಾವುದೇ ರೀತಿಯ ತೊಂದರೆ ಉಂಟಾಗದಂತೆ ಎಲ್ಲಾ ಇಲಾಖೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ನೀಟ್ (ಯುಜಿ)–2026 ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು.

ಕೇಂದ್ರೀಯ ವಿದ್ಯಾಲಯದ ಪ್ರಾಂಶುಪಾಲ ಮನೀಶ್ ಅವರು ನೀಟ್ ಪರೀಕ್ಷೆ ಯಶಸ್ವಿ ನಿರ್ವಹಣೆಗೆ ಕೈಗೊಳ್ಳಬೇಕಾದ ಕ್ರಮಗಳು, ಪರೀಕ್ಷಾ ಕೇಂದ್ರಗಳ ಸಿದ್ಧತೆ, ಭದ್ರತಾ ವ್ಯವಸ್ಥೆ ಹಾಗೂ ವಿದ್ಯಾರ್ಥಿಗಳಿಗೆ ಅನುಕೂಲಕರ ವಾತಾವರಣ ನಿರ್ಮಾಣ ಕುರಿತಾದ ಹಲವಾರು ವಿಷಯಗಳನ್ನು ಸಭೆಯ ಗಮನಕ್ಕೆ ತಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ, ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

## ತ್ಯಾಗರಾಜರು ಕರ್ನಾಟಕ ಸಂಗೀತದ ತ್ರಿಮೂರ್ತಿಗಳಲ್ಲಿ ಒಬ್ಬರು: ರಾಮಕೃಷ್ಣ

ಕೋಲಾರ

ಕರ್ನಾಟಕ ಸಂಗೀತದ ತ್ರಿಮೂರ್ತಿಗಳಲ್ಲಿ ಒಬ್ಬರಾದ ಶ್ರೀ ತ್ಯಾಗರಾಜರು 1767ರಲ್ಲಿ ತಮಿಳುನಾಡಿನ ತಿರುವಾರೂರಿನಲ್ಲಿ ಜನಿಸಿದ ತೆಲುಗು ಬ್ರಾಹ್ಮಣ ಸಂತ ಮತ್ತು ಗೇಯಕಾರರಾಗಿದ್ದು, ರಾಮಭಕ್ತರಾಗಿದ್ದ ಇವರು, ನಾದೋಪಾಸನೆಯ ಮೂಲಕ ಮೋಕ್ಷ ಸಾಧನೆಯನ್ನು ಬೋಧಿಸಿದರು ಎಂದು ಕೋಲಾರ ಕೋಟೆಯ ಶ್ರೀಶೃಂಗೇರಿ ಶಂಕರಮಠದ ಧರ್ಮಾಧಿಕಾರಿ ಜೆ.ಎನ್. ರಾಮಕೃಷ್ಣ ತಿಳಿಸಿದರು.



ಭಾನುವಾರ ನಗರದ ಶೃಂಗೇರಿ ಶಂಕರಮಠದಲ್ಲಿ ತ್ಯಾಗರಾಜರ ಜಯಂತಿ ಅಂಗವಾಗಿ ನಾದೋಪಾಸನೆ, ಬೆಂಗಳೂರಿನ ವಿದ್ವಾನ್ ರವಿಶಂಕರರವ ಶರ್ಮರ ನೇತೃತ್ವದಲ್ಲಿ ಪಂಚರತ್ನ ಕೀರ್ತನೆಗಳ ವಿಶೇಷ ಗಾಯನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ತಂಜಾವೂರು ಆಸ್ಥಾನದ ರಾಜರ ಆಹ್ವಾನವನ್ನು ನಿರಾಕರಿಸಿ, ಸರಳ ಜೀವನ ನಡೆಸುತ್ತಾ, ಸಾವಿರಾರು ಕೃತಿಗಳನ್ನು ತೆಲುಗಿನಲ್ಲಿ ಬರೆದು ರಾಮನಿಗೆ ಅರ್ಪಿಸಿದ ಮಹಾಮಹಿಮರು ತ್ಯಾಗರಾಜರು ಎಂದರು.

ಮೇ 4, 1767 ರಂದು ರಾಮಬ್ರಹ್ಮಮ್ ಮತ್ತು ಸೀತಮ್ಮನವರ ಪುತ್ರನಾಗಿ ಜನನ. ಅಜ್ಜ ಗಿರಿರಾಜ ಕವಿ ಪ್ರಸಿದ್ಧ ಆಸ್ಥಾನ ಕವಿಯಾಗಿದ್ದರು, ಸೊಂಟಿ ವೆಂಕಟರಮಣಯ್ಯನವರಿಂದ ಸಂಗೀತ ಶಿಕ್ಷಣ ಪಡೆದ ತ್ಯಾಗರಾಜರು, ತಮ್ಮ ಇಷ್ಟದೇವತೆ ಶ್ರೀರಾಮನ ಮೇಲೆ ಅಸಂಖ್ಯಾತ ಕೃತಿಗಳನ್ನು ರಚಿಸಿ ಖ್ಯಾತರಾದರು.

ಇವರು ರಚಿಸಿದ ಪಂಚರತ್ನ ಕೃತಿಗಳು, ಉತ್ಸವ ಸಂಪ್ರದಾಯ ಕೃತಿಗಳು, ದಿವ್ಯನಾಮ ಸಂಕೀರ್ತನೆಗಳು ಇವರ ಪ್ರಮುಖ ಕೊಡುಗೆ ಎಂದ ಅವರು, ರಾಜ ಆಸ್ಥಾನದ ಆಮಿಷಗಳಿಗೆ ಬಲಿಯಾಗದೆ, 'ನಿಧಿ ಚಾಲ ಸುಖಮಾ' ಎಂಬ ಕೃತಿಯ ಮೂಲಕ ಭೌತಿಕ ಸಂಪತ್ತಿಗಿಂತ ರಾಮಭಕ್ತಿಯೇ ಮಿಗಿಲು ಎಂದು ಸಾರಿದರು ಎಂದು ತಿಳಿಸಿದರು.

1847 ರಲ್ಲಿ ತಂಜಾವೂರಿನ ತಿರುವೈಯಾರುವಿನಲ್ಲಿ ಕಾವೇರಿ ನದಿ ತೀರದಲ್ಲಿ ಸಮಾಧಿಯಾದರು. ಪ್ರತಿವರ್ಷ ಇಲ್ಲಿ 'ತ್ಯಾಗರಾಜ ಆರಾಧನಾ ಮಹೋತ್ಸವ' ವೈಭವದಿಂದ ನಡೆಯುತ್ತಿದ್ದು, ಸಂಗೀತ ಸಾಮ್ರಾಜ್ಯದಲ್ಲಿ ತಮ್ಮ ಸಾಹಿತ್ಯದ ಮೂಲಕ ಜನರ ಮನದಲ್ಲಿ ಉಳಿದಿದ್ದಾರೆ ಎಂದರು.

ತ್ಯಾಗರಾಜರ ಕೃತಿಗಳು, ವಿಶೇಷವಾಗಿ 'ಎಂದರೋ ಮಹಾನುಭಾವುಲು' ಇಂದಿಗೂ ಸಂಗೀತ ಕಚೇರಿಗಳಲ್ಲಿ ಪ್ರಮುಖ ಸ್ಥಾನ ಪಡೆದಿದೆ, ಈ ಹಾಡು ಎಂತಹವರನ್ನೂ ಮಂತ್ರಮುಗ್ದರನ್ನಗಿಸುತ್ತದೆ ಎಂದು ರಾಮಕೃಷ್ಣ ತಿಳಿಸಿದರು.

ಶ್ರೀ ತ್ಯಾಗರಾಜರು ಕರ್ನಾಟಕ ಸಂಗೀತ ಪದ್ಧತಿಯ ಮುಖ್ಯ ರಚನಕಾರರಲ್ಲಿ ಒಬ್ಬರು. ಮುತ್ತುಸ್ವಾಮಿ ದೀಕ್ಷಿತ ಮತ್ತು ಶ್ಯಾಮಾ ಶಾಸ್ತ್ರಿ ಇವರ ಜೊತೆಯಲ್ಲಿ ಕರ್ನಾಟಕ ಸಂಗೀತದ ತ್ರಿಮೂರ್ತಿಗಳಲ್ಲಿ ಒಬ್ಬರು. ಅವರು ಶ್ರೀರಾಮನ ಪರಮ ಭಕ್ತರಾಗಿದ್ದರು. ದಕ್ಷಿಣ ಭಾರತದ ಎಲ್ಲ ಮುಖ್ಯ ದೇವಸ್ಥಾನಗಳಿಗೆ ಭೇಟಿಯಿತ್ತ ತ್ಯಾಗರಾಜರು ಅಲ್ಲಿನ ದೇವ–ದೇವತೆಗಳ ಬಗ್ಗೆ ಕೃತಿಗಳನ್ನು ರಚಿಸಿದ್ದಾರೆ.

ಸುಮಾರು ಏಳುನೂರು ಕೃತಿಗಳನ್ನು ರಚಿಸಿರುವ ತ್ಯಾಗರಾಜರು ಕರ್ನಾಟಕ ಸಂಗೀತದ ಮೂಲಪುರುಷರಲ್ಲಿ ಒಬ್ಬರೆಂದು ಪರಿಗಣಿತರಾಗಿದ್ದಾರೆ ಎಂದು ತಿಳಿಸಿದರು.

ತ್ಯಾಗರಾಜಯರ ಜಯಂತಿ ಅಂಗವಾಗಿ ಕೋಲಾರ ಶೃಂಗೇರಿ ಶ್ರೀಶಂಕರ ಮಠದದಲ್ಲಿ ಶ್ರೀಶಂಕರ ಜಯಂತಿ ಮತ್ತು ಶ್ರೀತ್ಯಾಗರಾಜ ಸ್ವಾಮಿಗಳ ಜಯಂತಿಯ ಅಂಗವಾಗಿ ಬೆಂಗಳೂರಿನ ವಿದ್ವಾನ್ ರವಿಶಂಕರರವ ಶರ್ಮರ ನೇತೃತ್ವದಲ್ಲಿ ಪಂಚರತ್ನ ಕೀರ್ತನೆಗಳ ಗಾಯನ, ಇದಕ್ಕೂ ಮುನ್ನಾ ಸ್ಥಳೀಯ ಕಲಾವಿದರಾದ ಬ್ರಹ್ಮೇಂದ್ರ, ಮಂಜುಳಾ ಕೀರ್ತನೆಗಳು ಜನಮನ ಸೂರೆಗೊಂಡಿತು.

ಕಾರ್ಯಕ್ರಮದಲ್ಲಿ ಶಂಕರಸೇವಾ ಸಮಿತಿ ಅಧ್ಯಕ್ಷ ಡಾ.ಜಯರಾಂ, ಕಾರ್ಯಾಧ್ಯಕ್ಷ ಸಿ.ಪಿ.ವಿಷ್ಣು, ಜಿ.ಎಸ್. ಶ್ರೀಕಂಠನ್, ಎ.ಶ್ರೀವತ್ಸ, ಎಸ್.ಕೆ.ಉಮೇಶ್, ಪ್ರಸಾದ್ ಮತ್ತಿತರರಿದ್ದು, ಸಹಕಾರ್ಯದರ್ಶಿ ವರುಣ್ ವಂದಿಸಿದರು.

## ಮಹಿಳಾ ವಿಧೇಯಕಕ್ಕೆ ಸೋಲು: ಬಿಜೆಪಿ ಪ್ರತಿಭಟನೆ

ಬಾಗೇಪಲ್ಲಿ

ಕೇಂದ್ರ ಮಹಿಳಾ ಮೀಸಲಾತಿ ವಿಧೇಯಕಕ್ಕೆ ಲೋಕಸಭೆಯಲ್ಲಿ ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳ ಕುತಂತ್ರದಿಂದ ಸೋಲಿಸಿದ ಹಿನ್ನೆಲೆಯಲ್ಲಿ ಇಂದು ಪಟ್ಟಣದ ಬಸ್ ನಿಲ್ದಾಣದಲ್ಲಿ ಬಿಜೆಪಿ ಪಕ್ಷದಿಂದ ಮಾನವಸರಪಳಿ ನಿರ್ಮಿಸಿ ಪ್ರತಿಭಟಿಸಿದರು.




ಈ ಸಂದರ್ಭದಲ್ಲಿ ಬಾಗೇಪಲ್ಲಿ ಮಂಡಲಾಧ್ಯಕ್ಷ ಆರ್. ಪ್ರತಾಪ್ ಮಾತನಾಡುತ್ತಾ, ಬಾಗೇಪಲ್ಲಿ ಮಂಡಲದಲ್ಲಿ ಜಿಲ್ಲಾಧ್ಯಕ್ಷ ಸೀಕಲ್ ರಾಮಚಂದ್ರೇಗೌಡ ರವರ ಆದೇಶದಂತೆ ಮಹಿಳಾ ವಿಧೇಯಕದ ವಿಚಾರ, ಕಾಂಗ್ರೆಸ್ ಪಕ್ಷದ ವಿರುದ್ಧ ಪ್ರತಿಭಟನೆ ಹಮ್ಮಿಕೊಳ್ಳಲಾಗಿದ್ದು, ಸ್ವಾತಂತ್ರ್ಯ ಬಂದು ಸುಮಾರು 79 ವರ್ಷಗಳು ಗತಿಸಿದೆ, ಅದರಲ್ಲಿ ಸುಮಾರು 65 ವರ್ಷಗಳು ಕಾಂಗ್ರೆಸ್ ರಾಜ್ಯಭಾರ ಮಾಡಿದೆ. ಈ ಅವಧಿಯಲ್ಲಿ ದಲಿತಪರ, ಮಹಿಳೆಯರ ಪರ ಎಂದು ಹೇಳಿಕೊಂಡು ಬರುತ್ತಿದ್ದ ಕಾಂಗ್ರೆಸ್ ಪಕ್ಷ ಪದೇ ಪದೇ ಮಹಿಳಾ ವಿಧೇಯಕಕ್ಕೆ ಸೋಲನ್ನು ಉಂಟು ಮಾಡುತ್ತಿದೆ.

ಮಹಿಳೆಯರ ಏಳಿಗೆಯಾಗದ ಹೊರತು ದೇಶದ ಏಳಿಗೆ ಅಸಾಧ್ಯ ಎಂಬ ದೃಢ ಸಂಕಲ್ಪದಲ್ಲಿ ನಂಬಿಕೆಯಿರುವ ಬಿಜೆಪಿ ಪಕ್ಷ ಈ ದೇಶದ ಮಹಿಳೆಯರಿಗೆ ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ 33% ಮಹಿಳಾ ಮೀಸಲಾತಿ ಬೇಕಾಗಿದ್ದು, ಅದು ಅವರ ಹಕ್ಕಾಗಿದೆ, ಈ ಹಿನ್ನೆಲೆಯಲ್ಲಿ ಅದು ಸಂಸತ್ತಿನಲ್ಲಿ ಮಹಿಳಾ ವಿಧೇಯಕವನ್ನು ಮಂಡನೆ ಮಾಡಿದಾಗ, ಕಾಂಗ್ರೆಸ್ ಮತ್ತು ಅದರ ಮಿತ್ರ ಪಕ್ಷಗಳು ಇದನ್ನು ಮೊದಲ ಬಾರಿಗೆ ಅಲ್ಲ, ಪದೇ ಪದೇ ಸೋಲಿಸಿ ದ್ರೋಹ ಬಗೆದಿವೆ. ಅವರ ಮನಸ್ಥಿತಿ ಮಹಿಳೆಯರ ಹಿತಾಸಕ್ತಿಗಾಗಿ ಅಥವಾ ದೇಶದ ಹಿತಾಸಕ್ತಿಗಾಗಿ ಅಲ್ಲ, ನಾರಿಶಕ್ತಿಗೆ ಈ ಅವಮಾನ ಮಾಡಲಾಗಿದೆ. ಈ ಪರಿಸ್ಥಿತಿ ಈಗೆ ಇರುವುದಿಲ್ಲ, ಮುಂದಿನ ದಿನಗಳಲ್ಲಿ ಭಾರತೀಯ ಜನತಾಪಾರ್ಟಿ ಬಹುಮತದಿಂದ ಅಧಿಕಾರಕ್ಕೆ ಬರಲಿದೆ, ಆಗ ಮಹಿಳಾ ಮೀಸಲಾತಿ ಮಸೂದೆ, ಕ್ಷೇತ್ರ ಪುನರ್ ವಿಂಗಡನೆ ಮಸೂದೆ, ಕೇಂದ್ರಾಡಳಿತ ಪ್ರದೇಶಗಳ ಕಾನೂನು ತಿದ್ದುಪಡಿ ಮಸೂದೆಯನ್ನು ಅನುಷ್ಠಾನ ಮಾಡಲಾಗುವುದು ಎಂದರು.

ಪತ್ರಕರ್ತರು ಕೇಳಿದ ಪ್ರಶ್ನೆಗೆ ಉತ್ತರಿಸುತ್ತಾ, ನಮ್ಮಲ್ಲಿ ಯಾವುದೇ ಗೊಂದಲವಿಲ್ಲ, ಮುಂದಿನ ವಿಧಾನಸಭಾ ಚುನಾವಣೆಗೆ ಪಕ್ಷ ಯಾರಿಗೂ ಟಿಕೇಟ್ ನೀಡುತ್ತದೋ, ಅವರ ಗೆಲುವಿಗೆ ಶ್ರಮಿಸುತ್ತೇವೆ, ಕಳೆದ ವಿಧಾನಸಭಾ ಚುನಾವಣೆಯಲ್ಲಿ ಮುನಿರಾಜು ಸ್ಪರ್ಧಿಸಿ, 64 ಸಾವಿರ ಮತಗಳನ್ನು ಪಡೆದು, ಪರಾಜಿತರಾದರು, ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಮುನಿರಾಜು ಗೆದ್ದು, ಶಾಸಕರಾಗುವುದು ಬಹುತೇಕ ಖಚಿತ ಎಂದರು.

## ಕ್ಷಮೆಯಾಚಿಸಿದ ಸಂಜಯ್‌ದತ್

ನವದೆಹಲಿ

ಸರ್ಕೆ ಸೆರಗ ಸರ್ಕೆ ಹಾಡಿನ ವಿವಾದಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ಮಹಿಳಾ ಆಯೋಗದ ಮುಂದೆ ವಿಚಾರಣೆಗೆ ಹಾಜರಾದ ನಟ ಸಂಜಯ್ ದತ್ ಕ್ಷಮೆಯಾಚಿಸಿ, ಬುಡಕಟ್ಟು ಸಮುದಾಯದ 50 ಹುಡುಗಿಯರ ಶಿಕ್ಷಣಕ್ಕೆ ಧನ ಸಹಾಯ ಮಾಡುವುದಾಗಿ ತಿಳಿಸಿದ್ದಾರೆ.

ಕೆಡಿ–ದಿ ಡೆವಿಲ್ ಸಿನಿಮಾ ಸರ್ಕೆ ಸೆರಗ ಸರ್ಕೆ ಹಾಡಿಗೆ ವಿರೋಧ ವ್ಯಕ್ತವಾದ ಹಿನ್ನೆಲೆ ನಟ ಸಂಜಯ್ ದತ್ ಅವರಿಗೆ ರಾಷ್ಟ್ರೀಯ ಮಹಿಳಾ ಆಯೋಗದ ಸಮನ್ಸ್ ಜಾರಿ ಮಾಡಿತ್ತು. ಈ ಹಿನ್ನೆಲೆ ಇಂದು ವಿಚಾರಣೆಗೆ ಹಾಜರಾಗಿದ್ದರು. ಈ ವೇಳೆ ಆಯೋಗದ ಮುಂದೆ ಕ್ಷಮೆಯಾಚಿಸಿ, ಬುಡಕಟ್ಟು ಸಮುದಾಯದ 50 ಹುಡುಗಿಯರ ಶಿಕ್ಷಣಕ್ಕೆ ಧನ ಸಹಾಯ ಮಾಡುವುದಾಗಿ ಭರವಸೆ ನೀಡಿದ್ದಾರೆ.

ಮುಂಬರುವ ಶೈಕ್ಷಣಿಕ ವರ್ಷಕ್ಕೆ ಮಹಾರಾಷ್ಟ್ರದ ನಾಗ್ಪುರದಲ್ಲಿರುವ ಬುಡಕಟ್ಟು ಸಮುದಾಯಗಳ 50 ಹುಡುಗಿಯರ ಶಿಕ್ಷಣಕ್ಕೆ ಧನ ಸಹಾಯ ಮಾಡುತ್ತೇನೆ. ಮುಂದಿನ ದಿನಗಳಲ್ಲಿ ನಟನೆಯ ಸಮಯದಲ್ಲಿ ಮಹಿಳೆಯರು, ಮಕ್ಕಳು ಅಥವಾ ಯಾವುದೇ ವ್ಯಕ್ತಿಯನ್ನು ಅಗೌರವಗೊಳಿಸದಂತೆ ನೋಡಿಕೊಳ್ಳುತ್ತೇನೆ ಎಂದಿದ್ದಾರೆ. ಇದೇ ವೇಳೆ ಹಾಡಿನ ಸಾಹಿತ್ಯ ರಚನೆಯಲ್ಲಿ ನನ್ನ ಪಾತ್ರವಿಲ್ಲ. ಅನುವಾದ, ಸಂಯೋಜನೆ ಬಗ್ಗೆ ನನಗೆ ಯಾವುದೇ ಪೂರ್ವ ಜ್ಞಾನವಿರಲಿಲ್ಲ ಎಂದು ತಿಳಿಸಿದ್ದಾರೆ.

## ಏ.30ರಂದು ಶ್ರೀ ನರಸಿಂಹ ಜಯಂತಿ

ತುಮಕೂರು

ತುಮಕೂರು ತಾಲ್ಲೂಕು ಊರ್ಡಿಗೆರೆ ಹೋಬಳಿ ದೇವರಾಯನದುರ್ಗದ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನದಲ್ಲಿ ಏಪ್ರಿಲ್ 30ರಂದು "ಶ್ರೀ ನರಸಿಂಹ ಜಯಂತಿ" ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಶ್ರೀ ನರಸಿಂಹ ಜಯಂತಿ ಅಂಗವಾಗಿ ಶ್ರೀ ಭೋಗ ಮತ್ತು ಯೋಗ ನರಸಿಂಹಸ್ವಾಮಿ ಹಾಗೂ ಅಮ್ಮನವರಿಗೆ ವಿಶೇಷ ಹೂವಿನ ಅಲಂಕಾರ, ಬೆಳಿಗ್ಗೆ 8 ಗಂಟೆಗೆ ಅಭಿಷೇಕ, 10 ಗಂಟೆಗೆ ಮಹಾಮಂಗಳಾರತಿ ಪೂಜಾ ಕಾರ್ಯಕ್ರಮಗಳು ನಡೆಯಲಿವೆ.

ಅಂದು ಬೆಳಿಗ್ಗೆ 10 ಗಂಟೆಗೆ ದೇವರಾಯನದುರ್ಗ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನ ಹಾಗೂ ಪಂಡಿತನಹಳ್ಳಿ ಟಿ.ವಿ.ಎಸ್. ಇವರ ಸಹಯೋಗದಲ್ಲಿ ಹಾಲೇನಹಳ್ಳಿ ಶ್ರೀ ಮಂಜುನಾಥ ಹರಿಕಥೆ ವಿದ್ವಾಂಸರಿಂದ ಹರಿಕಥೆ ಕಾರ್ಯಕ್ರಮ ಹಾಗೂ ಮಧ್ಯಾಹ್ನ 12 ಗಂಟೆಗೆ ಶ್ರೀ ಸ್ವಾಮಿಯವರಿಗೆ ಹೂವಿನ ದಿವ್ಯಾಲಂಕೃತ ಕೈ ರಥದಲ್ಲಿ ಬೆಳ್ಳಿಯ ಗರುಡ ವಾಹನೋತ್ಸವ ಜರುಗಲಿದೆ.

ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪೂಜಾ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಶ್ರೀ ಸ್ವಾಮಿಯ ಕೃಪೆಗೆ ಪಾತ್ರರಾಗಬೇಕೆಂದು ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿ ಸುನೀಲ್ ಕುಮಾರ್ ಎಸ್.ಟಿ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭೂಸ್ವಾಧೀನ ವಿರೋಧ: ರೈತರ ಹೋರಾಟ 42ನೇ ದಿನಕ್ಕೆ

ಚಿಕ್ಕಬಳ್ಳಾಪುರ

ಜಂಗಮಕೋಟೆ ಕೈಗಾರಿಕಾ ವಲಯ ನಿರ್ಮಾಣಕ್ಕಾಗಿ ಕೃಷಿ ಭೂಮಿಯನ್ನು ಬಳಸುವುದಕ್ಕೆ ವಿರೋಧವಾಗಿ ರೈತರು ನಡೆಸುತ್ತಿರುವ ಅನಿರ್ದಿಷ್ಟಾವಧಿ ಹೋರಾಟ 42ನೇ ದಿನಕ್ಕೆ ಕಾಲಿಟ್ಟಿದೆ. "ನಮ್ಮ ಭೂಮಿ ನಮ್ಮ ಹಕ್ಕು, ಯಾವುದೇ ಕಾರಣಕ್ಕೂ ಭೂಮಿ ಕೊಡಲ್ಲ" ಎಂದು ರೈತರು ಘೋಷಣೆ ಕೂಗಿ ಜಿಲ್ಲಾಡಳಿತ ಭವನದ ಮುಂದೆ ಧರಣಿ ಮುಂದುವರಿಸಿದ್ದಾರೆ.

ಹೋರಾಟದ ಭಾಗವಾಗಿ, ರೈತರು ದಿಢೀರನೆ ಬೆಂಗಳೂರಿನ ಡಾಲರ್ಸ್ ಕಾಲೋನಿಯಲ್ಲಿರುವ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಸಿ. ಸುಧಾಕರ್ ಅವರ ಗೃಹ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು. ಸುಮಾರು 40 ದಿನಗಳಿಂದ ಧರಣಿ ನಡೆಸುತ್ತಿದ್ದರೂ ಸಚಿವರು ರೈತರೊಂದಿಗೆ ಮಾತುಕತೆ ನಡೆಸಿಲ್ಲ ಎಂಬ ಆರೋಪದೊಂದಿಗೆ ಜಂಗಮಕೋಟೆ ಹೋಬಳಿಯ 13 ಗ್ರಾಮಗಳ ರೈತರು ಮತ್ತು ರೈತ ಮಹಿಳೆಯರು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯ ಕಾರ್ಯಾಧ್ಯಕ್ಷ ಭಕ್ತರಹಳ್ಳಿ ಬೈರೇಗೌಡ ಮಾತನಾಡಿ, ಶಿಡ್ಲಘಟ್ಟ ತಾಲೂಕಿನ ಜಂಗಮಕೋಟೆ ಹೋಬಳಿಯ 13 ಗ್ರಾಮಗಳಲ್ಲಿ 2823 ಎಕರೆ ಫಲವತ್ತಾದ ಕೃಷಿ ಭೂಮಿಯನ್ನು ಕೆಐಎಡಿಬಿ ಮೂಲಕ ಸ್ವಾಧೀನಪಡಿಸಿಕೊಳ್ಳುವ ಕ್ರಮಕ್ಕೆ ವಿರೋಧವಾಗಿ ಮಾರ್ಚ್ 16ರಿಂದ ಹಗಲು–ರಾತ್ರಿ ನಿರಂತರ ಹೋರಾಟ ನಡೆಯುತ್ತಿದೆ ಎಂದು ಹೇಳಿದರು. ರೈತರ ಒಪ್ಪಿಗೆ ಇಲ್ಲದೆ ಭೂಮಿ ವಶಪಡಿಸಿಕೊಳ್ಳಲಾಗದು ಎಂದು ಜಿಲ್ಲಾಧಿಕಾರಿಗಳು ಹೇಳಿದ್ದರೂ, ಈಗಾಗಲೇ ಭೂಮಿಗೆ ಬೆಲೆ ನಿಗದಿ ಮಾಡುವ ನೋಟಿಸ್ ನೀಡಿರುವುದು ವಿರೋಧಾಭಾಸವಾಗಿದೆ ಎಂದು ಆರೋಪಿಸಿದರು.

ಅನೇಕ ತಲೆಮಾರುಗಳಿಂದ ಕೃಷಿಯನ್ನೇ ನಂಬಿಕೊಂಡಿರುವ ರೈತರಿಂದ ಭೂಮಿಯನ್ನು ಕಸಿದುಕೊಳ್ಳುವ ಪ್ರಯತ್ನವನ್ನು ಯಾವ ಕಾರಣಕ್ಕೂ ಒಪ್ಪುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು. ಕೆಐಎಡಿಬಿ ಬಳಿ ಈಗಾಗಲೇ ಬಳಕೆಯಾಗದೇ ಇರುವ ಭೂಮಿ ಸಾಕಷ್ಟು ಇದ್ದರೂ, ಮತ್ತಷ್ಟು ಫಲವತ್ತಾದ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಮುಂದಾಗಿರುವುದೇಕೆ ಎಂದು ಪ್ರಶ್ನಿಸಿದರು.

ಸಚಿವರು ಹೊರರಾಜ್ಯದಲ್ಲಿರುವ ಹಿನ್ನೆಲೆಯಲ್ಲಿ ಅವರ ಆಪ್ತ ಕಾರ್ಯದರ್ಶಿ ಮೂಲಕ ಮಾಹಿತಿ ನೀಡಲಾಗಿದ್ದು, ವಾಪಸ್ಸಾದ ಬಳಿಕ ರೈತರೊಂದಿಗೆ ಮಾತುಕತೆ ನಡೆಸುವುದಾಗಿ ಡಾ. ಎಂ.ಸಿ. ಸುಧಾಕರ್ ದೂರವಾಣಿ ಮೂಲಕ ಭರವಸೆ ನೀಡಿದರು. ಇದರಿಂದ ರೈತರು ಗೃಹ ಕಚೇರಿ ಮುತ್ತಿಗೆ ಹಿಂತೆಗೆದುಕೊಂಡರು. ನಂತರ ಪೊಲೀಸರು ಪ್ರತಿಭಟನಾಕಾರರನ್ನು ಠಾಣೆಗೆ ಕರೆದೊಯ್ದು ಸಹಿ ಪಡೆದು ಬಿಡುಗಡೆ ಮಾಡಿದರು.

# ‘ಅಧಿಕಾರಿಗಳು ಸ್ಪಂದನಾಶೀಲರಾಗಿದ್ದರೆ ಯಶಸ್ಸು ಖಚಿತ’

ಚಿಕ್ಕಬಳ್ಳಾಪುರ

ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿ ಸ್ಥಳೀಯ ಜನಪ್ರತಿನಿಧಿಗಳೊಂದಿಗೆ ಉತ್ತಮ ಬಾಂಧವ್ಯ ಹೊಂದಿ, ಸ್ಪಂದನಾಶೀಲತೆಯಿಂದ ಕಾನೂನುಬದ್ಧವಾಗಿ ಕೆಲಸ ಮಾಡಿದರೆ ಯಶಸ್ಸು ಸಾಧಿಸಲು ಸಾಧ್ಯವೆಂದು ಜಿಲ್ಲಾಧಿಕಾರಿ ಜಿ.ಪ್ರಭು ಹೇಳಿದರು.

ಜಿಲ್ಲಾಡಳಿತ ಭವನದ ಆಡಿಟೋರಿಯಂನಲ್ಲಿ ನಡೆದ ರಾಷ್ಟ್ರೀಯ ಪಂಚಾಯತ್ ರಾಜ್ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಲಕ್ಷಾಂತರ ಸ್ವಾತಂತ್ರ್ಯ ಹೋರಾಟಗಾರರ ಬಲಿದಾನದ ಫಲವಾಗಿ ನಾವು ಇಂದು ಸ್ವಾತಂತ್ರ್ಯದ ಜೀವನ ನಡೆಸುತ್ತಿದ್ದೇವೆ. ಎಲ್ಲರಿಗೂ ಸಮಾನ ಅವಕಾಶಗಳು ಸಿಗಬೇಕು ಎಂಬುದು ಅವರ ಆಶಯವಾಗಿದ್ದು, ಪಂಚಾಯತ್ ರಾಜ್ ಕಾಯ್ದೆಯಡಿ ನಡೆಯುತ್ತಿರುವ ಕೆಲಸಗಳು ಆ ದಿಕ್ಕಿನಲ್ಲಿ ಮಹತ್ವ ಪಡೆದಿವೆ ಎಂದು ಹೇಳಿದರು.



ಗ್ರಾಮ ಪಂಚಾಯಿತಿಗಳು ಸ್ಥಳೀಯ ಸರ್ಕಾರಗಳಾಗಿ ಕಾರ್ಯನಿರ್ವಹಿಸುತ್ತಿದ್ದು, ತಮ್ಮ ವ್ಯಾಪ್ತಿಯಲ್ಲಿನ ಸರ್ಕಾರಿ ಆಸ್ಪತ್ರೆಗಳು, ಶಾಲೆಗಳು, ಕಾಲೇಜುಗಳು ಹಾಗೂ ಇತರ ಸಾರ್ವಜನಿಕ ಸಂಸ್ಥೆಗಳ ಮೇಲ್ವಿಚಾರಣೆಯನ್ನು ಪರಿಣಾಮಕಾರಿಯಾಗಿ ನಡೆಸುತ್ತಿವೆ. ಜಿಲ್ಲೆಯ ಎಲ್ಲಾ ಹಂತದ ಜನಪ್ರತಿನಿಧಿಗಳ ಸಹಕಾರದಿಂದ ತೆರಿಗೆ ವಸೂಲಿಯಲ್ಲಿ ಎಲ್ಲಾ ಗ್ರಾಮ ಪಂಚಾಯಿತಿಗಳು ಶೇ. 100 ಸಾಧನೆ ಮಾಡಿ ರಾಜ್ಯದಲ್ಲಿ ದ್ವಿತೀಯ ಸ್ಥಾನ ಪಡೆದಿವೆ. ಗುಣಮಟ್ಟದ ಆಡಳಿತ ಸೇವೆಗಳನ್ನು ಒದಗಿಸುವ ಮೂಲಕ ಪಂಚ ತಂತ್ರ ವ್ಯವಸ್ಥೆಯಲ್ಲಿ ರಾಜ್ಯದಲ್ಲಿ ನಾಲ್ಕನೇ ಸ್ಥಾನ ಗಳಿಸಲಾಗಿದೆ ಎಂದು ತಿಳಿಸಿದರು.

ವಿಶೇಷ ಕಂದಾಯ ಗ್ರಾಮ ಅಭಿಯಾನ ಎರಡರಡಿ ಜಿಲ್ಲೆ ಮಹತ್ವದ ಸಾಧನೆಯತ್ತ ಸಾಗುತ್ತಿದೆ. ರಾಮನಗರ ಜಿಲ್ಲೆ ಮೂವತ್ತು ಸಾವಿರ ಹಕ್ಕುಪತ್ರ ವಿತರಣೆಗೆ ಕ್ರಮ ಕೈಗೊಂಡಿದ್ದು, ಚಿಕ್ಕಬಳ್ಳಾಪುರ ಜಿಲ್ಲೆ ಮುಂದಿನ ಹತ್ತು ತಿಂಗಳಲ್ಲಿ ಒಂದು ಲಕ್ಷ ನಾಲ್ಕು ಸಾವಿರ ಹಕ್ಕುಪತ್ರಗಳನ್ನು ವಿತರಿಸಲು ಕಾರ್ಯೋನ್ಮುಖವಾಗಿದೆ ಎಂದರು.

ಈ ಸಾಧನೆಗೆ ಶ್ರಮಿಸುತ್ತಿರುವ ಕಂದಾಯ ಇಲಾಖೆ ಅಧಿಕಾರಿಗಳು ಹಾಗೂ ಪಂಚಾಯತ್ ರಾಜ್ ವ್ಯವಸ್ಥೆಯಡಿ ಕಾರ್ಯನಿರ್ವಹಿಸುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ಕರವಸೂಲಿಗಾರರು, ಜಲಗಾರರು, ಗ್ರಂಥಪಾಲಕರು ಹಾಗೂ ಡಿ ದರ್ಜೆ ನೌಕರರನ್ನು ಅಭಿನಂದಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ವೈ. ನವೀನ್ ಭಟ್ ಮಾತನಾಡಿ, ಕಳೆದ ಸಾಲಿಗಿಂತ ಈ ಬಾರಿ ಜಿಲ್ಲೆಯ ಗ್ರಾಮ ಪಂಚಾಯಿತಿಗಳಿಂದ ಒಂಬತ್ತು ಕೋಟಿ ರೂ. ಹೆಚ್ಚುವರಿ ತೆರಿಗೆ ಸಂಗ್ರಹವಾಗಿದೆ. ಈ ಹಣವನ್ನು ಬೀದಿ ದೀಪ, ಕುಡಿಯುವ ನೀರು ಪೂರೈಕೆ, ಚರಂಡಿ ಸ್ವಚ್ಛತೆ ಸೇರಿದಂತೆ ಸ್ಥಳೀಯ ಅಗತ್ಯಗಳಿಗೆ ಬಳಸಲಾಗುತ್ತಿದ್ದು, ಅನುದಾನದ ಕೊರತೆಯನ್ನು ನೀಗಿಸಲು ನೆರವಾಗಿದೆ ಎಂದರು. ಮುಂದಿನ ದಿನಗಳಲ್ಲಿಯೂ ಇದೇ ರೀತಿಯ ಕಾರ್ಯಕ್ಷಮತೆಯನ್ನು ಮುಂದುವರೆಸುವಂತೆ ಅಧಿಕಾರಿಗಳಿಗೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಉತ್ತಮ ಸಾಧನೆ ತೋರಿದ ಗ್ರಾಮ ಪಂಚಾಯಿತಿಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ಕರವಸೂಲಿಗಾರರು, ಜಲಗಾರರು ಹಾಗೂ ಗ್ರಂಥಪಾಲಕರಿಗೆ ಸನ್ಮಾನ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಅತಿಕ್ ಪಾಷಾ, ಸಹಾಯಕ ಕಾರ್ಯದರ್ಶಿ ಮುನಿರಾಜು, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳಾದ ಆನಂದ್, ಹೊನ್ನಯ್ಯ, ಮಂಜುನಾಥ್, ಮುಖ್ಯ ಲೆಕ್ಕಾಧಿಕಾರಿ ರಘು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# 50 ಮಹಿಳೆಯರಿಗೆ ಗೌರವ ಪುರಸ್ಕಾರ

ತುಮಕೂರು

ವಿಜಯಸೇನೆಯ ಮಹಿಳಾ ಘಟಕದಿಂದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ 50 ಮಂದಿ ಸಾಧಕ ಮಹಿಳೆಯರಿಗೆ ಬೆಳವಾಡಿ ಮಲ್ಲಮ್ಮ ಪ್ರಶಸ್ತಿ ನೀಡಿ ಗೌರಿವಿಸಲಾಯಿತು.

ನಗರದ ಕನ್ನಡ ಭವನದಲ್ಲಿ ಭಾನುವಾರ ಮಹಿಳಾ ದಿನಾಚರಣೆ ಅಂಗವಾಗಿ ವಿಜಯಸೇನೆಯ ಜಿಲ್ಲಾ ಮಹಿಳಾ ಘಟಕ ಏರ್ಪಡಿಸಿದ್ದ ಬೆಳವಾಡಿ ಮಲ್ಲಮ್ಮ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಶಿಕ್ಷಕಿಯರು, ವೈದ್ಯರು, ಪೊಲೀಸರು, ಸಮಾಜ ಸೇವಕರೂ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಮಹಿಳೆಯರಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಪ್ರಾಸ್ತಾವಿಕ ನುಡಿಗಳಾನ್ನಾಡಿದ ವಿಜಯಸೇನೆ ರಾಜ್ಯಾಧ್ಯಕ್ಷ ಹೆಚ್.ಎನ್. ದೀಪಕ್, ಭಾರತೀಯ ಸಂಸ್ಕೃತಿಯಲ್ಲಿ ಮಹಿಳೆಗೆ ವಿಶೇಷ ಗೌರವವಿದೆ. ಮಹಿಳೆಯರು ತಮ್ಮಲ್ಲಿರುವ ಶಕ್ತಿಯನ್ನು ಗುರುತಿಸಿಕೊಂಡು ಸಮಾಜದಲ್ಲಿ ಮುಖ್ಯವಾಹಿನಿಗೆ ಬರಬೇಕು, ಅವಕಾಶಗಳನ್ನು ಬಳಸಿಕೊಂಡು ಬೆಳೆಯಬೇಕು. ಭಾರತ ಮಾತೆ, ಕನ್ನಡ ತಾಯಿ ಭುವನೇಶ್ವರಿ, ಹೆತ್ತ ತಾಯಿ, ಹೊತ್ತ ಭೂಮಿಯನ್ನು ಹೆಣ್ಣಿನ ರೂಪದ ದೇವರೆಂದು ಪೂಜಿಸಿ ಗೌರವಿಸುವ ಸಂಸ್ಕೃತಿ ನಮ್ಮದು. ಇಂತಹ ವಿಶೇಷ ಆಚಾರ ವಿಚಾರಗಳನ್ನು ಹೊಂದಿರುವ ಭಾರತೀಯ ಸಂಸ್ಕೃತಿಯನ್ನು ತಮ್ಮ ಮಕ್ಕಳಿಗೆ ಪರಿಚಯಿಸುವ ಮೂಲಕ ಉಳಿಸಿ, ಬೆಳೆಸುವ ಜವಾಬ್ದಾರಿ ಮಹಿಳೆಯರ ಮೇಲಿದೆ. ಮಹಿಳೆಯರನ್ನು ಗೌರವಿಸುವ ಕೆಲಸವನ್ನು ವಿಜಯಸೇನೆ ಮಾಡುತ್ತಾ ಬಂದಿದೆ. 200 ಮಹಿಳಾ ಸೈನಿಕರ ಪಡೆ ಕಟ್ಟಿ ಮರಾಠರ ವಿರುದ್ಧ ಹೋರಾಟ ಮಾಡಿದ ಬೆಳವಾಡಿ ಮಲ್ಲಮ್ಮನ ಶೌರ್ಯದ ಪ್ರತೀಕವಾಗಿ ವಿಜಯಸೇನೆ 5 ವರ್ಷದಿಂದ ಅವರ ಹೆಸರಿನಲ್ಲಿ ಸಾಧಕ ಮಹಿಳೆಯರಿಗೆ ಪ್ರಶಸ್ತಿ ನೀಡಿ ಉತ್ಸಾಹ ತುಂಬುವ ಕಾರ್ಯ ಮಾಡುತ್ತಿದೆ ಎಂದು ಹೆಚ್.ಎನ್. ದೀಪಕ್ ತಿಳಿಸಿದರು.

ಕರುನಾಡು ವಿಜಯಸೇನೆಯು ಹೋರಾಟದ ಜೊತೆಗೆ ಸೇವಾ ಕಾರ್ಯಗಳನ್ನು ಮಾಡಿಕೊಂಡು ಬರುತ್ತಿದೆ. ರಾಜ್ಯದ 500 ಕನ್ನಡ ಶಾಲೆಗಳಿಗೆ ಬಣ್ಣ ಹೊಡೆಸುವ ಕೆಲಸ ಆರಂಭಿಸಿ ಈಗ 130 ಶಾಲೆಗಳನ್ನು ಪೂರ್ಣಗೊಳಿಸಲಾಗಿದೆ. ಸರಳ ಸಾಮೂಹಿಕ ವಿವಾಹ, ಉದ್ಯೋಗ ಮೇಳ, ಆರೋಗ್ಯ ಶಿಬಿರ, ಉತ್ತಮ ಶಿಕ್ಷಕರಿಗೆ ಗೌರವಾರ್ಪಣೆಯಂತಹ ಕಾರ್ಯಕ್ರಮಗಳನ್ನು ವಿಜಯಸೇನೆಯಿಂದ ನಿರಂತರವಾಗಿ ಮಾಡಲಾಗುತ್ತಿದೆ ಎಂದರು.

# ಪ್ರವೇಶಾತಿ ಪಡೆಯಲು ಅರ್ಜಿ ಆಹ್ವಾನ

ಚಿಕ್ಕಬಳ್ಳಾಪುರ

ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಡಾ.ಎಪಿಜೆ ಅಬ್ದುಲ್ ಕಲಾಂ ಬಾಲಕಿಯರ ಪದವಿ ಪೂರ್ವ ವಸತಿ ಕಾಲೇಜು ಮಸ್ತೇನಹಳ್ಳಿ, ಚಿಂತಾಮಣಿ ತಾಲ್ಲೂಕು ಮತ್ತು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಪೆರೇಸಂದ್ರ, ಚಿಕ್ಕಬಳ್ಳಾಪುರ ತಾಲ್ಲೂಕು (ಉನ್ನತಿಕರಣ) ಇಲ್ಲಿಗೆ 2026-27ನೇ ಶೈಕ್ಷಣಿಕ ಸಾಲಿನ ಪ್ರಥಮ ಪಿ.ಯು.ಸಿ (ಪಿ.ಸಿ.ಎಂ.ಬಿ ಹೆಚ್.ಇ.ಬಿ.ಎ & ಸಿ.ಇ.ಬಿ.ಎ) ಪ್ರವೇಶಾತಿ ಪಡೆಯಲು ಅರ್ಹ ವಿದ್ಯಾರ್ಥಿಗಳಿಂದ https://dom.karnataka.gov.in ಲಿಂಕ್ ಮೂಲಕ ಆನ್‌ಲೈನ್ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಮೇ 16 ರೊಳಗೆ ಸಲ್ಲಿಸಬಹುದು.

ಸದರಿ ಕಾಲೇಜುಗಳಲ್ಲಿ ಶೇ.75ರಷ್ಟು ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ (ಮುಸ್ಲಿಂ, ಕ್ರೈಸ್ತ, ಜೈನ್, ಸಿಖ್, ಪಾರ್ಸಿ, ಮತ್ತು ಬೌದ್ಧ) ಹಾಗೂ ಶೇ 25ರಷ್ಟು ಹಿಂದುಳಿದ ವರ್ಗ, ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ವಿದ್ಯಾರ್ಥಿಗಳಿಗೆ ನೀಡಲಾಗುವುದು.

ಹೆಚ್ಚಿನ ಮಾಹಿತಿಗೆ ಪ್ರಾಂಶುಪಾಲರು, ಡಾ.ಎಪಿಜೆ ಅಬ್ದುಲ್ ಕಲಾಂ ಬಾಲಕಿಯರ ಪದವಿ ಪೂರ್ವ ವಸತಿ ಕಾಲೇಜು, ಮಸ್ತೇನಹಳ್ಳಿ 8095042746 & ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ (ಉನ್ನತಿಕರಣ), ಪೆರೇಸಂದ್ರ 9686200416 ಹಾಗೂ ಜಿಲ್ಲಾ ಅಲ್ಪಸಂಖ್ಯಾತರ ಅಧಿಕಾರಿಗಳ ಕಚೇರಿ, ಜಿಲ್ಲಾಡಳಿತ ಭವನ, #ಎಸ್.ಎ8, 2ನೇ ಮಹಡಿ, ಶಿಡ್ಲಘಟ್ಟ ರಸ್ತೆ, ಚಿಕ್ಕಬಳ್ಳಾಪುರ.

ದೂರವಾಣಿ:08156-277049 ಗೆ ಸಂಪರ್ಕಿಸಬಹುದೆಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅದ್ದೂರಿಯಾಗಿ ಜರುಗಿದ ಶ್ರೀ ವೀರಭದ್ರೇಶ್ವರ ಸ್ವಾಮಿ ಕೆಂಡೋತ್ಸವ

ತಿಪಟೂರು

ಶ್ರೀ ವೀರಭದ್ರೇಶ್ವರ ಮತ್ತು ಭದ್ರಕಾಳಿ ಅಮ್ಮನವರ ಜಾತ್ರಾ ಮಹೋತ್ಸವದ ಅಂಗವಾಗಿ ಜೀಕನಹಳ್ಳಿ ಗ್ರಾಮದಲ್ಲಿ ಸೋಮವಾರ ಬೆಳಿಗಿನಜಾವ ಬ್ರಾಹ್ಮಿ ಮುಹೊರ್ತದಲ್ಲಿ ಧನಂಜಯಸ್ವಾಮಿಯವರಿಂದ ಪ್ರಾರಂಭವಾದ ಗಣಪತಿ ಹೋಮ, ಗಂಗಾಪೂಜೆ, ಮಹಾರುದ್ರಾಭಿಷೇಕ, ರುದ್ರಹೋಮ, ಅಷ್ಟೋತ್ತರ ಶತನಾಮವಳಿ ಪೂಜೆ ಇನ್ನು ಮಂತಾದ ದೇವಸ್ಥಾನಗಳಿಗೆ ತಳಿರು ತೋರಣ ಕಟ್ಟಿ ಕಾರ್ಯಕ್ರಮವನ್ನು ನೆರವೇರಿಸಲಾಯಿತು.

ನಂತರ ಹೆಗ್ಗಟ್ಟ ಗ್ರಾಮದಿಂದ ಆಗಮಿಸಿದ ಶ್ರೀ ಸಪ್ತಮಾತೃಕಾದೇವಿ ಮತ್ತು ಶ್ರೀ ಮುತ್ತುರಾಯ ಸ್ವಾಮಿಯವರನ್ನು ಪ್ರಮುಖ ಭಿದಿಗಳಲ್ಲಿ ರಂಗೋಲಿ ಬಿಡಿಸಿ ಊರಿನ ಮುತ್ತೈದೆಯರೆಲ್ಲರು ಸೇರಿ ಬರಮಾಡಿಕೊಂಡರು

ಜಾತ್ರಾ ಕಾರ್ಯಕ್ರಮಕ್ಕೆ ಆಗಮಿಸಿದ ಶಾಸಕ ಶಿವಲಿಂಗೇಗೌಡ ಮಾತನಾಡಿ ಊರಿನ ದೇವಸ್ಥಾನದ ಮತ್ತು ಕ್ಷೇತ್ರದ ಅಭಿವೃದ್ದಿಗಾಗಿ ಸಮುದಾಯ ಭಯನ, ವೆಟನರಿ ಆಸ್ಪತ್ರೆ, ಇನ್ನು ಮುಂತಾದ ಸಾರ್ವಜನಿಕ ಅಭಿವೃದ್ದಯ ಕೆಲಸಗಳನ್ನು ಮಾಡಲು ಎಂದಿಗು ನಾನು ಇಂದೆ ಸರಿಯುವ ಮಾತೆ ಇಲ್ಲ ಎಂದು ಇತನುಡಿ ನುಡಿದರು.

ಶ್ರೀ ವೀರಭದ್ರೇಶ್ವರ ಸ್ವಾಮಿಯವರ ಅಡ್ಡ ಪಲ್ಲಕ್ಕಿ ಉತ್ಸವ ಮತ್ತು ವೀರಗಾಸೆ ಕುಣಿತ, ಬೆಳಗುಂಬ, ಶಿವರ, ಯಡವನಹಳ್ಳಿ ಗ್ರಾಮಸ್ಥರಿಂದ ನಂದಿಧ್ವಜ ಕುಣಿತ, ನಗಾರಿ



ವಾದ್ಯದೊಂದಿಗೆ ಊರಿನ ಪ್ರಮುಖ ಬೀದಿಗಳಲ್ಲಿ ಸಾಗಿ ಬಿಲ್ವಪತ್ರೆ ಮರವನ್ನು ಸುತ್ತರಿದು ನೆರೆದಿದ್ದ ಸಾವಿರಾರು ಭಕ್ತರೆಲ್ಲರು ಸೇರಿ ವಿಶೇಶವಾಗಿ ಅಲಂಕೃತಗೊಂಡಿದ್ದ ಹೂವಿನ ಅಲಂಕಾರವನ್ನು ಅತ್ಯಂತ ಸಡಗರ ಸಂಭ್ರಮದಿಂದ ಸುತ್ತಮುತ್ತಲಿನ ಗ್ರಾಮಸ್ಥರೆಲ್ಲರು ಕಣ್ಣುಂತುಂಬಿಕೊಂಡು ಕಾರ್ಯಕ್ರಮವನ್ನು ನೆರವೇರಿಸಿದರು.

ಮಂಗಳವಾರ ಬೆಳಿಗ್ಗೆ ಕಳಶ ಸ್ಥಾಪನೆ ಕೆಂಡೋತ್ಸವ ನಂತರ ಶ್ರೀ ಸ್ವಾಮಿಯವರ ಕೃಪೆಗೆ ಪಾರ್ತರಾಗಲು ಬಂದಿದ್ದ ಭಕ್ತರಿಗೆ ಪ್ರಸಾದ ವಿನಿಯೋಗ, ಅನ್ನಸಂತರ್ಪಣೆ ಮಾಡುವ ಮೂಲಕ ಭಜರಂಗಿ ಬಾಯ್ಸ್ ಮತ್ತು ಶ್ರೀ ವೀರಭದ್ರೇಶ್ವರ ಗೆಳೆಯರ ಬಳಗದ ಯುವಕರೆಲ್ಲರು ಸೇರಿ ಜಾತ್ರಾ ಮಹೋತ್ಸವು ಅದ್ದೂರಿಯಾಗಿ ಯಶ್ವಸ್ವಿಯಾಗಲು ಪಾತ್ರರಾದರು.

ಕಾರ್ಯಕ್ರಮದಲ್ಲಿ ಮಾಜಿ ಜಿಲ್ಲಾ ಪಂಚಾಯತ್ ಅಧ್ಯಕ್ಷ ಜ್ಯೋತಿಗಂಗಾಧರ್ ಮತ್ತು ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಜೆ ವಿ ಶಶಿಕುಮಾರ್, ಪತ್ರಕರ್ತ ಲಯನ್ ಲೋಕೇಶ್, ಹಾಸನ ಜಿಲ್ಲಾ ವೀರಶೈವ ಲಿಂಗಾಯಿತ ಸಂಘದ ಉಪಾಧ್ಯಕ್ಷ ಸಿದ್ದೇಶ್, ಪುಟ್ಟಸ್ವಾಮಿ, ತಳಲೂರು ಲೋಕೇಶ್, ಗುಡಿಗೌಡ ರೇಣುಕಯ್ಯ, ಊರಿನ ಪ್ರಮುಖರಾದ ಶಣ್ಮುಕಯ್ಯ, ಕುಮಾರ್, ಪುಟ್ಟಸ್ವಾಮಿ ಇನ್ನು ಮುಂತಾದವರನ್ನು ಕಾರ್ಯಕ್ರಮದಲ್ಲಿ ಗೌರವಿಸಿ ನಂತರ ರಸಮಂಜರಿ ಕಾರ್ಯಕ್ರಮವನ್ನು ನೆಡೆಸಿಕೊಡಲಾಯಿತು.

# ವಾಷಿಂಗ್ ಮಷಿನ್‌ಗೆ ಮಹಿಳೆ ಬಲಿ

ಬೆಂಗಳೂರು

ರಾಜ್ಯ ರಾಜಧಾನಿಯಲ್ಲಿ ಒಂದು ವಿಚಿತ್ರ ಘಟನೆಯೊಂದು ನಡೆದಿದೆ. ಇದು ಕೊಲೆಯೋ ಅಥವಾ ಆಕಸ್ಮಿಕವೋ ಎಂಬ ಅನುಮಾನಗಳು ಉಂಟಾಗಿದೆ. ಇದೀಗ ಈ ಸಾವಿನ ಸುತ್ತ ಹಲವು ಊಹಪೋಹಗಳು ಉಂಟಾಗಿದೆ. ವಾಷಿಂಗ್ ಮೆಷಿನ್ ಬಳಸುವಾಗ ವಿದ್ಯುತ್ ಸ್ಪರ್ಶಿಸಿ ಮಹಿಳೆಯೊಬ್ಬರು ಸಾವನ್ನಪ್ಪಿರುವ ಘಟನೆ ಬೆಂಗಳೂರು ಉತ್ತರ ತಾಲೂಕಿನ ಗೌಡಹಳ್ಳಿಯಲ್ಲಿ ನಡೆದಿದೆ. ಆದರೆ, ಮಗಳ ಸಾವಿನ ಹಿಂದೆ ಅಳಿಯನ ಕೈವಾಡವಿದೆ ಎಂದು ಪೋಷಕರು ಗಂಭೀರ ಶಂಕೆ ವ್ಯಕ್ತಪಡಿಸಿದ್ದಾರೆ.

# ಶಾಸಕ ಎನ್.ಎನ್. ಸುಬ್ಬಾರೆಡ್ಡಿಯವರಿಗೆ ಮಾತೃ ವಿಯೋಗ

ಬಾಗೇಪಲ್ಲಿ

ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದ ಶಾಸಕ ಎಸ್.ಎನ್. ಸುಬ್ಬಾರೆಡ್ಡಿಯವರ ತಾಯಿ ಆದಿಲಕ್ಷ್ಮಮ್ಮನವರು ಶನಿವಾರ ಸಂಜೆ 5 ಗಂಟೆ ಸಮಯದಲ್ಲಿ ವಿಧಿವಶರಾದರು.

ಅವರ ಪಾರ್ಥಿವ ಶರೀರವನ್ನು ಬಾಗೇಪಲ್ಲಿ ಪಟ್ಟಣದ ಗೂಳೂರು ರಸ್ತೆಯಲ್ಲಿರುವ ಶಾಸಕ ಎಸ್.ಎನ್. ಸುಬ್ಬಾರೆಡ್ಡಿಯವರ ಸ್ವಗೃಹದಲ್ಲಿ ಸಾರ್ವಜನಿಕರ ದರ್ಶನಕ್ಕೆ ಇಡಲಾಗಿತ್ತು. ಮಾಜಿ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೇಶವರೆಡ್ಡಿ, ಸೇರಿದಂತೆ ಉನ್ನತಮಟ್ಟದ ಅಧಿಕಾರಿಗಳು ಸಾರ್ವಜನಿಕರು, ಶಾಸಕರ ಬೆಂಬಲಿಗರು, ಅಂತಿಮ ದರ್ಶನ ಪಡೆದು, ದಿವಂಗತ ಆದಿಲಕ್ಷ್ಮಮ್ಮನವರ ಗುಣಗಾನ ಮಾಡಿದರು.

ನಂತರ ಶಾಸಕರ ಸ್ವಗೃಹವಾದ ಗೂಳೂರು ಹೋಬಳಿ ಚಿನಕಾಯಲಪಲ್ಲಿ ಗ್ರಾಮಕ್ಕೆ ಪಾರ್ಥಿವ ಶರೀರವನ್ನು ಸಂಸ್ಕಾರಕ್ಕಾಗಿ ತೆಗೆದುಕೊಂಡು ಹೋಗಲಾಯಿತು.

# ‘ಹಾಲಿನ ಗುಣಮಟ್ಟ ಹೆಚ್ಚಿಸಲು ಒತ್ತು’

ಚಿಕ್ಕಬಳ್ಳಾಪುರ

ಚಿಕ್ಕಬಳ್ಳಾಪುರ ಜಿಲ್ಲಾ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ವತಿಯಿಂದ ಹಾಲಿನ ಪರಿಮಾಣ ಮತ್ತು ಗುಣಮಟ್ಟ ಹೆಚ್ಚಿಸುವ ಉದ್ದೇಶದಿಂದ ಪ್ರಾದೇಶಿಕ ಸಭೆ ಹಾಗೂ ವಿವಿಧ ಸೌಲಭ್ಯಗಳ ವಿತರಣಾ ಕಾರ್ಯಕ್ರಮವನ್ನು ನಗರದ ಜಿ.ಕೆ. ಹಾಲ್‌ನಲ್ಲಿ ಆಯೋಜಿಸಲಾಯಿತು. ಇದೇ ಸಂದರ್ಭದಲ್ಲಿ ಚಿಕ್ಕಬಳ್ಳಾಪುರ ಕ್ಷೇತ್ರದ ನೂತನ ನಿರ್ದೇಶಕರಿಗೆ ಅಭಿನಂದನಾ ಸಮಾರಂಭವೂ ನಡೆಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಒಕ್ಕೂಟದ ಅಧ್ಯಕ್ಷ ಮಂಜುನಾಥ್ ರೆಡ್ಡಿ, ಅವಳಿ ಜಿಲ್ಲೆಯ ರೈತರು ಬೆಳೆ ಬೆಳೆದರೂ ಅಲ್ಪ ಲಾಭ ಪಡೆಯುತ್ತಿರುವುದು ವಾಸ್ತವವಾಗಿದ್ದು, ಬೆಳೆ ನಷ್ಟವಾದಾಗ ಸಂಕಷ್ಟಕ್ಕೆ ಸಿಲುಕುತ್ತಾರೆ ಎಂದರು. ಇಂತಹ ಸಂದರ್ಭದಲ್ಲಿ ಹೈನುಗಾರಿಕೆ ರೈತರ ಆರ್ಥಿಕ ಸ್ಥಿರತೆಗೆ ಪ್ರಮುಖವಾಗಿದ್ದು, ಗುಣಮಟ್ಟದ ಹಾಲು ಪೂರೈಕೆ ಮಾಡಿದರೆ ಸಂಘವೂ ಬೆಳೆಯುತ್ತದೆ ಮತ್ತು ರೈತರ ಆದಾಯವೂ ಹೆಚ್ಚುತ್ತದೆ ಎಂದು ಹೇಳಿದರು.




ಕೋಲಾರ ಹಾಲು ಒಕ್ಕೂಟದಿಂದ ಬೇರ್ಪಟ್ಟ ಬಳಿಕ ಚಿಕ್ಕಬಳ್ಳಾಪುರ ಹಾಲು ಒಕ್ಕೂಟದ ಬೆಳವಣಿಗೆ ಬಗ್ಗೆ ಅನುಮಾನಗಳು ವ್ಯಕ್ತವಾಗಿದ್ದವು. ಆದರೆ ಅಧಿಕಾರಿಗಳ ಸಹಕಾರದಿಂದ ಒಕ್ಕೂಟ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಅವರು ಸ್ಪಷ್ಟಪಡಿಸಿದರು. ಹೈನುಗಾರಿಕೆಯಲ್ಲಿ ತೊಡಗಿರುವ ರೈತರಿಗೆ ಅನುಕೂಲವಾಗುವ ಹಲವು ಯೋಜನೆಗಳನ್ನು ಜಾರಿಗೆ ತರುತ್ತಿದ್ದು, ಪ್ರತಿ ಲೀಟರ್ ಹಾಲಿಗೆ ಹೆಚ್ಚುವರಿ ದರ ನೀಡುವ ಮೂಲಕ ರೈತರ ಆದಾಯ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗಿದೆ ಎಂದರು.

ಅಭಿನಂದನೆ ಸ್ವೀಕರಿಸಿ ಮಾತನಾಡಿದ ನೂತನ ನಿರ್ದೇಶಕ ಭರಣಿ ವೆಂಕಟೇಶ್, ತಮ್ಮ ಆಯ್ಕೆಗೆ ಸಹಕರಿಸಿದ ಡೆಲಿಗೇಟ್ ಮತದಾರರಿಗೆ ಕೃತಜ್ಞತೆ ಸಲ್ಲಿಸಿದರು. ಹಾಲು ಉತ್ಪಾದಕರ ಹಿತದೃಷ್ಟಿಯಿಂದ ಸದಾ ಕಾರ್ಯನಿರ್ವಹಿಸುತ್ತಿದ್ದು, ಅದನ್ನೇ ಗಮನದಲ್ಲಿಟ್ಟುಕೊಂಡು ಮತ್ತೊಮ್ಮೆ ಬಹುಮತದಿಂದ ಆಯ್ಕೆ ಮಾಡಿದ್ದಾರೆ ಎಂದರು. ಸರ್ಕಾರದಿಂದ ದೊರೆಯುವ ಸೌಲಭ್ಯಗಳನ್ನು ರೈತರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ಎಪಿಎಂಸಿ ಮಾಜಿ ಅಧ್ಯಕ್ಷ ಮರಳುಕುಂಟೆ ಕೃಷ್ಣಮೂರ್ತಿ ಮಾತನಾಡಿ, ಭರಣಿ ವೆಂಕಟೇಶ್ ಅವರ ಮರು ಆಯ್ಕೆ ಸಂತೋಷ ತಂದಿದ್ದು, ರೈತರಿಗಾಗಿ ಅವರು ಮಾಡಿರುವ ಕೆಲಸಗಳೇ ಅವರಿಗೆ ಬೆಂಬಲ ತಂದಿವೆ ಎಂದು ಅಭಿಪ್ರಾಯಪಟ್ಟರು. ಅವರಂತಹ ನಾಯಕತ್ವ ಮುಂದುವರಿದರೆ ಹಾಲು ಉತ್ಪಾದಕರಿಗೆ ಇನ್ನಷ್ಟು ಅನುಕೂಲವಾಗಲಿದೆ ಎಂದರು.

ಈ ಸಂದರ್ಭದಲ್ಲಿ ನೂತನ ನಿರ್ದೇಶಕರಾದ ಅಶ್ವತ್ಥನಾರಾಯಣ ಬಾಬು, ಮಂಜುನಾಥ್ ರೆಡ್ಡಿ ಹಾಗೂ ಕೆ.ಆರ್. ರಾಜಣ್ಣ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಮಾಜಿ ಶಾಸಕರಾದ ಎಸ್. ಎಂ. ಮುನಿಯಪ್ಪ, ಕೆ. ಪಿ. ಬಚ್ಚೆಗೌಡ, ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ಶ್ರೀನಿವಾಸ ಗೌಡ, ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ರಾಮಸ್ವಾಮಿ, ಡಿಸಿಸಿ ಬ್ಯಾಂಕ್ ನಿರ್ದೇಶಕ ಮೋಹನ್ ರೆಡ್ಡಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ವಿಜಯಪುರ ಪುರಸಭೆಯಲ್ಲಿ 29 ಲಕ್ಷ 50 ಸಾವಿರ ಉಳಿತಾಯ ಬಜೆಟ್ ಮಂಡನೆ

ವಿಜಯಪುರ

ಪಟ್ಟಣದ ಪುರಸಭೆ ಸಭಾಂಗಣದಲ್ಲಿ ಪುರಸಭೆ ಅಧ್ಯಕ್ಷೆ ಎಸ್.ಭವ್ಯಾಮಹೇಶ್ ಅವರ ಅಧ್ಯಕ್ಷತೆಯಲ್ಲಿ, 2026-27 ನೇ ಸಾಲಿನ 29 ಲಕ್ಷ 50 ಸಾವಿರ ಉಳಿತಾಯ ಬಜೆಟ್ ಮಂಡನೆ ಮಾಡಲಾಯಿತು.


ಈ ಆರ್ಥಿಕ ವರ್ಷದಲ್ಲಿ, ಬಜೆಟ್ ನ ಗಾತ್ರ 61 ಕೋಟಿ 52 ಲಕ್ಷ 85 ಸಾವಿರ, ಮಂಡಿಸಿದ್ದು, 61 ಕೋಟಿ 23 ಲಕ್ಷ 35 ಸಾವಿರ ಖರ್ಚು ಕಳೆದು, 29 ಲಕ್ಷ 50 ಸಾವಿರ ಉಳಿತಾಯ ಮಾಡಲಾಗಿದೆ ಎಂದು ಅಧ್ಯಕ್ಷೆ ಎಸ್.ಭವ್ಯಾಮಹೇಶ್ ಅವರು ಓದಿದರು.

ಪುರಸಭೆಯ ನೂತನ ಕಟ್ಟಡ ನಿರ್ಮಾಣಕ್ಕೆ 6 ಕೋಟಿ, ಪೀಠೋಪಕರಣಗಳಿಗೆ 15 ಲಕ್ಷ, ಸ್ವಾಗತ ಕಮಾನು, ತಡೆಗೋಡೆಗಳ ನಿರ್ಮಾಣ, ರಸ್ತೆಬದಿ ಮಾರ್ಗ ಸೂಚಿಫಲಕಗಳ ಅಳವಡಿಕೆ ಹಾಗೂ ಸಿ.ಸಿ.ಕ್ಯಾಮಾರಾಗಳ ಅಳವಡಿಕೆಗೆ 15 ಲಕ್ಷ, ಪಾದಾಚಾರಿಗಳ ರಸ್ತೆ, ಚರಂಡಿಗಳ ಅಭಿವೃದ್ಧಿಗೆ 1 ಕೋಟಿ 30 ಲಕ್ಷ, ಬೀದಿದೀಪಗಳ ಕಾಮಗಾರಿಗಾಗಿ 8 ಲಕ್ಷ, ಮಳೆ ನೀರಿನ ಚರಂಡಿ ಕಾಮಗಾರಿಗೆ 30 ಲಕ್ಷ, ಸಾರ್ವಜನಿಕರ ಶೌಚಾಲಯಗಳ ನಿರ್ಮಾಣಕ್ಕೆ 25 ಲಕ್ಷ, ಸ್ಮಶಾನ ಅಭಿವೃದ್ಧಿಗೆ 25 ಲಕ್ಷ ಘನತ್ಯಾಜ್ಯ ವಸ್ತು ನಿರ್ವಹಣೆಗೆ 50 ಲಕ್ಷ, ನೀರು ಸರಬರಾಜು ಕಟ್ಟಡಗಳ ನಿರ್ಮಾಣ, ಯಂತ್ರೋಪಕರಣಗಳ ಖರೀದಿಗಾಗಿ 1 ಕೋಟಿ 25 ಲಕ್ಷ, ಒಳಚರಂಡಿ ಅಭಿವೃದ್ಧಿ ಕಾಮಗಾರಿಗೆ 20 ಲಕ್ಷ, ಪಾರ್ಕ್ ಅಭಿವೃದ್ಧಿಗೆ 20 ಲಕ್ಷ, ಎಸ್.ಸಿ.ಎಸ್.ಟಿ.ಓಬಿಸಿ,ಅಂಗಲವಿಕಲ ಅಭಿವೃದ್ಧಿಗಾಗಿ 10 ಲಕ್ಷ, ಅಧ್ಯಯನ ಪ್ರವಾಸ ಹಾಗೂ ಸದಸ್ಯರ ಗೌರವಧನಕ್ಕಾಗಿ 45 ಲಕ್ಷ, ಎಸ್.ಎಫ್.ಸಿ.ಯಡಿ ಬೀದಿದೀಪಗಳ ಶುಲ್ಕ ಪಾವತಿಗೆ 1. ಕೋಟಿ 50 ಲಕ್ಷ, ಎಸ್.ಎಫ್.ಸಿ.ನೀರು ಸರಬರಾಜು 4 ಕೋಟಿ, ಬೀದಿನಾಯಿಗಳ ನಿಯಂತ್ರಣಕ್ಕಾಗಿ ಸಂತಾನಹರಣ ಶಸ್ತ್ರಚಿಕಿತ್ಸೆಗಾಗಿ 30 ಲಕ್ಷ, ಮುಕ್ತಿ ವಾಹನ ಖರೀದಿಸಲು 15 ಲಕ್ಷ, ಪುರಸಭೆಗೆ ಸೇರಿದ ಕಟ್ಟಡಗಳು, ರಸ್ತೆಗಳು, ಶೌಚಾಲಯಗಳು ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳ ದುರಸ್ತಿಗಾಗಿ 4 ಕೋಟಿ 2 ಲಕ್ಷ ಮೀಸಲಿಡಲಾಗಿದೆ ಎಂದು ಬಜೆಟ್ ನಲ್ಲಿ ಓದಿದರು.

ಈ ವೇಳೆ ಮಾತನಾಡಿದ ಅವರು, ಎಲ್ಲಾ ಸದಸ್ಯರ ಸಹಕಾರದಿಂದ ಉಳಿತಾಯ ಬಜೆಟ್ ಮಂಡನೆ ಮಾಡಿದ್ದೇವೆ. ಪಟ್ಟಣದ ಅಭಿವೃದ್ಧಿಯಲ್ಲಿ, ಸಾರ್ವಜನಿಕರ ಸಂಪೂರ್ಣ ಸಹಕಾರ ಬಹಳ ಅಗತ್ಯವಾಗಿದೆ. ಕಾಲ ಕಾಲಕ್ಕೆ ಆಸ್ತಿಗಳ ತೆರಿಗೆಯನ್ನು ಪಾವತಿಸುವ ಮೂಲಕ ಅಭಿವೃದ್ಧಿಯಲ್ಲಿ ಕೈ ಜೋಡಿಸಬೇಕು ಎಂದರು.

ಮುಖ್ಯಾಧಿಕಾರಿ ವೈ.ಎನ್.ಸತ್ಯನಾರಾಯಣ, ಸದಸ್ಯರಾದ ಎಂ.ಸತೀಶ್ ಕುಮಾರ್, ವಿಮಲಾ ಬಸವರಾಜ್, ವಿ.ನಂದ ಕುಮಾರ್, ಎಂ.ಕೇಶವಪ್ಪ, ಎ.ಆರ್.ಹನೀಫುಲ್ಲಾ ಸೈಯದ್ ಎಕ್ಬಾಲ್, ಸಿ.ಎಂ.ರಾಮು, ಎಂ.ರಾಜಣ್ಣ, ಶಿಲ್ಪಾಅಜಿತ್, ಎಂ.ನಾರಾಯಣಸ್ವಾಮಿ, ಆಯಿಷಾಸೈಫುಲ್ಲಾ, ಸಲ್ಮಾ ಖಾನಂ, ಮಂಜುಳಮ್ಮಮುನಿರಾಜು, ಸುಷ್ಮಾಮಹೇಶ್, ಶ್ರೀರಾಮಣ್ಣ, ಹಾಗೂ ಅಧಿಕಾರಿಗಳು ಹಾಜರಿದ್ದರು.

# ಟ್ರಾಕ್ಟರ್-ಬೈಕ್ ಡಿಕ್ಕಿ: ಇಬ್ಬರು ಬ್ಯಾಂಕ್ ಉದ್ಯೋಗಿಗಳ ದುರ್ಮರಣ



ದೊಡ್ಡಬಳ್ಳಾಪುರ

ಟ್ರಾಕ್ಟರ್ ಹಾಗೂ ಬೈಕ್ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ ಖಾಸಗಿ ಬ್ಯಾಂಕ್ ಉದ್ಯೋಗಿಗಳಾದ ಇಬ್ಬರು ಯುವಕರು ಸಾವನ್ನಪ್ಪಿದ ಘಟನೆ ನಗರದ ಕೋರ್ಟ್ ರಸ್ತೆಯಲ್ಲಿ ಶನಿವಾರ ರಾತ್ರಿ 11 ಗಂಟೆ ಸುಮಾರಿಗೆ ನಡೆದಿದೆ.

ಮೃತರನ್ನು ಗೌರಿಬಿದನೂರು ತಾಲೂಕಿನ ನಾಮಗೊಂಡ್ಲು ನಿವಾಸಿ ನಾಗೇಶ್ (26) ಮತ್ತು ಪಾಂಡವಪುರ ತಾಲೂಕಿನ ಹರಳುಕುಪ್ಪೆ ಗ್ರಾಮದ ಮನೋಜ್ (24) ಎಂದು ಗುರುತಿಸಲಾಗಿದೆ. ಇವರು ಡಿ. ಕ್ರಾಸ್ ಸಮೀಪದ ಖಾಸಗಿ ಬ್ಯಾಂಕ್‌ನಲ್ಲಿ ಕೆಲಸ ಮಾಡುತ್ತಿದ್ದರು ಎಂದು ತಿಳಿದುಬಂದಿದೆ.

ದೊಡ್ಡಬಳ್ಳಾಪುರ ಕಡೆಯಿಂದ ಬೈಕ್‌ನಲ್ಲಿ ಬರುತ್ತಿದ್ದ ವೇಳೆ ಎದುರುಬಂದ ಟ್ರಾಕ್ಟರ್‌ಗೆ ಮುಖಾಮುಖಿ ಡಿಕ್ಕಿ ಹೊಡೆದ ಪರಿಣಾಮ ದುರ್ಘಟನೆ ಸಂಭವಿಸಿದೆ. ಅಪಘಾತದ ತೀವ್ರತೆಗೆ ಮನೋಜ್ ಸ್ಥಳದಲ್ಲೇ ಮೃತಪಟ್ಟಿದ್ದು, ಗಂಭೀರವಾಗಿ ಗಾಯಗೊಂಡ ನಾಗೇಶ್ ಆಸ್ಪತ್ರೆಗೆ ಸಾಗಿಸುವ ವೇಳೆ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಅಪಘಾತದ ವೇಳೆ ಬೈಕ್ ಸವಾರರು ಹೆಲ್ಮೆಟ್ ಧರಿಸದೇ ಇರುವುದು ಸಾವಿಗೆ ಪ್ರಮುಖ ಕಾರಣ ಎನ್ನಲಾಗುತ್ತಿದೆ. ಜೊತೆಗೆ, ರಸ್ತೆಯ ಮಧ್ಯಭಾಗದಲ್ಲಿ ದಿಬ್ಬಗಳಿಗೆ ಸೂಚನಾ ಫಲಕಗಳು ಹಾಗೂ ಸಮರ್ಪಕ ಬೀದಿ ದೀಪಗಳ ಕೊರತೆ ಇದ್ದುದರಿಂದ ಅಪಘಾತ ಸಂಭವಿಸಿದೆ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ನಗರಸಭೆ ಅಧಿಕಾರಿಗಳ ನಿರ್ಲಕ್ಷ್ಯ ಧೋರಣೆಗೆ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದು, ತಕ್ಷಣವೇ ರಸ್ತೆ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

# ವಿ.ಸೋಮಣ್ಣರಿಂದ 3 ಲಕ್ಷ ವೈಯಕ್ತಿಕ ಪರಿಹಾರ

ತಿಪಟೂರು

ಆಕಸ್ಮಿಕ ಅನಿಲ ಸೋರಿಕೆಯಿಂದ ಸಂಭವಿಸಿದ ಗ್ಯಾಸ್ ಸಿಲಿಂಡರ್ ಸ್ಫೋಟದಲ್ಲಿ ಮನೆ ಕಳೆದುಕೊಂಡ ರೈತ ಕುಟುಂಬಗಳಿಗೆ ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ಸಹಾಯಕ ರಾಜ್ಯ ಖಾತೆ ಸಚಿವ ವಿ. ಸೋಮಣ್ಣ ಭೇಟಿ ನೀಡಿ ಸಾಂತ್ವನ ಹೇಳಿದರು.

ಈ ವೇಳೆ ಎರಡು ಕುಟುಂಬಗಳಿಗೆ ತಲಾ ಒಂದು ಲಕ್ಷ ಐವತ್ತು ಸಾವಿರ ರೂಪಾಯಿಗಳಂತೆ ಒಟ್ಟು ಮೂರು ಲಕ್ಷ ರೂಪಾಯಿ ವೈಯಕ್ತಿಕ ಪರಿಹಾರ ನೀಡುವುದಾಗಿ ಘೋಷಿಸಿದರು.

ಏಪ್ರಿಲ್ 19ರಂದು ರಾತ್ರಿ ತಾಲೂಕಿನ ನೊಣವಿನಕೆರೆ ಹೋಬಳಿಯ ಮಾಟನಹಳ್ಳಿ ಗ್ರಾಮದಲ್ಲಿ ವೆಂಕಟರಮಣಗೌಡ ಹಾಗೂ ಸಣ್ಣ ತಿಮ್ಮೇಗೌಡರ ಮನೆಯಲ್ಲಿ ಅನಿಲ ಸೋರಿಕೆಯಿಂದ ಸಿಲಿಂಡರ್ ಸ್ಫೋಟ ಸಂಭವಿಸಿ ಎರಡು ಮನೆಗಳು ಸಂಪೂರ್ಣವಾಗಿ ಸುಟ್ಟು ಹೋಗಿದ್ದವು. ಈ ಅವಘಡದಲ್ಲಿ ಲಕ್ಷಾಂತರ ರೂಪಾಯಿ ಮೌಲ್ಯದ ವಸ್ತುಗಳು ನಾಶವಾಗಿದ್ದು, ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿವೆ.

ಘಟನೆ ತಿಳಿದು ಸ್ಥಳಕ್ಕೆ ಭೇಟಿ ನೀಡಿದ ಸಚಿವ ವಿ. ಸೋಮಣ್ಣ,



ಸಂತ್ರಸ್ತ ಕುಟುಂಬಗಳ ಸ್ಥಿತಿ ಪರಿಶೀಲಿಸಿ ಮಾನವೀಯ ಆಧಾರದ ಮೇಲೆ ನೆರವು ನೀಡುವುದು ನಮ್ಮ ಕರ್ತವ್ಯ ಎಂದು ಹೇಳಿದರು. ಹೆಚ್ಚಿನ ಪರಿಹಾರ ದೊರಕಿಸುವ ನಿಟ್ಟಿನಲ್ಲಿ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳ ಮಟ್ಟದಲ್ಲಿ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದ ಅವರು, ಬೆಸ್ಕಾಂ, ತಹಸೀಲ್ದಾರ್ ಹಾಗೂ ಪೊಲೀಸ್ ಇಲಾಖೆಗಳು ವಸ್ತುನಿಷ್ಠ ವರದಿ ಸಲ್ಲಿಸಬೇಕು ಎಂದು ಸೂಚಿಸಿದರು. ಕೇಂದ್ರದ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿ ಸೂಕ್ತ ಪರಿಹಾರ ಒದಗಿಸಲು ಪ್ರಯತ್ನಿಸುವುದಾಗಿ ತಿಳಿಸಿದರು.ಬಿಜೆಪಿ ಮುಖಂಡ ಶಶಿಕಿರಣ್ ಮುಖಾಂತರ ಮುಂದಿನ ದಿನವೇ ವೈಯಕ್ತಿಕ ಪರಿಹಾರದ ಚೆಕ್ ಸಂತ್ರಸ್ತ ಕುಟುಂಬಗಳಿಗೆ ತಲುಪಿಸಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಮೋಹನ್ ಕುಮಾರ್, ಬೆಸ್ಕಾಂ ವಿಭಾಗೀಯ ಅಧೀಕ್ಷಕ ಸೋಮಶೇಖರ್ ಗೌಡ, ವೃತ್ತ ನಿರೀಕ್ಷಕ ಚಂದ್ರಶೇಖರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಬಿಜೆಪಿ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಏಪ್ರಿಲ್ 19ರಂದು ರಾತ್ರಿ ತಾಲೂಕಿನ ನೊಣವಿನಕೆರೆ ಹೋಬಳಿಯ ಮಾಟನಹಳ್ಳಿ ಗ್ರಾಮದಲ್ಲಿ ವೆಂಕಟರಮಣಗೌಡ ಹಾಗೂ ಸಣ್ಣ ತಿಮ್ಮೇಗೌಡರ ಮನೆಯಲ್ಲಿ ಅನಿಲ ಸೋರಿಕೆಯಿಂದ ಸಿಲಿಂಡರ್ ಸ್ಫೋಟ ಸಂಭವಿಸಿ ಎರಡು ಮನೆಗಳು ಸಂಪೂರ್ಣವಾಗಿ ಸುಟ್ಟು ಹೋಗಿದ್ದವು. ಈ ಅವಘಡದಲ್ಲಿ ಲಕ್ಷಾಂತರ ರೂಪಾಯಿ ಮೌಲ್ಯದ ವಸ್ತುಗಳು ನಾಶವಾಗಿದ್ದು, ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿವೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy